ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ಆಗಸ್ಟ್ 4 ಭಾನುವಾರ 2024

ಸಂಪುಟ: 45 | ಸಂಚಿಕೆ: 110 | ಪುಟಗಳು: 12

₹4

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, *website: www.mysurumithra.com*

ಮೈಸೂರು ಮಿತ್ರ


ಚಾಮರಾಜ ವಿಧಾನಸಭಾ ಕ್ಷೇತ್ರದ ಜನಪ್ರಿಯ ಶಾಸಕರು
ಸನ್ಮಾನ್ಯ ಶ್ರೀ
ಕೆ.ಹರೀಶ್‌ಗೌಡರವರಿಗೆ
ಹುಟ್ಟುಹಬ್ಬದ ಶುಭಾಶಯಗಳು
ಬಂದೀಗೌಡ
ಅಧ್ಯಕ್ಷರು
ರಾಜಕುಮಾರ್ (ದತ್ತ)
ಉಪಾಧ್ಯಕ್ಷರು
ಕನ್ನಡ ಸ್ನೇಹ ಬಳಗ ಕೆ.ಜಿ.ಕೊಪ್ಪಲು, ಮೈಸೂರು

ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ | ಆಗಸ್ಟ್ 4 ಭಾನುವಾರ 2024 | ₹4

ಸಂಪುಟ: 45 | ಸಂಚಿಕೆ: 110 | ಪುಟಗಳು: 12

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

ನಕ್ಕರೆ ಅದೇ ಸ್ವರ್ಗ

ಗುಂಡ : ಡಾಕ್ಟರಿಗೂ ಮತ್ತು ದೇವರಿಗೂ ಕೋಪ ಬರಿಸಬಾರದು.
ತಿಮ್ಮ : ಯಾಕೆ?
ಗುಂಡ : ದೇವರಿಗೆ ಕೋಪ ಬಂದ್ರೆ ಡಾಕ್ಟರ್ ಹತ್ರ ಕಳಿಸ್ತಾನೆ. ಡಾಕ್ಟರಿಗೆ ಕೋಪ ಬಂದ್ರೆ ದೇವರ ಹತ್ರ ಕಳಿಸ್ತಾನೆ... ಅಷ್ಟೇ!

ಮೈಸೂರು ಮಿತ್ರ
ಭಾನುವಾರ, 4 ಆಗಸ್ಟ್ 2024
ಸತ್ಯೇನೋತ್ತಭಿತಾ ಭೂಮಿಃ!! ನಹಿ ಸತ್ಯಾತ್ಪರೋ ಧರ್ಮಃ!
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)
ಸಂಪಾದಕ: ಎಂ.ಗೋವಿಂದೇಗೌಡ M.A.

ಅಮೃತವಾಹಿನಿ.........

ಒಬ್ಬರ ಸರಳ ಸ್ವಭಾವ ಅವರ ಬಲಹೀನತೆ ಅಲ್ಲ. ಪ್ರಪಂಚದಲ್ಲಿ ನೀರಿಗಿಂತ ಸರಳ ಯಾವುದು ಇಲ್ಲ. ಆದರೆ ಅದರ ರಭಸಕ್ಕೆ ಎಲ್ಲವನ್ನು ಸೋಲಿಸುವ ಸಾಮರ್ಥ್ಯವಿದೆ.

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ಮರಿ ಮಾಡುವ ಮೊದಲೇ ಮೊಟ್ಟೆಗಳನ್ನು ಎಣಿಸಬೇಡ.

ನಿಮ್ಮ ಪತ್ರಗಳು

ನಮ್ಮಲ್ಲೂ ದೇವರು ಇದ್ದಾನೆ ಅಲ್ಲವೇ?

ಮಾನ್ಯರೆ,

ಆಷಾಢ ಶುಕ್ರವಾರ ಜಿನುಗುಡುವ ಮಳೆ ಜೋ ಎಂದು ಸುರಿಯುತ್ತಿದೆ. ಮುಂಜಾನೆ ಎದ್ದು ಮೊಬೈಲ್ ನೋಡುತ್ತಿದ್ದರೆ ಎಲ್ಲರ ಮೊಬೈಲ್‌ನಲ್ಲೂ ತಾಯಿ ಚಾಮುಂಡಿಯ ದಿವ್ಯ ದರ್ಶನವಾಯಿತು. ಇತರ ದಿನಗಳಲ್ಲೂ ಕೂಡ ಸೋಮವಾರ ಮಹದೇಶ್ವರ, ಮಂಗಳವಾರ ವೀರಭದ್ರೇಶ್ವರ, ಗುರುವಾರ ಗುರು ರಾಘವೇಂದ್ರಸ್ವಾಮಿ, ಶುಕ್ರವಾರ ತಾಯಿ ಚಾಮುಂಡಿ, ಶನಿವಾರ ಆಂಜನೇಯ ಸ್ವಾಮಿಯ ದರ್ಶನ ನಮ್ಮೆಲ್ಲರ ಮೊಬೈಲ್‌ನಲ್ಲೇ ಆಗಿ ಬಿಡುತ್ತಿದೆ. ದೇವ್ರು ಅಂದರೆ ನಂಗೆ ಒಳ್ಳೆದಾಗಲಿ ಅಂತನೊ ಅಥವಾ ನನ್ನೊರಿಗೆ ಒಳ್ಳೆದಾಗಲಿ ಅಂತನೊ ಬೇಡ್ಕೊತೀವಿ.

ದೇವರ ಫೋಟೋಗೆ ಭಕ್ತಿಯ ಪರಾಕಾಷ್ಠೆಯಿಂದ ಮೊಬೈಲ್‌ನಲ್ಲಿ, ಮನೆಯಲ್ಲಿ ಪೂಜಿಸೊ ನಾವು ನಮ್ಮ ಹಡೆದ ತಾಯಿ ತಂದೆಗೆ ಮೂರೊತ್ತು ನೆಮ್ಮದಿಯ ತುತ್ತು ನೀಡಲು ಸಾಧ್ಯವಾಗದೆ ವಿಭಕ್ತ ಕುಟುಂಬದಲ್ಲೊ, ಕೆಲಸದ ನಿಮಿತ್ತ ದೂರ ಯಾವುದೊ ಒಂದು ಊರಲ್ಲಿ ಇದ್ದು ಬಿಡುತ್ತೇವೆ. ಮಗ ಆದವನು ಹಡೆದವರನ್ನು ಸಲುಹದೆ ಮತ್ತೇನನ್ನೊ ಬೆಟ್ಟದಷ್ಟು ಗಳಿಸಿದರೂ ಅದು ವ್ಯರ್ಥ. ಅದು ಬರೀಯ ವೈಭೋಗವಷ್ಟೆ. ಕೋಟಿ ದೇವರ ಪೂಜಿಸುವುದರ ಬದಲು ಹೆತ್ತವರ ಜೊತೆಗಿದ್ದು, ಅವರ ಜೊತೆ ಕಷ್ಟವಾದರೂ ಸರಿ ಮೂರೊತ್ತು ತುತ್ತನಿತ್ತು, ಅವರ ಕಾಳಜಿಯ ಬೈಗುಳ ಕೇಳಿದರೆ ಅದುವೇ ನಮ್ಮ ಬದುಕು ಧನ್ಯ.

ಹೆತ್ತವರನ್ನೇ ಸಲುಹದ ನಮ್ಮನ್ನು ಯಾವ ದೇವರು ಮೆಚ್ಚಿಹನು? ದೂರದಲ್ಲಿ ಎಲ್ಲಿಂದಲೊ ತಿಂಗಳಿಗಷ್ಟು ಹಣ ಕಳುಹಿಸಿ ನಿಮ್ಮ ಆರೋಗ್ಯ ನೋಡಿಕೊಳ್ಳಿ ಚೆನ್ನಾಗಿರಿ ಎಂದರೆ ಅದಕ್ಕೆ ಅರ್ಥವುಂಟೆ. ದುಡ್ಡಿನಿಂದ ಕಾಳಜಿ, ವಾತ್ಸಲ್ಯ, ಇವೆಲ್ಲವನ್ನು ಕೊಳ್ಳಲಾದಿತೆ? ಮಾಗಿದ ಜೀವಗಳಿಗೆ ನಾವು ಕಳುಹಿಸುವ ದುಡ್ಡು ತುತ್ತು ತುಂಬಿಸಬಹುದು, ಹೊತ್ತನ್ನು ತುಂಬಿಸಬಹುದು, ಆದರೆ ಅವರ ಮನದಲ್ಲಿ ಕಾಡುವ ಏಕಾಂಗಿತನ, ಮಕ್ಕಳು, ಮೊಮ್ಮಕ್ಕಳನ್ನು ಮೈಸವರಿ ಮುದ್ದಿಸಬೇಕೆಂಬ ಹೆಬ್ಬಯಕೆಯನ್ನು ನಾವು ದುಡ್ಡಿನಿಂದ ತುಂಬಿಸಲಾಗದು.

ದೇವರು ಎಂದರೆ ಗುಡಿಯ ದೇವನೊಬ್ಬನೇ ಅಲ್ಲ. ಪ್ರತಿಯೊಬ್ಬರ ಅಂತರಂಗದಲ್ಲೂ ದೇವರಿದ್ದಾನೆ. ಆ ದೇವರನ್ನು ಕಾಣುವುದೆಂದರೆ ನಮ್ಮೊಳಗೆ ಮಾನವೀಯತೆ ಹಾಗೂ ಪ್ರೀತಿ ಬೆಳಕನ್ನು ಹಚ್ಚಿದರೆ ಮಾತ್ರ ಸಾಧ್ಯ. ದೇವನಿರುವ ಹಡೆದವರ ಸಲುಹುವವರಲ್ಲಿ, ಹಸಿದವರಿಗೆ ತುತ್ತನಿತ್ತವರಲ್ಲಿ, ಸೋತವರಿಗೆ ಹೆಗಲಾದವರಲ್ಲಿ, ಇನ್ನೊಂದು ಜೀವದ ಕಷ್ಟಕ್ಕೆ ಮರುಗುವವರಲ್ಲಿ, ಇತರರಿಗೆ ಮೋಸ ಮಾಡದವರಲ್ಲಿ, ನೀತಿಯ ಬದುಕಿನಲ್ಲಿ, ನಮ್ಮಲ್ಲೂ ದೇವರು ಇದ್ದಾನೆ ಅಲ್ಲವೇ? ಉತ್ತರ ನಿಮಗಷ್ಟೆ ತಿಳಿದಿದೆ.

–ಮಂಜೇಶ್ ದೇವಗಳ್ಳಿ, ಮೈಸೂರು

ಬಿಜೆಪಿ–ಜೆಡಿಎಸ್ ಪಾದಯಾತ್ರೆ, ನಾಡದ್ರೋಹದ ಸ್ವಾರ್ಥ ಯಾತ್ರೆ

ಮಾನ್ಯರೆ,

ರಾಜ್ಯದ ಬಿಜೆಪಿ ಮತ್ತು ಜೆಡಿಎಸ್ ಪಕ್ಷಗಳು ಒಟ್ಟಾಗಿ ನಡೆಸಲು ಹೊರಟಿರುವ ಬೆಂಗಳೂರಿಂದ ಮೈಸೂರಿಗೆ ಪಾದಯಾತ್ರೆ ಯಾವುದೇ ಜನಪರ ಉದ್ದೇಶವಿಲ್ಲದ ಜನವಂಚನೆಯನ್ನು ತಡೆಯುವ ನಿಶ್ಚಿತ ಗುರಿಯಿಲ್ಲದ, ಕೇವಲ ಪ್ರಚಂಡ ಜನಾಭಿಪ್ರಾಯದ ಸರ್ಕಾರವನ್ನು ಬ್ಲ್ಯಾಕ್‌ಮೇಲ್ ಮಾಡಿ ಬೀಳಿಸಿ ತಾವು ಅಧಿಕಾರಕ್ಕೇರುವ ನಾಡದ್ರೋಹಿಗಳ ಗುಂಪಿನ ಸ್ವಾರ್ಥದ ಯಾತ್ರೆಯಾಗಿದೆ.

ಮುಡಾ ಸೈಟ್ ವಿತರಣೆಯ ಅಕ್ರಮ ತನಿಖೆ ಮಾಡಲು ಈಗಾಗಲೇ ನಿವೃತ್ತ ನ್ಯಾಯಾಧೀಶರ ನೇಮಕ ಮಾಡಿರುವ ರಾಜ್ಯ ಸರ್ಕಾರದ ವಿರುದ್ಧ ಬಿಜೆಪಿ–ಜೆಡಿಎಸ್ ಮಾಡಹೊರಟಿರುವ ಪ್ರತಿಭಟನಾ ಪಾದಯಾತ್ರೆ, ನಿರ್ದಿಷ್ಟ ಕಾರಣವಿಲ್ಲದೆ ಕೇವಲ ತನ್ನತ್ತ ಗಮನ ಸೆಳೆಯಲು ಚಂಡಿ ಹಿಡಿದು ಅಳುವ ಮಕ್ಕಳ ಮನಸ್ಥಿತಿಯ ಕರ್ಕಶ ರೋದನದಂತಿದೆ.

ಕಳೆದ ಹತ್ತು ವರ್ಷಗಳಲ್ಲಿ ಹಲವು ಸರ್ಕಾರಗಳನ್ನು ಬೀಳಿಸಿ ಅಧಿಕಾರಕ್ಕೇರಿ ಹಣ ಲೂಟಿ ಮಾಡಿದ ರುಚಿ ಹತ್ತಿದೆ ಬಿಜೆಪಿಗೆ. ದೇಶದ ಆಹಾರ ಸಾರ್ವಭೌಮತೆಯನ್ನು ಅಪಾಯಕ್ಕೊಡ್ಡುವ ಮೂರು ಕರಾಳ ಕೃಷಿ ಕಾನೂನು ತಂದು ಅದನ್ನು ವಿರೋಧಿಸಿದ ರೈತ ಸಮೂಹವನ್ನೇ ದೇಶದ್ರೋಹಿಗಳೆಂದು ಬಿಂಬಿಸಿದ್ದು ಬಿಜೆಪಿ. ಅವನ್ನು ವಾಪಸ್ ಪಡೆಯುವಾಗ ದೇಶದ ರೈತರಿಗೆ ಕೊಟ್ಟ ವಚನ ಪಾಲಿಸದ ವಚನ ಭ್ರಷ್ಟ ಮೋದಿ ಮತ್ತೆ ಪ್ರಧಾನಿಯಾಗಿದ್ದಾರೆ.

ದೇಶದ ಅತ್ಯುನ್ನತ ಅಧಿಕಾರಕ್ಕೇರಲು ಎಲ್ಲಾ ವಾಮಮಾರ್ಗ ಹಿಡಿದ ಮೋದಿ, ಬಿಜೆಪಿ–ಜೆಡಿಎಸ್ ರಾಜ್ಯ ಘಟಕಕ್ಕೆ ಈಗ ಆದರ್ಶ ಮಾರ್ಗದರ್ಶಕರು. ಕೇಂದ್ರ ವಾಪಸ್ ಪಡೆದ ಕರಾಳ ಕೃಷಿ ಕಾನೂನುಗಳನ್ನು ರಾಜ್ಯದಲ್ಲಿ ಉಳಿಸಿಕೊಂಡು ಚುನಾವಣೆಗೆ ಹೊರಟ ಬಿಜೆಪಿಗೆ ರಾಜ್ಯದ ಜನತೆ ತಕ್ಕ ಶಾಸ್ತಿ ಮಾಡಿದ್ದರು. ಇಂತಹ ಹೀನ ಜನವಿರೋಧಿ ರಾಜಕಾರಣ ಮಾಡಿದವರ ಜೊತೆಗೂಡಿ ಚುನಾವಣೆಗೆ ಹೊರಟ ಬಿಜೆಪಿ–ಜೆಡಿಎಸ್‌ಗೆ ಕರ್ನಾಟಕ ಕಳೆದ ಬಾರಿಗಿಂತ ಕಡಿಮೆ ಸ್ಥಾನ ಕೊಟ್ಟು ಒಕ್ಕೂಟ ಸರ್ಕಾರ ರಚನೆಗೂ ನೀವು ಯೋಗ್ಯರಲ್ಲ ಎಂದು ಹೇಳಿದ್ದಾರೆ. ಆದರೆ ಅನೈತಿಕ ರಾಜಕಾರಣವನ್ನು ತನ್ನ ಮೂಲಮಂತ್ರವಾಗಿಸಿಕೊಂಡಿರುವ ಬಿಜೆಪಿ–ಜೆಡಿಎಸ್ ಮತ್ತೆ ರಾಜ್ಯದಲ್ಲೂ ಕಾಂಗ್ರೆಸ್ ಸರ್ಕಾರ ಕೆಡವಿ ಜನ ಮತದ ವಿರುದ್ಧ ತಾನು ಸರ್ಕಾರ ರಚಿಸಲು ಮುಡಾ ಹಗರಣವನ್ನು ಬಳಸಿಕೊಳ್ಳಲು ಕುತಂತ್ರದ ಯೋಜನೆ ರೂಪಿಸಿದೆ. ಆ ಯೋಜನೆ ಜಾರಿಗೆ ಸಿಬಿಐ, ಇಡಿಗಳಂತ ಸಂಸ್ಥೆಗಳ ದುರ್ಬಳಕೆ ಮಾಡಿ ಅವುಗಳ ಸ್ವಾಯತ್ತತೆಯನ್ನು ನಾಶಮಾಡಿ ಪ್ರಜಾಪ್ರಭುತ್ವವನ್ನು ಬುಡಮೇಲು ಮಾಡುತ್ತಿದೆ. ಅಪಾಯಕಾರಿ ಕಾನೂನುಗಳನ್ನು ಹೊಸ ಕಾನೂನಿನ ಹೆಸರಿನಲ್ಲಿ ಜಾರಿ ಮಾಡಲು ಹೊರಟಿದೆ. ದಿನಕ್ಕೆ ಎಂಟು ಗಂಟೆ ಇದ್ದ ಕೆಲಸದ ಅವಧಿಯನ್ನು ಹನ್ನೆರಡು ಗಂಟೆಗೆ ಹೆಚ್ಚಿಸಿದ್ದು, ಖಾಸಗಿ ವಲಯದಲ್ಲಿ ಕನ್ನಡಿಗರಿಗೆ ಶೇ.75 ಉದ್ಯೋಗ ಮೀಸಲು ವಿಧೇಯಕ ತರ ಹೊರಟ ಸರ್ಕಾರದ ಪರ ನಿಲ್ಲದೆ ಇರುವುದು ಇವೆಲ್ಲ ಬಿಜೆಪಿಯ ಜನ ವಿರೋಧಿ ನಿಲುವುಗಳಿಗೆ ಸಾಕ್ಷಿ. ಇಂತಹ ಬಿಜೆಪಿಯ ಜೊತೆ ಸೇರಿ ಅನೈತಿಕ ರಾಜಕಾರಣ ಮಾಡಿ ಅಧಿಕಾರಕ್ಕೇರಲು ಕುಟಿಲ ಯೋಜನೆಯ ಪಾಲುದಾರನಾಗಲು ಜೆಡಿಎಸ್ ಈ ಇಬ್ಬರನ್ನೂ ಕರ್ನಾಟಕದ ಜನ ಚಳವಳಿಗಳು ಮೂಲೆಗೊತ್ತಿ ದಕ್ಷ ಆಡಳಿತಕ್ಕಾಗಿ ಕಾಂಗ್ರೆಸ್ ಸರ್ಕಾರವನ್ನು ಎಚ್ಚರಿಸಲು ಚಾಟಿ ಬೀಸಬೇಕಿದೆ.

–ಉಗ್ರನರಸಿಂಹೇಗೌಡ, ಸರ್ವೋದಯ ಕರ್ನಾಟಕ ಪಕ್ಷ, ಮೈಸೂರು.

ವಿಪರ್ಯಾಸ!

ಮಾನ್ಯರೆ,

ಒಬ್ಬ ವ್ಯಕ್ತಿಯು ಕದ್ದರೆ ಆತ ಕಳ್ಳ, ಆತನ ಕೃತ್ಯ ಕಳ್ಳತನ! ಐದು ಅಥವಾ ಐದಕ್ಕೂ ಹೆಚ್ಚು ಮಂದಿ ಸೇರಿಕೊಂಡು ಮಾರಕಾಸ್ತ್ರ ಬಳಸಿ ಸುಲಿಗೆ ಮಾಡಿದರೆ ಅವರು ಡಕಾಯಿತರು, ದರೋಡೆಕೋರರು. ಅವರ ಕೃತ್ಯ ದರೋಡೆ, ಡಕಾಯಿತಿ! ಸರಕಾರಿ ಅಧಿಕಾರಿಗಳು ಸುಲಿಗೆ ಮಾಡಿದರೆ ಅದು ಭ್ರಷ್ಟಾಚಾರ. ಅವರು ಭ್ರಷ್ಟಾಚಾರಿಗಳು! ಅಧಿಕಾರಿಗಳೊಂದಿಗೆ ರಾಜಕಾರಣಿಗಳು ಸೇರಿ ಬೃಹತ್ ಪ್ರಮಾಣದಲ್ಲಿ ಹಣ ದೋಚಿದರೆ, ಲೂಟಿ ಮಾಡಿದರೆ ಅದು ಹಗರಣ! ಕಳ್ಳರು, ಸುಲಿಗೆಕೋರರು, ಡಕಾಯಿತರು, ದರೋಡೆಕೋರರು ಹಾಗೂ ಭ್ರಷ್ಟಾಚಾರಿಗಳ ವಿರುದ್ಧ ಪ್ರಕರಣ ದಾಖಲಾಗುತ್ತದೆ. ಆದರೆ ಹಗರಣಕೋರರ ವಿರುದ್ಧ ಪ್ರಕರಣ ದಾಖಲಾಗುವುದಿಲ್ಲ. ಕಾರಣವೇನೆಂದರೆ ಹಗರಣದ ತತ್ಸಮ ರೂಪವೇ ಪ್ರಕರಣ! ಪ್ರಕರಣದ ತದ್ಭವ ರೂಪವೇ ಹಗರಣ!!

–ಪಿ.ಜೆ.ರಾಘವೇಂದ್ರ ನ್ಯಾಯವಾದಿ ಮೈಸೂರು

ನಮ್ಮ ಮೈಸೂರಿನ ಅಸಾಮಾನ್ಯರು...



ಮಹಾರಾಜ ಮುಮ್ಮಡಿ ಕೃಷ್ಣರಾಜ ಒಡೆಯರಿಂದ ಹಿಡಿದು ಯದುವಂಶದ ಕೊನೆಯ ಮಹಾರಾಜರಾದ ಜಯಚಾಮರಾಜ ಒಡೆಯರ್ ಆಡಳಿತದ ಅವಧಿಯವರೆಗೆ ಅನೇಕ ಶ್ರೇಷ್ಠ ಮಹನೀಯರು ಮೈಸೂರು ರಾಜ್ಯದಲ್ಲಿ ಗಣನೀಯ ಸೇವೆ ಸಲ್ಲಿಸಿದ್ದಾರೆ. ಅಂತಹ ಕೆಲವರ ಹೆಸರುಗಳನ್ನು ಮೈಸೂರು ಚರಿತ್ರೆಗೆ ಸಂಬಂಧಪಟ್ಟ ಇತಿಹಾಸದ ಪುಸ್ತಕಗಳಲ್ಲಿ ಪ್ರಸ್ತಾಪಿಸಿರುವುದನ್ನು ನಾವು ಕಾಣುತ್ತೇವೆ. ಆಡಳಿತದ ಪ್ರಮುಖ ಹುದ್ದೆಯಲ್ಲಿದ್ದು, ಗಣನೀಯ ಸೇವೆ ಸಲ್ಲಿಸಿದ್ದ ಕೆಲವರ ಹೆಸರುಗಳು ಅವುಗಳಲ್ಲಿ ಕಂಡು ಬಂದರೂ, ಅವರಂತೆಯೇ ಅಪೂರ್ವ ಸೇವೆ ಸಲ್ಲಿಸಿರುವ ಇತರ ನೂರಾರು ಮಂದಿ ಎಲ್ಲಿಯೂ ಪ್ರಸ್ತಾಪಗೊಳ್ಳದೆ ಎಲೆಮರೆಕಾಯಿಯಾಗಿ ಉಳಿದು ಹೋಗಿದ್ದಾರೆ. ನೆನಪಿನ ಅಂಗಳದಿಂದ ಜಾರಿ ಹೋಗಿದ್ದಾರೆ. ಹಾಗೆ ಸೇವೆ ಸಲ್ಲಿಸಿದವರಲ್ಲಿ ಹಲವಾರು ಮಂದಿ ಅಂದಿಗೆ ಖ್ಯಾತನಾಮರಾಗಿದ್ದರೂ ಇಂದು ಅವರ ಬಗ್ಗೆ ನಮಗೆ ಹೆಚ್ಚು ತಿಳಿಯದೆ ಹೋಗಿದೆ. ನೆನಪಿನಿಂದ ಅಳಿಸಿಹೋಗಿದ್ದಾರೆ. ಕೆಲವರ ಸೇವೆಯನ್ನಾದರೂ ಇಲ್ಲಿ ಗುರುತಿಸುವ ಪ್ರಯತ್ನ ನನ್ನದು. ಇಂತಹ ಪ್ರಯತ್ನ ಬಹಳ ಹಿಂದೆಯೇ ಪ್ರಾರಂಭಿಸುವ ಉದ್ದೇಶ ಹೊಂದಿದ್ದರೂ, ಅದು ಈಗ ಸಾಧ್ಯವಾಗುತ್ತಿದೆ. ನೆನಪಿನಂಗಳದಿಂದ ಮರೆಯಾದ ಮಹನೀಯರ ಪರಿಚಯ ಒಂದು ಮಾಲಿಕೆಯಾಗಿ ಪ್ರಕಟಗೊಳ್ಳಲಿದೆ. ಅವು 'ಮೈಸೂರು ಮಿತ್ರ' ಓದುಗರಿಗೆ ಮೆಚ್ಚುಗೆಯಾದರೆ, ಅದೇ ನನಗೆ ಬರೆದ ತೃಪ್ತಿ.



30. ಡಾ.ಎಸ್.ವಿ.ರಾಮಸ್ವಾಮಿ ಅಯ್ಯಂಗಾರ್



ಗೌರಿ ಸತ್ಯ
ಹಿರಿಯ ಪತ್ರಕರ್ತರು
ಮೊ. 87627 88685

ಬೆಂಗಳೂರು ಮಿಂಟೋ ಕಣ್ಣಾಸ್ಪತ್ರೆಯ ಮೊದಲ ಸೂಪರಿಂಟೆಂಡೆಂಟ್ ಆಗಿದ್ದವರು ಮೈಸೂರಿನಲ್ಲಿಯೇ ಹುಟ್ಟಿ ಬೆಳೆದು ಶಿಕ್ಷಣ ಮುಗಿಸಿದ ವೈದ್ಯರೊಬ್ಬರು ಎಂಬುದು ಹೆಮ್ಮೆಯ ವಿಚಾರ. ಇವರೆಂದರೆ ಡಾ.ಎಸ್.ವಿ. ರಾಮಸ್ವಾಮಿ ಅಯ್ಯಂಗಾರ್ ಅವರು.

ಈ ಪ್ರಮುಖ ಸ್ಥಾನವನ್ನು ಪಡೆದದ್ದೇ ಅಲ್ಲದೆ ಅವರು ಅಂದು ಅತ್ಯವಶ್ಯಕವಾಗಿ ಆಗಬೇಕಾಗಿದ್ದ ಭಾರತದ ಮಕ್ಕಳ ಕಣ್ಣಿನ ದೃಷ್ಟಿ ಕುರಿತಂತೆ ಅಧ್ಯಯನ ನಡೆಸಿ ಮಹತ್ವದ ಮಾಹಿತಿಯನ್ನು ಸಂಗ್ರಹಿಸಿ ಅಪೂರ್ವ ಕೆಲಸ ಮಾಡಿದರು. ಪ್ರಾಯಶಃ ಇಂತಹ ಮಾಹಿತಿಯ ಸಂಗ್ರಹ ಅದೇ ಮೊದಲ ಬಾರಿಗೆ ನಡೆದದ್ದು. ಮಕ್ಕಳಲ್ಲಿನ ದೃಷ್ಟಿದೋಷವನ್ನು ನಿವಾರಿಸುವ ದಿಕ್ಕಿನಲ್ಲಿ ಈ ಮಾಹಿತಿ ಅತ್ಯಂತ ಮಹತ್ವವೂ, ಅವಶ್ಯಕವೂ ಆಗಿತ್ತು.

ರಾಮಸ್ವಾಮಿ ಅಯ್ಯಂಗಾರ್ 1863 ಅಕ್ಟೋಬರ್ 15ರಂದು ಮೈಸೂರಿನಲ್ಲಿ ಜನಿಸಿದರು. ಬೆಂಗಳೂರಿನ ಸೆಂಟ್ರಲ್ ಕಾಲೇಜಿನ ನಂತರ ಮೈಸೂರಿನ ಮಹಾರಾಜ ಕಾಲೇಜಿನಲ್ಲಿ ಶಿಕ್ಷಣ ಪಡೆದು ಮದ್ರಾಸ್ ವೈದ್ಯಕೀಯ ಕಾಲೇಜಿನಲ್ಲಿ ಶಿಕ್ಷಣ ಮುಗಿಸಿ 1888ರಲ್ಲಿ ವೈದ್ಯಕೀಯ ಶಾಸ್ತ್ರದಲ್ಲಿ ಪದವಿ ಪಡೆದರು. ಅದಾದ ನಂತರ ಹೆಚ್ಚಿನ ಶಿಕ್ಷಣ ಪಡೆಯುವ ಸಲುವಾಗಿ ವಿದೇಶಕ್ಕೆ ತೆರಳಿ ಎಡಿನ್ಬರೋ ಮತ್ತು ಗ್ಲಾಸ್ಗೋ ನಗರಗಳಲ್ಲಿ ಸ್ನಾತಕೋತ್ತರ ಪದವಿಗಳಿಸಿ 1890ರಲ್ಲಿ ಭಾರತಕ್ಕೆ ಹಿಂತಿರುಗಿದರು.

ಮರಳಿ ದೇಶಕ್ಕೆ ಬಂದ ಮೇಲೆ 1892ರ ಅಕ್ಟೋಬರ್ 30ರಂದು ಸೇವೆಗೆ ಸೇರಿದಾಗ ಮೊದಲಿಗೆ ಅವರನ್ನು ಬೆಂಗಳೂರಿನಲ್ಲಿ ಅಸಿಸ್ಟೆಂಟ್ ಸರ್ಜನ್ ಹುದ್ದೆಗೆ ಸರ್ಕಾರ ನೇಮಿಸಿತು. ಒಂದು ವರ್ಷದ ತರುವಾಯ ಅವರನ್ನು ಮಹಾರಾಣಿ ಹೈಸ್ಕೂಲಿನಲ್ಲಿ ವಿಜ್ಞಾನವನ್ನು ಬೋಧಿಸಲು ಅಧ್ಯಾಪಕರನ್ನಾಗಿ ನೇಮಕ ಮಾಡಲಾಯಿತು. ಅಲ್ಲಿಯೂ ಒಂದು ವರ್ಷ ಸೇವೆ ಸಲ್ಲಿಸಿದ ಮೇಲೆ 1894ರ ಆಗಸ್ಟ್ ತಿಂಗಳಲ್ಲಿ ಸರ್ಕಾರ ಮತ್ತೆ ಗೌರ್ನಮೆಂಟ್ ಸಿಟಿ ಆಸ್ಪತ್ರೆಯ ಸೀನಿಯರ್ ಸರ್ಜನ್ ಅವರಿಗೆ ಡಾ. ರಾಮಸ್ವಾಮಿ ಅಯ್ಯಂಗಾರ್ ಅವರನ್ನು ಮುಖ್ಯ ಸಹಾಯಕರನ್ನಾಗಿ ನೇಮಿಸಿತು. ಜೊತೆಗೆ ಅವರು ಅದೇ ವರ್ಷದ ಅಕ್ಟೋಬರ್ ತಿಂಗಳಲ್ಲಿ ಕುಷ್ಠರೋಗಿಗಳ ಮತ್ತು ಮಾನಸಿಕ ರೋಗಿಗಳ ಆಶ್ರಯ ಕೇಂದ್ರ ಹಾಗೂ ಮೆಟರ್ನಿಟಿ ಮತ್ತು ಮೆಡಿಕಲ್ ಸ್ಟೋರ್ಸ್ ಮೇಲ್ವಿಚಾರಕರಾಗಬೇಕಾಯಿತು. ಈ ಜವಾಬ್ದಾರಿಯನ್ನು ಅವರು 1895ರ ಜನವರಿ ತಿಂಗಳವರೆಗೆ ನಿರ್ವಹಿಸಿದರು.

1896ರ ಮೇ ತಿಂಗಳಲ್ಲಿ ಚಿಕ್ಕಮಗಳೂರಿಗೆ ವರ್ಗವಾದ ಅಯ್ಯಂಗಾರ್ ಸಿವಿಲ್ ಸರ್ಜನ್ ಆಗಿ ಅಲ್ಲಿ ಕಾರ್ಯನಿರ್ವಹಿಸಿದರು. ಆದರೆ ಮೂರು ತಿಂಗಳ ನಂತರ ಬೆಂಗಳೂರಿಗೆ ಬಂದು ಕೇಂದ್ರ ಕಾರಾಗೃಹ ಹಾಗೂ ನಂತರದ ವರ್ಷ ಕಣ್ಣಿನ ಅಸಿಸ್ಟೆಂಟ್ ಸರ್ಜನ್ ಹುದ್ದೆ ನಿರ್ವಹಿಸಬೇಕಾಯಿತು. ಅದೇ ವರ್ಷ ಅವರನ್ನು ಸರ್ಕಾರ ಅಕ್ಯುಲಿಸ್ಟ್ ಹುದ್ದೆಯಲ್ಲಿ ನೇಮಿಸಿ ಹಾಲಿ ಇದ್ದ ಜವಾಬ್ದಾರಿಯ ಜೊತೆಗೆ ಕಾರಾಗೃಹದ ಸಿವಿಲ್ ಸರ್ಜನ್ ಮತ್ತು ಮೆಡಿಕಲ್ ಆಫೀಸರ್ ಸ್ಥಾನದ ಹೆಚ್ಚಿನ ಜವಾಬ್ದಾರಿಯನ್ನು ವಹಿಸಿತು.

1901ರಲ್ಲಿ ಭಾರತಾದ್ಯಂತ ಸುತ್ತಿದ ಡಾ.ಅಯ್ಯಂಗಾರ್ ಶಾಲಾ ಮಕ್ಕಳಲ್ಲಿ ಕಣ್ಣಿನ ದೃಷ್ಟಿ ಕುರಿತಂತೆ ಮಾಹಿತಿಯನ್ನು ಸಂಗ್ರಹಿಸಿದರು. ಹೀಗೆ ಮಾಹಿತಿ ಸಂಗ್ರಹಿಸಿದ ಅವರು "ಭಾರತದ ಶಾಲಾ ಹುಡುಗರ ಕಣ್ಣಿನ ದೃಷ್ಟಿ' ಇತ್ಯಾದಿ ವರದಿಗಳನ್ನು ರಚಿಸಿದರು. ದೇಶದಲ್ಲಿನ ಮಕ್ಕಳಲ್ಲಿನ ಕಣ್ಣಿನ ದೃಷ್ಟಿಯ ಬಗ್ಗೆ ಅಮೂಲ್ಯ ಮಾಹಿತಿ ಸಂಗ್ರಹಿಸಿ ವರದಿಗಳನ್ನು ತಯಾರು ಮಾಡಿದ ಕಾರ್ಯಕ್ಕಾಗಿ ಇವರಿಗೆ ಎಂ.ಡಿ. ಪದವಿ ಲಭ್ಯವಾಯಿತು. 1906ರಲ್ಲಿ ಇವರನ್ನು ಬೆಂಗಳೂರಿನಲ್ಲಿ ಸೀನಿಯರ್ ಸರ್ಜನ್ ಮತ್ತು ಗೌರ್ನಮೆಂಟ್ ಅಕ್ಯುಲಿಸ್ಟ್ ಅವರ ಖಾಸಗೀ ಕಾರ್ಯದರ್ಶಿಯನ್ನಾಗಿ ನೇಮಿಸಲಾಯಿತು. ಈ ಹುದ್ದೆಯಲ್ಲಿದ್ದು ಅವರು ಕಣ್ಣಿನ ದೃಷ್ಟಿ ಕುರಿತಂತೆ ತಮ್ಮ ಅಧ್ಯಯನವನ್ನು ಲಂಡನ್ನಿನಲ್ಲಿ ಡಾ.ಅರ್ಗ್ಯಲ್ ರಾಬರ್ಟ್‌ಸನ್, ಜ್ಯೂಲರ್, ಫ್ರಾಸ್ಟ್ ಮತ್ತು ವಾರ್ಟನ್, ವಿಯನ್ನಾದ ಫ್ಯೂಕ, ಜರ್ಮನಿಯ ಹೋರ್ಷ್‌ಬರ್ಗ್ ಹಾಗೂ ವಾಯೇಶ್‌ಡೆನ್ ಅವರ ಮಾರ್ಗದರ್ಶನದಲ್ಲಿ ಮತ್ತಷ್ಟು ಅಭ್ಯಾಸ ಮಾಡಿದರು.

ನಂತರ 1913ರಲ್ಲಿ ಡಾ.ರಾಮಸ್ವಾಮಿ ಅಯ್ಯಂಗಾರ್ ಬೆಂಗಳೂರಿಗೆ ಹಿಂತಿರುಗಿ ಹೊಸದಾಗಿ ಪ್ರಾರಂಭಿಸಲಾಗಿದ್ದ ಮಿಂಟೋ ಕಣ್ಣಾಸ್ಪತ್ರೆಯ ಮೊದಲ ಸೂಪರಿಂಟೆಂಡೆಂಟ್ ಆಗಿ ಅಧಿಕಾರ ವಹಿಸಿಕೊಂಡರು. ಈ ಸ್ಥಾನದಲ್ಲಿ 1917ರವರೆಗೆ ಸುಮಾರು ನಾಲ್ಕು ವರ್ಷಗಳ ಕಾಲ ಸೇವೆ ಸಲ್ಲಿಸಿ ನಿವೃತ್ತರಾದರು. ಇವರು ಪಡೆದುಕೊಂಡಿದ್ದ ಅರ್ಹತೆಗಳೆಂದರೆ ಎಂ.ಡಿ., ಎಲ್.ಆರ್.ಸಿ.ಪಿ. &ಎಸ್., (ಎಡಿನ್ಬರೋ), ಎಲ್.ಪಿ.ಪಿ. &ಎಸ್. (ಗ್ಲಾಸ್ಗೋ).

ಮದ್ರಾಸಿನಲ್ಲಿ ಏಷ್ಯಾದ ಮೊದಲ ಕಣ್ಣಾಸ್ಪತ್ರೆ ಪ್ರಾರಂಭವಾದ 77 ವರ್ಷಗಳ ನಂತರ ಮಿಂಟೋ ಕಣ್ಣಾಸ್ಪತ್ರೆಯ ಪ್ರಾರಂಭ ಬೆಂಗಳೂರಿನಲ್ಲಿ 1896ರಲ್ಲಿ ನಡೆಯಿತು. ಆಗ ಅದನ್ನು ಬೆಂಗಳೂರು ಕಣ್ಣಾಸ್ಪತ್ರೆ ಎಂದು ಕರೆಯಲಾಗುತ್ತಿತ್ತು. ಆಸ್ಪತ್ರೆ ಎಂದು ಕರೆದರೂ ಅದೊಂದು ವೈದ್ಯಾಧಿಕಾರಿಯ ಮೇಲುಸ್ತುವಾರಿಯಲ್ಲಿನ ಒಂದು ಚಿಕಿತ್ಸಾಲಯವಾಗಿತ್ತು. ಆ ಜಾಗ ಸಾಲದೆ ಹೋಗಿ ಆಸ್ಪತ್ರೆಯ ಹೊರರೋಗಿಗಳ ಶಾಖೆಯನ್ನು ಬೆಂಗಳೂರು ಜಿಲ್ಲಾಧಿಕಾರಿಗಳ ಹತೋಟಿಯಲ್ಲಿದ್ದ ಲಾಲ್‌ಬಾಗ್ ಲಾಡ್ಜ್‌ಗೆ 1897ರಲ್ಲಿ ವರ್ಗಾಯಿಸಲಾಯಿತು. ನಂತರ ವಿಕ್ಟೋರಿಯಾ ಆಸ್ಪತ್ರೆ ನಿರ್ಮಾಣವಾದಾಗ ಕಣ್ಣಾಸ್ಪತ್ರೆಯನ್ನು ಅಲ್ಲಿಗೆ ಬದಲಾಯಿಸಲಾಯಿತು. ಆಸ್ಪತ್ರೆಗೆ ಪ್ರತ್ಯೇಕ ಕಟ್ಟಡದ ಅವಶ್ಯಕತೆಯನ್ನು ಕಂಡು ಈಗಿನ ಮಿಂಟೊ ಆಸ್ಪತ್ರೆಯ ಕಟ್ಟಡವನ್ನು ಕಟ್ಟಲಾಯಿತು. 1910ರ ಡಿಸೆಂಬರ್ 17ರಂದು ಮಹಾರಾಜ ಕೃಷ್ಣರಾಜ ಒಡೆಯರು ಆಸ್ಪತ್ರೆಯ ಕಟ್ಟಡಕ್ಕೆ ಶಂಕುಸ್ಥಾಪನೆ ಮಾಡಿದರು. ಕಟ್ಟಡವನ್ನು ಗ್ರಾನೈಟ್ ಕಲ್ಲುಗಳಿಂದ ವಿಕ್ಟೋರಿಯನ್ ವಾಸ್ತುಶಿಲ್ಪದ ಮಾದರಿಯಲ್ಲಿ ಕಟ್ಟಲಾಗಿದ್ದು, ಈ ಕಲ್ಲುಗಳನ್ನು ಕೆಡವಲಾದ ಬೆಂಗಳೂರು ಕೋಟೆಯಿಂದ ತೆಗೆದುಕೊಳ್ಳಲಾಯಿತು. ಆಸ್ಪತ್ರೆಗೆ ನಾಲ್ಕನೇ ಮಿಂಟೋ ಗಿಲ್ಬರ್ಟ್‌ಜಾನ್ ಈ ಲಿಯಾಟ್ ಮುರ್ರೇ ಕೈನೌಂಯೌನ್ಮೌಂಡ್ ಅವರು ವೈಸರಾಯ್ ಆಗಿದ್ದಾಗ ಕಟ್ಟಡವನ್ನು ಕಟ್ಟಿಸಲಾಗಿದ್ದು, ಅವರ ಹುಟ್ಟುಹಬ್ಬದ ದಿನಾಂಕ 1913ರ ಜನವರಿ 31ರಂದು ಉದ್ಘಾಟಿಸಲಾಯಿತು.

ಡಾ.ರಾಮಸ್ವಾಮಿ ಅಯ್ಯಂಗಾರ್ ಬೆಂಗಳೂರಿನ ಮೇಸನ್ಸ್ ಲಾಡ್ಜ್‌ನ ಸದಸ್ಯರಾಗಿದ್ದುದಲ್ಲದೆ, ವಿವಿಧ ಅಧಿಕಾರ ಸ್ಥಾನದಲ್ಲಿದ್ದು ಉತ್ತಮ ಸೇವೆ ಮಾಡಿದರು. ಅದರ ಅಧಿಕಾರ ಸ್ಥಾನದಲ್ಲಿದ್ದ ಮೊದಲ ಭಾರತೀಯರೂ ಅವರಾಗಿದ್ದರು.

ಶಾಸಕ ಕೆ.ಹರೀಶ್‌ಗೌಡರಿಗೆ ಇಂದು ಹುಟ್ಟುಹಬ್ಬದ ಸಂಭ್ರಮ

ಚಾಮರಾಜ ಕ್ಷೇತ್ರದಲ್ಲಿ ಅಭಿಮಾನಿಗಳಿಂದ ಅದ್ಧೂರಿ ಕಾರ್ಯಕ್ರಮ



ಮೈಸೂರು, ಆ.3(ಬಿಎಲ್‌ಯು)– ಮೈಸೂರಿನ ಚಾಮರಾಜ ಕ್ಷೇತ್ರದ ಕಾಂಗ್ರೆಸ್ ಶಾಸಕ ಕೆ.ಹರೀಶ್‌ಗೌಡರು ನಾಳೆ (ಆ.4) ಹುಟ್ಟುಹಬ್ಬ ಆಚರಿಸಿಕೊಳ್ಳುತ್ತಿದ್ದು, ಅವರ ಅಭಿಮಾನಿಗಳು ಹಾಗೂ ಕಾಂಗ್ರೆಸ್ ಕಾರ್ಯಕರ್ತರು ಕ್ಷೇತ್ರದ ಹಲವೆಡೆ ಅದ್ಧೂರಿ ಕಾರ್ಯಕ್ರಮ ಆಯೋಜಿಸಿದ್ದಾರೆ.

ಮೈಸೂರಿನ ಚಾಮುಂಡಿಬೆಟ್ಟದಲ್ಲಿ ನಾಳೆ ಬೆಳಗ್ಗೆ 7 ಗಂಟೆಗೆ ಹರೀಶ್‌ಗೌಡ ನಾಡದೇವತೆ ತಾಯಿ ಚಾಮುಂಡೇಶ್ವರಿ ದೇವಿಯ ದರ್ಶನ ಪಡೆಯಲಿದ್ದಾರೆ. ತರುವಾಯ ದೇವಸ್ಥಾನದ ಬಳಿ 1001 ಈಡುಗಾಯಿ ಒಡೆಯಲಾಗುವುದು.

8 ಗಂಟೆಗೆ ಕೆ.ಟಿ.ಸ್ಟ್ರೀಟ್‌ನ ಶ್ರೀ ಕಾಲಭೈರವೇಶ್ವರ ದೇವಸ್ಥಾನದಲ್ಲಿ ಪೂಜೆ, 8.15 ಗಂಟೆಗೆ ಇರ್ವಿನ್ ರಸ್ತೆಯ ಶ್ರೀ ಪಂಚಮುಖಿ ಆಂಜನೇಯ ಸ್ವಾಮಿ ದೇವಸ್ಥಾನದಲ್ಲಿ ವಿಶೇಷ ಪೂಜೆ ಸಲ್ಲಿಸಲಿದ್ದಾರೆ.

ಹುಟ್ಟುಹಬ್ಬದ ಹಿನ್ನೆಲೆ 8.30 ಗಂಟೆಗೆ ನಗರದ ಆರ್‌ಎಂಸಿ ಬಳಿ ಪೌರಕಾರ್ಮಿಕರನ್ನು ಹರೀಶ್‌ಗೌಡ ಸನ್ಮಾನಿಸಲಿದ್ದಾರೆ. 9 ಗಂಟೆಗೆ ವಿಜಯನಗರದ ಬಯಲು ರಂಗಮಂದಿರದಲ್ಲಿ ಆರೋಗ್ಯ ತಪಾಸಣಾ ಶಿಬಿರ ಆಯೋಜಿಸಲಾಗಿದೆ. ವಿಜಯನಗರದ ಮುಡಾ ಮೈದಾನದಲ್ಲಿ ಗಿಡ ನೆಡುವ ಕಾರ್ಯಕ್ರಮ, ನಜರ್‌ಬಾದ್‌ನ ಅಂಬೇಡ್ಕರ್ ಮೆಟ್ರಿಕ್ ವಸತಿ ಶಾಲೆಯಲ್ಲಿ ವನ ಮಹೋತ್ಸವ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವ ಹರೀಶ್‌ಗೌಡರಿಗೆ ಸರಸ್ವತಿಪುರಂನಲ್ಲಿ ಸನ್ಮಾನ ಕಾರ್ಯಕ್ರಮ ಆಯೋಜಿಸಲಾಗಿದೆ.

ಮಂಚೇಗೌಡನಕೊಪ್ಪಲಿನ ಕೆಂಪೇಗೌಡರ ಗರಡಿ, ವಿಜಯನಗರದ ಶ್ರೀ ಚಾಮುಂಡೇಶ್ವರಿ ದೇವಸ್ಥಾನ ಟ್ರಸ್ಟ್‌ನಲ್ಲಿ ಹರೀಶ್‌ಗೌಡರಿಗೆ ಸನ್ಮಾನ ಕಾರ್ಯಕ್ರಮ ಆಯೋಜಿಸಲಾಗಿದೆ. ಹುಟ್ಟುಹಬ್ಬದ ಅಂಗವಾಗಿ ದೇವರಾಜ ಮೊಹಲ್ಲಾದ ಗಂಗಮನಗುಡಿ ದೇವಸ್ಥಾನದಲ್ಲಿ ಶಾಲಾ ಮಕ್ಕಳಿಗೆ ಹರೀಶ್‌ಗೌಡ ಸ್ವೆಟರ್ ವಿತರಣೆ ಮಾಡುವರು. ತರುವಾಯ ಮೇಟಗಳ್ಳಿಯ ಆಶಾದಾಯಕ ಅನಾಥಾಶ್ರಮ, ಗೋಕುಲಂನ ಮೈಸೂರು ಒನ್, ಒಂಟಿಕೊಪ್ಪಲ್ ಹಾಗೂ ಜೆ.ಕೆ.ಟೈರ್ ಎದುರಿನ ಅಂಬಾರಿ ರೆಸ್ಟೋರೆಂಟ್‌ನಲ್ಲಿ ಹರೀಶ್‌ಗೌಡರಿಗೆ ಸನ್ಮಾನ ಕಾರ್ಯಕ್ರಮ ಆಯೋಜಿಸಲಾಗಿದೆ.


ಆ.15, ದಲಿತರ ಹಣ ದುರ್ಬಳಕೆ ವಿರೋಧಿಸಿ ಮೈಸೂರಿಂದ ಬೆಂಗಳೂರಿಗೆ ಪಾದಯಾತ್ರೆ

ಮೈಸೂರು,ಆ.3(ಜಿಎ)–ಎಸ್‌ಸಿಎಸ್‌ಪಿ, ಟಿಎಸ್‌ಪಿ ಹಣವನ್ನು ರಾಜ್ಯ ಸರ್ಕಾರ ಅನ್ಯ ಉದ್ದೇಶಗಳಿಗೆ ಬಳಸಿಕೊಳ್ಳುತ್ತಿರುವುದನ್ನು ವಿರೋಧಿಸಿ ಆ.15ರಂದು ಮೈಸೂರಿನಿಂದ ಬೆಂಗಳೂರಿನ ವಿಧಾನಸೌಧಕ್ಕೆ ಕೋಡಿಹಳ್ಳಿ ಚಂದ್ರಶೇಖರ್ ಬಣದ ರಾಜ್ಯ ರೈತ ಸಂಘ ಹಾಗೂ ದಲಿತ ಸಂಘರ್ಷ ಸಮಿತಿ–ಭೀಮವಾದದ ಸಂಯುಕ್ತಾಶ್ರಯದಲ್ಲಿ ಪಾದಯಾತ್ರೆ ಹಮ್ಮಿಕೊಳ್ಳಲಾಗುತ್ತಿದೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ದಲಿತ ಸಂಘರ್ಷ ಸಮಿತಿ ಭೀಮವಾದದ ರಾಜ್ಯ ಸಂಚಾಲಕ ಡಾ.ಆರ್.ಮೋಹನ್‌ರಾಜ್ ಈ ವಿಷಯ ತಿಳಿಸಿ, ಸಿಎಂ ಸಿದ್ದರಾಮಯ್ಯ ಅವರ ಸರ್ಕಾರ ಸುಮಾರು 25 ಸಾವಿರ ಕೋಟಿ ರೂ. ಈ ಉದ್ದೇಶದ ಹಣವನ್ನು ಗ್ಯಾರಂಟಿ ಯೋಜನೆಗಳಿಗೆ ಬಳಕೆ ಮಾಡಿಕೊಂಡಿದೆ. ಜೊತೆಗೆ ಈ ಕಾಯ್ದೆ ಬಂದಾಗಿನಿಂದಲೂ ಇದುವರೆಗೆ ಸುಮಾರು 70 ಸಾವಿರ ಕೋಟಿ ಅನ್ಯ ಉದ್ದೇಶಕ್ಕೆ ಬಳಕೆ ಮಾಡಿಕೊಳ್ಳಲಾಗಿದೆ ಎಂದು ಕಿಡಿಕಾರಿದರು. ಮುಡಾ ಹಗರಣ, ವಾಲ್ಮೀಕಿ ಹಗರಣ ತನಿಖೆ ಸಿಬಿಐಗೆ ಒಪ್ಪಿಸಬೇಕು ಎಂದು ಸಹಾ ಒತ್ತಾಯಿಸಿ, ಈ ನಿಟ್ಟಿನಲ್ಲಿ ನಗರದಿಂದ ಹೊರಡುವ ಪಾದಯಾತ್ರೆ ಆ.20ರಂದು ಬೆಂಗಳೂರಿನ ವಿಧಾನಸೌಧ ತಲುಪಿ ಹಕ್ಕೊತ್ತಾಯ ಮಂಡಿಸಲಿದೆ ಎಂದರು. ಸುದ್ದಿಗೋಷ್ಠಿಯಲ್ಲಿ ಕೆ.ಬಿ.ರಾಜು, ಕೆ.ಎಂ. ಶ್ರೀನಿವಾಸ್, ರಾಜಶೇಖರ್ ಸೋಸಲೆ, ರಮೇಶ್, ಚನ್ನಕೇಶವ ಉಪಸ್ಥಿತರಿದ್ದರು.

ಕಾಂಗ್ರೆಸ್‌ನದು ಪಶ್ಚಾತ್ತಾಪ ಯಾತ್ರೆ

ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಲೇವಡಿ



ಮೈಸೂರಿನ ಚಾಮುಂಡಿಬೆಟ್ಟದಲ್ಲಿ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಪತ್ನಿ ಸಮೇತ ತಾಯಿ ಚಾಮುಂಡೇಶ್ವರಿ ದೇವಿಗೆ ವಿಶೇಷ ಪೂಜೆ ಸಲ್ಲಿಸಿದರು.

ಮೈಸೂರು, ಆ.3(ಬಿಎಲ್‌ಯು)– ರಾಜ್ಯದ ಜನರಿಗೆ ಕೊಟ್ಟ ಭರವಸೆ ಈಡೇರಿಸಲು ಸಾಧ್ಯವಾಗದ ಕಾರಣ ಕಾಂಗ್ರೆಸ್‌ನವರು ನಡೆಸುತ್ತಿರುವುದು ಪಶ್ಚಾತ್ತಾಪ ಯಾತ್ರೆಯೇ ಹೊರತು, ಜನಾಂದೋಲನ ಯಾತ್ರೆಯಲ್ಲ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಗೇಲಿ ಮಾಡಿದರು.

ಮೈಸೂರಿನ ಚಾಮುಂಡಿಬೆಟ್ಟದಲ್ಲಿ ಪತ್ರಕರ್ತರ ಜೊತೆ ಮಾತನಾಡಿದ ಅವರು, ಕಾಂಗ್ರೆಸ್ ಸರ್ಕಾರ ಭ್ರಷ್ಟಾಚಾರದಲ್ಲಿ ಮುಳುಗಿದೆ. ಇದರಿಂದ ತಮ್ಮ ಭ್ರಷ್ಟಾಚಾರ ಸಮರ್ಥನೆಗೆ ಈ ಯಾತ್ರೆ ಕೈಗೊಂಡಿದೆ ಎಂದು ಲೇವಡಿ ಮಾಡಿದರು. ಮುಡಾ, ವಾಲ್ಮೀಕಿ ನಿಗಮದ ಹಗರಣ, ಎಸ್‌ಸಿಎಸ್‌ಪಿ ಟಿಎಸ್‌ಪಿ ಹಣ ದುರ್ಬಳಕೆ ಮಾಡಿಕೊಂಡಿರುವ ಕಾಂಗ್ರೆಸ್‌ನವರು ಯಾವ ನೈತಿಕತೆ ಇಟ್ಟುಕೊಂಡು ಜನಾಂದೋಲನ ಯಾತ್ರೆ ಮಾಡುತ್ತಿದ್ದಾರೆ ಎಂದು ಪ್ರಶ್ನಿಸಿದರು. ಅಹಿಂದ ಹೆಸರೇಳಿಕೊಂಡು ಅಧಿಕಾರದ ಚುಕ್ಕಾಣಿ ಹಿಡಿದಿರುವ ರಾಜ್ಯ ಕಾಂಗ್ರೆಸ್ ಸರ್ಕಾರ ಈಗ ಅಹಿಂದ ವರ್ಗಕ್ಕೆ ದ್ರೋಹ ಬಗೆಯುತ್ತಿದೆ. ಕಾಂಗ್ರೆಸ್ ಸರ್ಕಾರದಲ್ಲಿ ಭ್ರಷ್ಟಾಚಾರ ಮಿತಿ ಮೀರಿದ್ದು, ತುಳಿತಕ್ಕೊಳಗಾದ ವರ್ಗಕ್ಕೆ ಅನ್ಯಾಯ ಮಾಡುತ್ತಿದೆ. ಈ ಹಿನ್ನೆಲೆಯಲ್ಲಿ ತಪ್ಪಿತಸ್ಥರಿಗೆ ಶಿಕ್ಷೆ ಆಗಬೇಕು ಎಂದು ಆಗ್ರಹಿಸಿದರು. ತಮ್ಮನ್ನು ಏಕವಚನದಲ್ಲಿ ನಿಂದಿಸಿರುವ ಡಿ.ಕೆ.ಶಿವಕುಮಾರ್ ಬಗ್ಗೆ ಪ್ರತಿಕ್ರಿಯೆ ನೀಡಲು ನಿರಾಕರಿಸಿದ ವಿಜಯೇಂದ್ರ, ಅಧಿಕಾರ ಬಂದ ಸಂದರ್ಭದಲ್ಲಿ ಕಾಂಗ್ರೆಸ್‌ನವರಲ್ಲಿ ಇಂತಹ ವರ್ತನೆ ಸಹಜ ಎಂದು ಟೀಕಿಸಿದರು. ಮುಡಾ ಹಾಗೂ ವಾಲ್ಮೀಕಿ ಹಗರಣದ ವಿರುದ್ಧ ಬೆಂಗಳೂರಿನಿಂದ ಇಂದು ಪಾದಯಾತ್ರೆ ಆರಂಭಿಸಿದ್ದೇವೆ. ಪಾದಯಾತ್ರೆ ಯಶಸ್ವಿಗೆ ತಾಯಿ ಚಾಮುಂಡೇಶ್ವರಿ ದೇವಿಗೆ ವಿಶೇಷ ಪ್ರಾರ್ಥನೆ ಸಲ್ಲಿಸಿದ್ದೇನೆ. ಯಾವುದೇ ಕಾರಣಕ್ಕೂ ಪಾದಯಾತ್ರೆ ಮೊಟಕುಗೊಳ್ಳುವುದಿಲ್ಲ. ಬೆಂಗಳೂರಿನಿಂದ ಮೈಸೂರು ತನಕ ಪಾದಯಾತ್ರೆ ನಡೆಯುತ್ತದೆ ಎಂದು ಸ್ಪಷ್ಟಪಡಿಸಿದರು. ಇಂದು ಮುಂಜಾನೆಯೇ ವಿಜಯೇಂದ್ರ ಪತ್ನಿ ಸಮೇತ ಚಾಮುಂಡೇಶ್ವರಿ ದೇವಿಗೆ ಪೂಜೆ ಸಲ್ಲಿಸಿದರು. ಬಿಜೆಪಿ ನಗರಾಧ್ಯಕ್ಷ ಎಲ್.ನಾಗೇಂದ್ರ, ರಾಜ್ಯ ಉಪಾಧ್ಯಕ್ಷ ರಾಜೇಂದ್ರ, ಹಿಂದುಳಿದ ಮೋರ್ಚಾ ರಾಜ್ಯಾಧ್ಯಕ್ಷ ಕೌಟಿಲ್ಯ ರಘು, ಜಿಲ್ಲಾಧ್ಯಕ್ಷ ಎಲ್.ಆರ್.ಮಹದೇವಸ್ವಾಮಿ ಹಾಜರಿದ್ದರು.

ವಾಲ್ಮೀಕಿ ಭವನ ನಿರ್ಮಾಣಕ್ಕೆ ಮೀಸಲಿಟ್ಟ ಭೂಮಿ ಕೈ ತಪ್ಪಿಸಿದವರ ವಿರುದ್ಧ ಕ್ರಮಕ್ಕೆ ಆಗ್ರಹ



ಕರ್ನಾಟಕ ವೀರ ಕೇಸರಿ ಪಡೆಯಿಂದ ಗಾಂಧಿ ಚೌಕದ ಮುಂಭಾಗ ಶ್ರೀ ಮಹರ್ಷಿ ವಾಲ್ಮೀಕಿ ಭವನಕ್ಕೆ ಮೀಸಲಿಟ್ಟ ಭೂಮಿ ಕೈ ತಪ್ಪಿಸಿರುವವರ ವಿರುದ್ಧ ಕ್ರಮ ಕೈಗೊಳ್ಳುವಂತೆ ಆಗ್ರಹಿಸಿ ಪ್ರತಿಭಟನೆ ನಡೆಸಲಾಯಿತು.

ಮೈಸೂರು, ಆ.3(ಜಿಎ)– ಶ್ರೀ ಮಹರ್ಷಿ ವಾಲ್ಮೀಕಿ ಭವನಕ್ಕೆ ಮೀಸಲಿಟ್ಟ ಭೂಮಿಯನ್ನು ಕೈತಪ್ಪಿಸಿರುವವರ ವಿರುದ್ಧ ಕ್ರಮ ಕೈಗೊಳ್ಳುವಂತೆ ಆಗ್ರಹಿಸಿ ಕರ್ನಾಟಕ ವೀರಕೇಸರಿ ಪಡೆ ವತಿಯಿಂದ ನಗರದ ಗಾಂಧಿಚೌಕದ ಮುಂಭಾಗ ಅರೆಬೆತ್ತಲೆ ಪ್ರತಿಭಟನೆ ನಡೆಸಲಾಯಿತು.

ಪ್ರತಿಭಟನಾಕಾರರು ಮಾತನಾಡಿ, ವಾಲ್ಮೀಕಿ ಸಮುದಾಯದ ಮುಖಂಡರು ಸಮಗ್ರ ಗಿರಿಜನ ಅಭಿವೃದ್ಧಿ ಇಲಾಖೆಗೆ ಮೈಸೂರು ತಾಲೂಕು ಕಸಬಾ ಹೋಬಳಿ ಸರ್ವೆ ನಂ.92ರಲ್ಲಿ ಸರ್ಕಾರಿ ಜಮೀನು ಖಾಲಿ ಇದ್ದು, ಅದನ್ನು ವಾಲ್ಮೀಕಿ ಭವನ ನಿರ್ಮಾಣಕ್ಕೆ ಮಂಜೂರು ಮಾಡುವಂತೆ ಆರ್‌ಟಿಸಿ ಸಮೇತ ಮನವಿ ಮಾಡಲಾಗಿತ್ತು. ಅದರಂತೆ ತಹಸೀಲ್ದಾರ್ ಅವರು ಖಾಲಿ ಇರುವ ಜಮೀನನ್ನು ವಾಲ್ಮೀಕಿ ಭವನ ನಿರ್ಮಾಣಕ್ಕೆ ಕಾಯ್ದಿರಿಸಲು ಪತ್ರಮುಖೇನ ತಿಳಿಸಿ, ಭೂ ದಾಖಲೆಗಳ ಸಹಾಯಕ ನಿರ್ದೇಶಕರಿಗೆ ಸ್ಕೆಚ್ ಸಿದ್ಧಪಡಿಸಿ ತಾಲೂಕು ಕಚೇರಿಗೆ ನೀಡಿದರು. ಆದರೆ, ವಾಲ್ಮೀಕಿ ಭವನಕ್ಕೆ ಮೀಸಲಿಟ್ಟಿದ್ದ ಜಮೀನನ್ನು ಕೈ ತಪ್ಪಿಸಿ ಕಾನೂನು ಬಾಹಿರವಾಗಿ ಮಂಜೂರು ಮಾಡಲು ಪ್ರಾದೇಶಿಕ ಆಯುಕ್ತರ ಮೂಲಕ ಜಿಲ್ಲಾಧಿಕಾರಿಗಳ ಕಾರ್ಯಾಲಯಕ್ಕೆ ಶಿಫಾರಸ್ಸು ಮಾಡಿದ್ದಾರೆ ಎಂದು ದೂರಿದರು.

ಪ್ರತಿಭಟನೆಯಲ್ಲಿ ಅಧ್ಯಕ್ಷ ಮಧುವನ ಚಂದ್ರ, ಎಂ.ಕುಮಾರ್, ಎಸ್.ಮಹದೇವು, ಬಸವರಾಜು, ಮರಿಸ್ವಾಮಿ, ಸಿದ್ದರಾಜು, ರಾಮನಾಯಕ ಹೊಸಕೋಟೆ, ನಾಗತಿ ಓಬವ್ವ, ರಾಜೇಶ್ವರಿ ಸೇರಿದಂತೆ ಮತ್ತಿತರರು ಪಾಲ್ಗೊಂಡಿದ್ದರು.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy News papers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com, website: www.mysurumithra.com



ಮೈಸೂರು ಮಿತ್ರ


ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ | 45 | ಆಗಸ್ಟ್ 4 ಭಾನುವಾರ 2024

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸಂಪುಟ: 45 | ಸಂಚಿಕೆ: 110 | ಪುಟಗಳು: 12
ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

₹4



ಮುಡಾ, ವಾಲ್ಮೀಕಿ ನಿಗಮ ಹಗರಣ ಖಂಡಿಸಿ; ಬಿಜೆಪಿ–ಜೆಡಿಎಸ್

ಬೆಂಗಳೂರಿಂದ ಮೈಸೂರು ಚಲೋ ಆರಂಭ

■ಎಂಟು ದಿನಗಳ ಈ ಪಾದಯಾತ್ರೆಗೆ ಮಾಜಿ ಸಿಎಂಗಳಾದ ಹೆಚ್‌ಡಿಕೆ, ಬಿಎಸ್‌ವೈ ಚಾಲನೆ ■ನಮ್ಮ ಪಾದಯಾತ್ರೆ ಭ್ರಷ್ಟ ಕಾಂಗ್ರೆಸ್ ಸರ್ಕಾರವನ್ನು ಕಿತ್ತೊಗೆಯುವ ಶಕ್ತಿ ಹೊಂದಿದೆ ■ಉಭಯ ಪಕ್ಷಗಳ ನಾಯಕರಿಂದ ಕಾಂಗ್ರೆಸ್ ಸರ್ಕಾರದ ವಿರುದ್ಧ ವಾಗ್ದಾಳಿ





ಬೆಂಗಳೂರು ನಗರದ ಹೊರವಲಯದಲ್ಲಿ ನಗಾರಿ ಬಾರಿಸುವ ಮೂಲಕ ಮೈಸೂರು ಚಲೋ ಪಾದಯಾತ್ರೆಗೆ ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ, ಕೇಂದ್ರ ಸಚಿವರಾದ ಎಚ್.ಡಿ.ಕುಮಾರಸ್ವಾಮಿ, ಪ್ರಹ್ಲಾದ್ ಜೋಷಿ ಚಾಲನೆ ನೀಡಿದರು. ಕೇಂದ್ರ ಸಚಿವರಾದ ಶೋಭಾ ಕರಂದ್ಲಾಜೆ, ವಿ.ಸೋಮಣ್ಣ, ರಾಜ್ಯ ಬಿಜೆಪಿ ಉಸ್ತುವಾರಿ ರಾಧಾಮೋಹನ್ ದಾಸ್ ಅಗರ್ವಾಲ್, ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ, ವಿಪಕ್ಷ ನಾಯಕ ಆರ್. ಅಶೋಕ್, ಶಾಸಕ ಜಿ.ಟಿ.ದೇವೇಗೌಡ, ನಿಖಿಲ್ ಕುಮಾರಸ್ವಾಮಿ ಇನ್ನಿತರರು ಉಪಸ್ಥಿತರಿದ್ದರು.

ಬೆಂಗಳೂರು, ಆ.3(ಕೆಎಂಶಿ)– ರಾಜ್ಯದ ಸಂಪತ್ತು ಲೂಟಿ ಮಾಡಿ ದೆಹಲಿ ಕಾಂಗ್ರೆಸ್ ನಾಯಕರಿಗೆ ಸಾಗಿಸುವಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಸರ್ಕಾರ ನಿರತವಾಗಿದೆ ಎಂದು ಬಿಜೆಪಿ ಹಾಗೂ ಜೆಡಿಎಸ್ ಮುಖಂಡರು ಆರೋಪಿಸಿದ್ದಾರೆ.

ರಾಹುಲ್ ಗಾಂಧಿ ಸೇರಿದಂತೆ ಪಕ್ಷದ ನಾಯಕರಿಗೆ ಸಂಪನ್ಮೂಲ ಒದಗಿಸಲು ಹಗರಣಗಳ ಮೇಲೆ ಹಗರಣ ಮಾಡುತ್ತಿದೆ ಎಂದು ದೂರಿದ್ದಾರೆ. ಆರೋಪಗಳ ಸರಮಾಲೆ ಹೊತ್ತಿರುವ ಸಿದ್ದರಾಮಯ್ಯ ರಾಜೀನಾಮೆಗೆ ಒತ್ತಾಯಿಸಿ ಮೈಸೂರು ಚಲೋ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ, ಕೇಂದ್ರ ಸಚಿವರಾದ ಎಚ್.ಡಿ.ಕುಮಾರಸ್ವಾಮಿ, ಪ್ರಹ್ಲಾದ್ ಜೋಷಿ, ರಾಜ್ಯ ಬಿಜೆಪಿ ಉಸ್ತುವಾರಿ ರಾಧಾಮೋಹನ್ ದಾಸ್ ಅಗರ್ವಾಲ್, ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ, ವಿಪಕ್ಷ ನಾಯಕ ಆರ್. ಅಶೋಕ್ ಸೇರಿದಂತೆ ಎನ್‌ಡಿಎ ಮುಖಂಡರು ಕಾಂಗ್ರೆಸ್ ಸರ್ಕಾರವನ್ನು ತರಾಟೆಗೆ ತೆಗೆದು ಕೊಂಡರು. ಈ ಪಾದಯಾತ್ರೆ ಕರ್ನಾಟಕದ ಭ್ರಷ್ಟ ಕಾಂಗ್ರೆಸ್ ಸರ್ಕಾರವನ್ನು ಕಿತ್ತೊಗೆಯುವ ಶಕ್ತಿ ಹೊಂದಿದೆ. ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದಲ್ಲಿ ನಿವೇಶನಗಳ ಹಂಚಿಕೆಯಲ್ಲಿ ನಾಲ್ಕರಿಂದ ಐದು ಸಾವಿರ ■6ನೇ ಪುಟಕ್ಕೆ

ಈ ಸರ್ಕಾರ ಇನ್ನು ಹತ್ತು ತಿಂಗಳು ಇರಲಿ ನೋಡ್ತೇವೆ...

ಬೆಂಗಳೂರು: ಇನ್ನೂ ಹತ್ತು ವರ್ಷ ನಮ್ಮದೇ ಅಧಿಕಾರ, ಸರ್ಕಾರ ಎಂಬುದಾಗಿ ಕಾಂಗ್ರೆಸ್ ನಾಯಕರು ಬೀಗುತ್ತಿದ್ದು, ಹತ್ತು ವರ್ಷದ ಮಾತಿರಲಿ, ಇನ್ನು ಹತ್ತು ತಿಂಗಳು ಅಧಿಕಾರದಲ್ಲಿ ಇರಲಿ ನೋಡೋಣ ಎಂದು ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಇಂದಿಲ್ಲಿ ಮಾರ್ಮಿಕವಾಗಿ ನುಡಿದರು.

ಬೆಂಗಳೂರಿನಿಂದ ಮೈಸೂರುವರೆಗೆ ಬಿಜೆಪಿ–ಜೆಡಿಎಸ್ ಹಮ್ಮಿಕೊಂಡಿರುವ ಮೈಸೂರು ಚಲೋ ಪಾದಯಾತ್ರೆ ಉದ್ಘಾಟನೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ನಿಮ್ಮ ಸರ್ಕಾರವನ್ನು ಯಾರೂ ಅಸ್ಥಿರ ಮಾಡುತ್ತಿಲ್ಲ, ಜನರು ಕೊಟ್ಟ ಅವಕಾಶವನ್ನು ನೀವೇ ಹಾಳು ಮಾಡಿಕೊಳ್ಳುತ್ತಿದ್ದೀರಿ, ಹಗರಣಗಳ ಮೇಲೆ ಹಗರಣಗಳನ್ನು ನಡೆಸಿ ಅಕ್ರಮ ಎಸಗಿದ್ದೀರಿ. ಈಗ

ಕುಮಾರಸ್ವಾಮಿ ಮಾರ್ಮಿಕ ನುಡಿ

ಜೆಡಿಎಸ್–ಬಿಜೆಪಿ ಪ್ರಶ್ನೆ ಮಾಡುತ್ತಿವೆ ಎನ್ನುತ್ತಿದ್ದೀರಿ ಎಂದು ಅವರು ವಾಗ್ದಾಳಿ ನಡೆಸಿದರು. ವಿಧಾನಸಭಾ ಚುನಾವಣೆ ನಂತರ ಅಧಿಕಾರಕ್ಕೆ ಬಂದು ಜನಪರ ಕೆಲಸ ಮಾಡುವುದನ್ನು ಬಿಟ್ಟು ಕಾನೂನುಬಾಹಿರ ಚಟುವಟಿಕೆಗಳು, ಭ್ರಷ್ಟಾಚಾರದಲ್ಲಿ ನಿರತರಾಗಿದ್ದೀರಿ. ಹಿಂದೆಂದೂ ಕಂಡಿರದಂತಹ ಭ್ರಷ್ಟ ಸರ್ಕಾರವನ್ನು ಕಾಣುತ್ತಿದ್ದೇವೆ. ಕಾಂಗ್ರೆಸ್ ನಾಯಕರು ಬಿಡದಿಯಲ್ಲಿ ಪ್ರಶ್ನೆ ಮಾಡಿದ್ದಾರೆ, ಮುಂದೆಯೂ ಪ್ರಶ್ನೆ ಮಾಡುತ್ತಾರಂತೆ, ಮಾಡಲಿ, ಅವರಿಗೆ ತಕ್ಕ ಉತ್ತರ ಕೊಡುತ್ತೇವೆ, ಅವರು ಕೇಳಿರುವ ಪ್ರಶ್ನೆಗಳಿಗೆ ಬಿಡದಿ, ರಾಮನಗರದಲ್ಲಿ ■6ನೇ ಪುಟಕ್ಕೆ

ಮುಡಾ ಹಗರಣದಲ್ಲಿ ನೈತಿಕ ಹೊಣೆ ಹೊತ್ತು ಸಿದ್ದರಾಮಯ್ಯ ರಾಜೀನಾಮೆ ಕೊಡಬೇಕು: ಬಿಎಸ್‌ವೈ

ಬೆಂಗಳೂರು, ಆ.3–ಮುಡಾ ಹಗರಣದ ಕಾರಣಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ನೈತಿಕ ಹೊಣೆ ಹೊತ್ತು ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ನೀಡಬೇಕು ಎಂದು ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಹೇಳಿದ್ದಾರೆ. ಈ ಕುರಿತು ಬೆಂಗಳೂರಿನಲ್ಲಿ ಮಾತನಾಡಿದ ಅವರು, ಸಿದ್ದರಾಮಯ್ಯ ಸರ್ಕಾರದ ಭ್ರಷ್ಟಾಚಾರ ವಿರುದ್ಧ ಐತಿಹಾಸಿಕ ಪಾದಯಾತ್ರೆ ಹಮ್ಮಿಕೊಂಡಿದ್ದೇವೆ. ಬೆಂಗಳೂರಿನಿಂದ ಮೈಸೂರಿನವರೆಗೂ ಪಾದಯಾತ್ರೆ ನಡೆಸುತ್ತೇವೆ. ಪ್ರತಿಯೊಂದು ಕಡೆ 8 ರಿಂದ 10 ಸಾವಿರ ಜನ ಸೇರುತ್ತಾರೆಂಬ ವಿಶ್ವಾಸ ಇದೆ. ಸಿದ್ದರಾಮಯ್ಯ ಅವರಿಗೆ ಇದು ಕೊನೆ ಅವಕಾಶ. ಅವರೇ ನೈತಿಕ ಹೊಣೆ ಹೊತ್ತು ರಾಜೀನಾಮೆ ನೀಡಬೇಕು. ರಾಜೀನಾಮೆ ಅವರಾಗಿಯೇ ಕೊಟ್ಟರೆ ಅವರಿಗೆ ಅದು ಶೋಭೆ ತರುತ್ತದೆ, ಪಕ್ಷಕ್ಕೆ ಗೌರವ ಸಿಗುತ್ತದೆ. ಇಲ್ಲದಿದ್ದರೆ ಅನಿವಾರ್ಯವಾಗಿ ರಾಜ್ಯಪಾಲರೇ ಕ್ರಮ ತೆಗೆದುಕೊಳ್ಳಬಹುದು. ■6ನೇ ಪುಟಕ್ಕೆ

ಸ್ಥಳಾಭಾವದಿಂದಾಗಿ 'ವಾರದ ಮಿತ್ರ' ಸಾಪ್ತಾಹಿಕ ಪುರವಣಿಯನ್ನು ಸೋಮವಾರದ ಸಂಚಿಕೆಯಲ್ಲಿ ಪ್ರಕಟಿಸುತ್ತಿದ್ದೇವೆ.–ಸಂ.

ಪ್ರವಾಹ ಪೀಡಿತ ಕೇರಳದಲ್ಲಿ ನೂರು ಮನೆ ನಿರ್ಮಾಣ

ಮುಖ್ಯಮಂತ್ರಿ ಸಿದ್ದರಾಮಯ್ಯ ಸಹಾಯಹಸ್ತ

ಬೆಂಗಳೂರು, ಆ.3(ಕೆಎಂಶಿ)–ಪ್ರವಾಹ ಪೀಡಿತ ಕೇರಳಕ್ಕೆ ರಾಜ್ಯದ ನೆರವನ್ನು ಇನ್ನಷ್ಟು ವಿಸ್ತರಿಸಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ, ನೂರು ಮನೆಗಳನ್ನು ನಿರ್ಮಿಸಿಕೊಡುವುದಾಗಿ ತಿಳಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಮುಖ್ಯಮಂತ್ರಿಗಳು, ಕೇರಳ ಮುಖ್ಯಮಂತ್ರಿ ಪಿಣರಾಯಿ ವಿಜಯನ್ ಅವರ ಜೊತೆ ದೂರವಾಣಿ ಮೂಲಕ ಮಾತನಾಡಿದ್ದು, ಅಗತ್ಯ ನೆರವು ವಿಸ್ತರಿಸುವುದಾಗಿ ತಿಳಿಸಿದ್ದೇನೆ ಎಂದರು. ಘಟನೆಯಲ್ಲಿ ನಾಪತ್ತೆಯಾಗಿರುವ ಕನ್ನಡಿಗರ ಒಟ್ಟು ಲೆಕ್ಕ ಸಿಗಲು ಇನ್ನಷ್ಟು ಸಮಯ ಬೇಕು, ರಕ್ಷಣಾ ಕಾರ್ಯಾಚರಣೆ ಪೂರ್ತಿ ಮುಗಿದ ಬಳಿಕ ತಿಳಿಯಲಿದೆ. ವಯನಾಡಿನಲ್ಲಿ 100 ಸುಸಜ್ಜಿತ ಮನೆಗಳನ್ನು ನಿರ್ಮಿಸಲು ತೀರ್ಮಾನಿಸಿದ್ದೇವೆ, ಯಾವ ಸ್ಥಳದಲ್ಲಿ ನಿರ್ಮಿಸಬೇಕು, ಯಾವ ವೆಚ್ಚದಲ್ಲಿ ನಿರ್ಮಿಸಬೇಕು ಎನ್ನುವುದನ್ನು ನಂತರ ತೀರ್ಮಾನಿಸಲಾಗುವುದು.




ಭ್ರಷ್ಟಾಚಾರಿಗಳಿಂದ... ಭ್ರಷ್ಟಾಚಾರಿಗಳಿಗೋಸ್ಕರ... ಭ್ರಷ್ಟಾಚಾರಿಗಳೇ ಪಾದಯಾತ್ರೆ ನಡೆಸುತ್ತಿದ್ದಾರೆ!

■ಬಿಜೆಪಿ–ಜೆಡಿಎಸ್‌ನ ಮೈಸೂರು ಚಲೋಗೆ ಡಿಸಿಎಂ ಡಿ.ಕೆ.ಶಿವಕುಮಾರ್ ವ್ಯಂಗ್ಯೋಕ್ತಿ ■ತಾಕತ್ತಿದ್ದರೆ ಪಾದಯಾತ್ರೆಗೆ ಕುಮ್ಮಕ್ಕು ಕೊಟ್ಟ ಕಾಂಗ್ರೆಸ್ಸಿಗರ ಹೆಸರನ್ನು ಬಹಿರಂಗಪಡಿಸಲಿ; ವಿಜಯೇಂದ್ರಗೆ ಸವಾಲು

ಬೆಂಗಳೂರು, ಆ.3– ಭ್ರಷ್ಟಾಚಾರಿಗಳಿಂದ, ಭ್ರಷ್ಟಾಚಾರಿಗಳಿಗೋಸ್ಕರ, ಭ್ರಷ್ಟಾಚಾರಿಗಳೇ ಪಾದಯಾತ್ರೆ ನಡೆಸುತ್ತಿದ್ದಾರೆ ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ವಿರೋಧ ಪಕ್ಷಗಳಾದ ಬಿಜೆಪಿ ಹಾಗೂ ಜೆಡಿಎಸ್ ಮೇಲೆ ತೀವ್ರ ವಾಗ್ದಾಳಿ ನಡೆಸಿದ್ದಾರೆ.

ಬಿಜೆಪಿ, ಜೆಡಿಎಸ್ ಹಮ್ಮಿಕೊಂಡಿರುವ ಪಾದಯಾತ್ರೆ ಹಿನ್ನೆಲೆಯಲ್ಲಿ ಬಿಡದಿಯಲ್ಲಿ ಶುಕ್ರವಾರ ಆರಂಭವಾದ ಜನಾಂದೋಲನ ಸಭೆಯಲ್ಲಿ ಮಾತನಾಡಿದ ಅವರು, ಕುಮಾರಸ್ವಾಮಿ ಹಾಗೂ ಬಿಜೆಪಿ ನಾಯಕರನ್ನು ತೀವ್ರ ತರಾಟೆಗೆ ತೆಗೆದುಕೊಂಡರು. ಈ ಪಾದಯಾತ್ರೆ ಮೂಲಕ ನಮಗೆ ಈ ಪವಿತ್ರವಾದ ಜನಾಂದೋಲನವನ್ನು ಹಮ್ಮಿಕೊಳ್ಳಲು ಅವಕಾಶ ಮಾಡಿಕೊಟ್ಟಿರುವ ಬಿಜೆಪಿ ಹಾಗೂ ಜೆಡಿಎಸ್ ನಾಯಕರಿಗೆ ಅಭಿನಂದನೆ ಸಲ್ಲಿಸುತ್ತೇನೆ. ನೀವು ಈ ಪಾದಯಾತ್ರೆ ಹಮ್ಮಿಕೊಳ್ಳದಿದ್ದರೆ, ಜನತಾ ದಳವನ್ನು ಬಿಜೆಪಿ ಜತೆ ವಿಲೀನ ಮಾಡದಿದ್ದರೆ, ನಾವು ಈ ಹೋರಾಟ ಮಾಡಲು ಸಾಧ್ಯವಾಗುತ್ತಿರಲಿಲ್ಲ ಎಂದು ಲೇವಡಿ ಮಾಡಿದರು. ಬಿಜೆಪಿ ಹಾಗೂ ಜೆಡಿಎಸ್‌ನವರು ಪಾದಯಾತ್ರೆ ಮೂಲಕ ಇಲ್ಲಿಗೆ ಬರುತ್ತಿದ್ದಾರೆ. ಇಲ್ಲಿಗೆ ಬಂದಾಗ



ಅವರು ನಮ್ಮ ಪ್ರಶ್ನೆಗಳಿಗೆ ಉತ್ತರ ನೀಡಬೇಕು. ಬಿಜೆಪಿ ಅವಧಿಯಲ್ಲಿ ಬೋವಿ ನಿಗಮದಲ್ಲಿ 87 ಕೋಟಿ, ಕೃಷಿ ಮಾರುಕಟ್ಟೆಗಳಲ್ಲಿ 47 ಕೋಟಿ ಅಕ್ರಮ ನಡೆದಿದೆ. ಈ ಹಗರಣ ನಡೆದಾಗ ಯಾರು ಮುಖ್ಯಮಂತ್ರಿ, ಯಾರು ಮಂತ್ರಿ, ಯಾರು ನಿಗಮದ ಅಧ್ಯಕ್ಷರಾಗಿದ್ದರು? ಈ ಬಗ್ಗೆ ನೀವು ಉತ್ತರ ನೀಡಬೇಕು. ನೀವು ಹೇಳದಿದ್ದರೆ ನಾವು ಹೇಳುತ್ತೇವೆ. ನಾವು ಹೇಳಲು ಇನ್ನು ಒಂದು ವಾರ ಕಾಲಾವಕಾಶವಿದೆ ಎಂದು ಹೇಳಿದರು. ದೇವರಾಜ ಅರಸು ಟ್ರಕ್ ಟರ್ಮಿನಲ್ ನಿಗಮದಲ್ಲಿ ವಿಧಾನಪರಿಷತ್ ಮಾಜಿ ಸದಸ್ಯ ಬಿಜೆಪಿಯ ವೀರಯ್ಯ ಅವರು 47 ಕೋಟಿ ರೂ. ನುಂಗಿದ್ದಾರೆ. ಈ ಅಕ್ರಮದಲ್ಲಿ ಭಾಗಿಯಾಗಿದ್ದಕ್ಕೆ ಆತ ಜೈಲು ಸೇರಿದ್ದಾನೆ. ಬಿಜೆಪಿ ಹಾಗೂ ಜೆಡಿಎಸ್‌ನವರು ಈ ಅಕ್ರಮದ ಬಗ್ಗೆ ಯಾಕೆ ಹೋರಾಟ ಮಾಡುತ್ತಿಲ್ಲ? ಈ ಅಕ್ರಮದ ತನಿಖೆಯನ್ನು ಅವರೇ ಯಾಕೆ ಮಾಡಿಸಲಿಲ್ಲ? ಹೀಗೆ ಅವರ ಕಾಲದಲ್ಲಿ ಆಗಿರುವ ಅಕ್ರಮಗಳ ದೊಡ್ಡ ಪಟ್ಟಿಯೇ ನಮ್ಮ ಬಳಿ ಇವೆ ಎಂದು ತಿಳಿಸಿದರು. ಕುಮಾರಣ್ಣ, ಅಶೋಕಣ್ಣ, ವಿಜಯೇಂದ್ರ ಅಶ್ವತ್ಥ್ ನಾರಾಯಣ, ಸಿ.ಟಿ ರವಿ ನೀವುಗಳು ನಮ್ಮ ಈ ಪ್ರಶ್ನೆಗಳಿಗೆ ಪಾದಯಾತ್ರೆ ವೇಳೆ ಉತ್ತರ ನೀಡಬೇಕು ಎಂದು ಆಗ್ರಹಿಸಿದರು. ವಿಜಯೇಂದ್ರ ನನ್ನ ಮೇಲೆ ಆರೋಪ ಮಾಡುತ್ತಾ, ಈ ಪಾದಯಾತ್ರೆ ಹಿಂದೆ ಕಾಂಗ್ರೆಸ್ಸಿಗರ ಕೈವಾಡವಿದೆ ಎಂದು ಹೇಳಿದ್ದಾನೆ. ಹೇ.. ವಿಜಯೇಂದ್ರ ನಿನಗೆ ತಾಕತ್ತಿದ್ದರೆ, ಧೈರ್ಯವಿದ್ದರೆ ನೀವು ಹೇಳಿದಂತೆ ಕಾಂಗ್ರೆಸ್ ಪಕ್ಷದ ಯಾವನು ಪಾದಯಾತ್ರೆಗೆ ಕುಮ್ಮಕ್ಕು ನೀಡಿದ್ದಾನೆ, ಅವನ ಹೆಸರು ಹೇಳು ಎಂದು ಡಿ.ಕೆ.ಶಿವಕುಮಾರ್ ಆಕ್ರೋಶ ವ್ಯಕ್ತಪಡಿಸಿದರು.

ರಾಜ್ಯಪಾಲರ ಶೋಕಾಸ್ ನೋಟಿಸ್; ಬಿಜೆಪಿ-ಜೆಡಿಎಸ್ ಪಾದಯಾತ್ರೆ ಹಿನ್ನೆಲೆ

ಮೈಸೂರಲ್ಲಿ ಆಪ್ತರೊಂದಿಗೆ ಸಿಎಂ ಸಿದ್ದರಾಮಯ್ಯ ಮಹತ್ವದ ರಹಸ್ಯ ಸಭೆ



ಮೈಸೂರಿನ ರಾಮಕೃಷ್ಣನಗರದ ತಮ್ಮ ನಿವಾಸದಲ್ಲಿ ಶನಿವಾರ ಮುಖ್ಯಮಂತ್ರಿ ಸಿದ್ದರಾಮಯ್ಯ ಆಪ್ತ ಸಚಿವರು, ಶಾಸಕರು ಹಾಗೂ ಮುಖಂಡರ ಸಭೆ ನಡೆಸಿದರು.

ಮೈಸೂರು, ಆ.3(ಬಿಎಲ್‌ಯು)– ಮುಡಾ ಹಗರಣದ ಸಂಬಂಧ ರಾಜ್ಯಪಾಲರು ಶೋಕಾಸ್ ನೋಟಿಸ್ ನೀಡಿದ್ದು, ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡುತ್ತಾರೆಯೇ ಎಂಬ ಬಗ್ಗೆ ಚರ್ಚೆ ನಡೆಯುತ್ತಿರುವ ಹಿನ್ನೆಲೆ ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದು ತಮ್ಮ ಕಾನೂನು ಸಲಹೆಗಾರ ಪೊನ್ನಣ್ಣ, ಆಪ್ತ ಸಚಿವರಾದ ಡಾ. ಹೆಚ್.ಸಿ.ಮಹದೇವಪ್ಪ ಹಾಗೂ ಕೆ.ವೆಂಕಟೇಶ್ ಜೊತೆ ಮಹತ್ವದ ರಹಸ್ಯ ಸಭೆ ನಡೆಸಿದರು.

ಕೊಡಗು ಪ್ರವಾಸ ಮುಗಿಸಿ ಮೈಸೂರಿಗೆ ಬಂದಿದ್ದ ಸಿದ್ದರಾಮಯ್ಯ, ರಾಮಕೃಷ್ಣನಗರದ ತಮ್ಮ ನಿವಾಸದಲ್ಲಿ ವಾಸ್ತವ್ಯ ಹೂಡಿದ್ದರು. ಮುಡಾ ಹಗರಣ ಸಂಬಂದ ರಾಜ್ಯಪಾಲರು ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡುವ ಸಂಬಂಧ ಶೋಕಾಸ್ ನೋಟಿಸ್ ಜಾರಿ ಮಾಡಿದ್ದಾರೆ. ಇದರ ಜೊತೆಗೆ ಮುಡಾ ಹಾಗೂ ವಾಲ್ಮೀಕಿ ನಿಗಮ ಹಗರಣದ ವಿರುದ್ಧ ಬಿಜೆಪಿ ಹಾಗೂ ಜೆಡಿಎಸ್ ಬೆಂಗಳೂರಿನಿಂದ ಇಂದು ಪಾದಯಾತ್ರೆ ಆರಂಭಿಸಿದೆ.

ಈ ಬೆಳವಣಿಗೆ ಸಹಜವಾಗಿಯೇ ಸಿದ್ದರಾಮಯ್ಯ ಅವರನ್ನು ವಿಚಲಿತರಾಗಿಸಿದೆ. ಈ ಹಿನ್ನೆಲೆಯಲ್ಲಿ ಮುಂದಿನ ಕಾರ್ಯತಂತ್ರ ರೂಪಿಸುವ ಬಗ್ಗೆ ಸಿದ್ದರಾಮಯ್ಯ ಇಂದು ಆಪ್ತರೊಂದಿಗೆ ಸಭೆ ನಡೆಸಿದರು. ಸುಮಾರು ಒಂದು ಮುಕ್ಕಾಲು ಗಂಟೆಗಳ ಕಾಲ ನಡೆದ ಸಭೆಯಲ್ಲಿ ಕಾನೂನು ಸಲಹೆಗಾರ ಪೊನ್ನಣ್ಣ ಅವರ ಜೊತೆ ಸಿದ್ದರಾಮಯ್ಯ ಚರ್ಚೆ ನಡೆಸಿದರು. ರಾಜ್ಯಪಾಲರು ನೀಡಿರುವ ಶೋಕಾಸ್ ನೋಟಿಸ್‌ಗೆ ಉತ್ತರ ನೀಡುವ ಸಂಬಂಧ ಏನೇನು ಅಂಶಗಳನ್ನು ಅಡಕ ಮಾಡಬೇಕು ಎಂಬ ಬಗ್ಗೆ ಚರ್ಚಿಸಿದರು ಎನ್ನಲಾಗಿದೆ. ಶೋಕಾಸ್ ನೋಟಿಸ್‌ಗೆ ನೀಡುವ ■6ನೇ ಪುಟಕ್ಕೆ

ಕಂಬಳಿ ಹೊದಿಸಲು ಬಂದವರಿಗೂ ಗದರಿದರು...

ಮುಖ್ಯಮಂತ್ರಿ ಸಿದ್ದರಾಮಯ್ಯನವರು ಎಂದಿನಂತಿಲ್ಲ. ಕೆಲವೊಮ್ಮೆ ಗಂಭೀರ; ಮತ್ತೆ ಕೆಲ ಹೊತ್ತಲ್ಲಿ ಲೋಕಾಭಿರಾಮವಾಗಿ ಮುಖಂಡರು, ಜನರೊಂದಿಗೆ ಬೆರೆಯುತ್ತಿದ್ದ ಅವರು, ಇತ್ತೀಚಿನ ಕೆಲ ರಾಜಕೀಯ ಬೆಳವಣಿಗೆಯಿಂದ ಬದಲಾದಂತೆ ಕಂಡುಬರುತ್ತಿದ್ದಾರೆ. ಸಾಮಾನ್ಯವಾಗಿ ಇಂದು ಕೆಲವರ ಮೇಲೆ ರೇಗಿದ ಪ್ರಸಂಗವೂ ನಡೆಯಿತು.

ಬ್ರೇಕ್‌ಫಾಸ್ಟ್ ಮೀಟಿಂಗ್‌ನಲ್ಲಿ ಮುಡಾ ಹಗರಣ ಸಂಬಂಧ ಸಲಹೆ ನೀಡಲು ಮುಂದಾದ ಮಾಜಿ ಶಾಸಕರೊಬ್ಬರಿಗೆ ಸಿದ್ದರಾಮಯ್ಯ ಗದರಿದ್ದಾರೆ. ಮನೆಯಿಂದ ಹೊರಡುವ ಸಂದರ್ಭದಲ್ಲಿ ಸಿದ್ದರಾಮಯ್ಯ ಯಾರೊಡನೆಯೂ ಮಾತನಾಡಲಿಲ್ಲ. ಈ ವೇಳೆ ಅಭಿಮಾನಿಯೊಬ್ಬ ಉಣ್ಣೆ ಕಂಬಳಿಯನ್ನು ಅವರ ಹೆಗಲ ಮೇಲೆ ಹಾಕಲು ಮುಂದಾದಾಗ ಸಿದ್ದರಾಮಯ್ಯ ಆತನಿಗೆ ಗದರಿದರು. ಇದರಿಂದ ತಬ್ಬಿಬ್ಬಾದ ಆತ ಹಿಂದೆ ಸರಿದ.

ಮನೆಯಿಂದ ಹೊರ ಬರುತ್ತಿದ್ದಂತೆ ಮಾಧ್ಯಮದವರ ಜೊತೆ ಮಾತನಾಡುತ್ತಿದ್ದ ಸಿದ್ದರಾಮಯ್ಯ, ಮಾಧ್ಯಮದವರತ್ತ ಕನಿಷ್ಠ ನೋಡದೆಯೂ ಕೆಲವರಿಂದ ಅಹವಾಲು ಸ್ವೀಕರಿಸಿ ಶಿರಾಡಿಘಾಟ್‌ನತ್ತ ತೆರಳಿದರು.

ದ್ವಿತೀಯ ಪಿಯು ಪರೀಕ್ಷೆ-3 ಫಲಿತಾಂಶ: ಶೇ.84.87 ವಿದ್ಯಾರ್ಥಿಗಳು ಉತ್ತೀರ್ಣ

ಬೆಂಗಳೂರು: 2024ನೇ ಸಾಲಿನ ದ್ವಿತೀಯ ಪಿಯುಸಿ ಮೂರು ಪರೀಕ್ಷೆಗಳ ಕ್ರೋಢೀಕೃತ ಫಲಿತಾಂಶವನ್ನು ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಳಿ ಶನಿವಾರ ಬಿಡುಗಡೆ ಮಾಡಿದೆ. ಶೇ 84.87 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದಾರೆ. ಇದೇ ಮೊದಲ ಬಾರಿಗೆ ವಾರ್ಷಿಕ ಮೂರು ಪರೀಕ್ಷೆಗಳು ನಡೆದಿದ್ದವು.

2023ನೇ ಸಾಲಿನ ಫಲಿತಾಂಶಕ್ಕೆ (ಶೇ. 74.67) ಹೋಲಿಸಿದರೆ, ಮೂರೂ ಪರೀಕ್ಷೆಗಳ ಕ್ರೋಢೀಕೃತ ಫಲಿತಾಂಶದಲ್ಲಿ ಶೇ 10.20ರಷ್ಟು ಏರಿದೆ. 2022ರಲ್ಲಿ ಶೇ 61.88ರಷ್ಟು ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದರು. ಅದೇ ರೀತಿ, 2024ರ ದ್ವಿತೀಯ ಪಿಯು ಪರೀಕ್ಷೆ-1ರ ಫಲಿತಾಂಶಕ್ಕೆ (ಶೇ. 81.15) ಹೋಲಿಸಿದರೆ ಕ್ರೋಢೀಕೃತ ಫಲಿತಾಂಶದಲ್ಲಿ ಶೇ 3.72 ಏರಿಕೆ ಆಗಿದೆ. ಗಣಿತ ವಿಷಯದಲ್ಲಿ 7,378 ಮತ್ತು ಜೀವ ವಿಜ್ಞಾನದಲ್ಲಿ 5,959, ಕನ್ನಡದಲ್ಲಿ 2,595, ಅರ್ಥಶಾಸ್ತ್ರದಲ್ಲಿ 1,452 ವಿದ್ಯಾರ್ಥಿಗಳು ನೂರಕ್ಕೆ ನೂರು ಅಂಕ ಗಳಿಸಿದ್ದಾರೆ. ಜಿಲ್ಲಾವಾರು ಫಲಿತಾಂಶದಲ್ಲಿ ದಕ್ಷಿಣ ಕನ್ನಡ (ಶೇ. 98.59), ಉಡುಪಿ (ಶೇ. 98.45), ಉತ್ತರ ಕನ್ನಡ (ಶೇ. 94.64) ಮೊದಲ ಮೂರು ಸ್ಥಾನಗಳನ್ನು ಪಡೆದಿವೆ. ಶಾಲಾ ಶಿಕ್ಷಣ ಸಚಿವ ಮಧು ಬಂಗಾರಪ್ಪ ಅವರು ಪ್ರತಿನಿಧಿಸುವ ಶಿವಮೊಗ್ಗ ಜಿಲ್ಲೆ 8ನೇ ಸ್ಥಾನ (ಶೇ. 91.9) ಪಡೆದಿದೆ. 536 ಶಾಲೆಗಳು ಮತ್ತು 71 ಸರ್ಕಾರಿ ಕಾಲೇಜುಗಳು ಶೇ 100 ಫಲಿತಾಂಶ ಪಡೆದಿವೆ.

ಐದನೇ ಪುಟದಿಂದ

ಮೈಸೂರು ಚಲೋ ಆರಂಭ

ಕೋಟಿ ರೂ. ಭ್ರಷ್ಟಾಚಾರ ನಡೆದಿದೆ. ಮಹರ್ಷಿ ವಾಲ್ಮೀಕಿ ನಿಗಮದಲ್ಲಿನ ದಲಿತರ ಹಣ ನುಂಗಿ ಹಾಕಿದ್ದಾರೆ, ಗಾಂಧಿ ಕುಟುಂಬಕ್ಕೆ ಕಪ್ಪಕಾಣಿಕೆ ನೀಡಲು ಕರ್ನಾಟಕವನ್ನು ಎಟಿಎಂ ಮಾಡಿಕೊಂಡಿದ್ದಾರೆ. ಪಾದಯಾತ್ರೆ ಅಂತಿಮಗೊಳ್ಳುವ ಮುನ್ನವೇ ಸಿದ್ದರಾಮಯ್ಯ ನೈತಿಕ ಹೊಣೆ ಹೊತ್ತು ರಾಜೀನಾಮೆ ನೀಡಬೇಕು. ಈ ಸರ್ಕಾರದ ವಿರುದ್ಧ ಬಂದಿರುವ ಭ್ರಷ್ಟಾಚಾರ ಆರೋಪದ ಬಗ್ಗೆ ರಾಜ್ಯಪಾಲರು ಕೂಲಂಕುಷವಾಗಿ ಪರಿಶೀಲಿಸಿ ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ಕ್ರಿಮಿನಲ್ ಪ್ರೊಸೀಜರ್ ದಾಖಲಿಸಲು ನೋಟಿಸ್ ಜಾರಿ ಮಾಡಿದ್ದಾರೆ.

ಈ ನೋಟಿಸ್ ಅನ್ನು ಸಿದ್ದರಾಮಯ್ಯ ಅವರು ಪ್ರಶ್ನಿಸುತ್ತಿದ್ದಾರೆ. ನಾವು ಒಗ್ಗಟ್ಟಾಗಿ ಪಾದಯಾತ್ರೆ ಕೈಗೊಳ್ಳುತ್ತಿರುವುದು ಈ ಸರ್ಕಾರದ ನಿಜ ಬಣ್ಣ ಬಯಲಾಗಿದೆ.

ಕಾಂಗ್ರೆಸ್‌ನವರು ಕಟ್ಟುಕಥೆ ಹೇಳುತ್ತಿದ್ದಾರೆ, ನಮಗೇ ಧಮ್ಕಿ ಹಾಕುತ್ತಿದ್ದಾರೆ. ಈ ಸರ್ಕಾರವನ್ನು ಕಿತ್ತೊಗೆಯುವವರೆಗೂ ವಿಶ್ರಮಿಸುವುದಿಲ್ಲ. ಸಿದ್ದರಾಮಯ್ಯ ಅವರ ಸಮಾಜವಾದಿ ಮುಖವಾಡ ಕಳಚಿಬಿದ್ದಿದೆ, ನಮ್ಮ ಹೋರಾಟ ಯಾವ ವ್ಯಕ್ತಿಯ ವಿರುದ್ಧವಲ್ಲ, ಭ್ರಷ್ಟಾಚಾರದ ವಿರುದ್ಧ ಎಂದರು. ಕುಂಟುನೆಪ ಹೇಳಿಕೊಂಡು ಅಧಿಕಾರದಲ್ಲಿ ಮುಂದುವರೆಯ ಬೇಡಿ, ನಿಮ್ಮನ್ನು ಅಧಿಕಾರದಿಂದ ಕೆಳಗಿಳಿಸಿ, ಬಿಜೆಪಿ-ಜೆಡಿಎಸ್ ಸರ್ಕಾರ ತರುವವರೆಗೂ ನಮ್ಮ ಹೋರಾಟ ನಿರಂತರ.

ನಮ್ಮ ಪಾದಯಾತ್ರೆ ಹೆಸರಿಗೆ ಹೋರಾಟ ತಡೆಗಟ್ಟಲು ಕಾಂಗ್ರೆಸ್ ಹುನ್ನಾರ ನಡೆಸಿದೆ, ಈಗಾಗಲೇ ಸಭೆಗಳನ್ನು ಮಾಡುತ್ತಿದ್ದಾರೆ, ಇಂತಹ ಗೊಡ್ಡು ಬೆದರಿಕೆಗಳಿಗೆ ನಾವು ಹೆದರುವುದಿಲ್ಲ. ರಾಜ್ಯದಲ್ಲಿ ಎಲ್ಲಿಯೇ ಕಾಂಗ್ರೆಸ್ ಅಧಿಕಾರಕ್ಕೆ ಬಂದರೂ ಅವರಿಗೆ ಭ್ರಷ್ಟಾಚಾರ ಹಾಸು ಹೊಕ್ಕಾಗಿದೆ, ಯುಪಿಎ ಅಧಿಕಾರದಲ್ಲಿ ಇದ್ದಾಗ ಭ್ರಷ್ಟಾಚಾರ ನಡೆಯುತ್ತಿತ್ತು ಆ ನಂತರ ಬಂದ ಅಟಲ್ ಬಿಹಾರಿ ವಾಜಪೇಯಿ ಮತ್ತು ನರೇಂದ್ರ ಮೋದಿ ಸರ್ಕಾರ ಕಾಂಗ್ರೆಸ್‌ನವರ ಹಗರಣಗಳನ್ನು ಬಯಲಿಗೆಳೆದು ಕೆಲವರಿಗೆ ಶಿಕ್ಷೆ ಕೊಡಿಸಿದೆ. ಕರ್ನಾಟಕದಲ್ಲೂ ಸಿದ್ದರಾಮಯ್ಯ ಸರ್ಕಾರ ಭ್ರಷ್ಟಾಚಾರದಲ್ಲಿ ಮುಳುಗಿದೆ ಎಂದರು.

ಇದಕ್ಕೂ ಮುನ್ನ ಬೆಂಗಳೂರು ನಗರದ ಹೊರವಲಯದಲ್ಲಿ ನಗಾರಿ ಬಾರಿಸುವ ಮೂಲಕ ಪಾದಯಾತ್ರೆ ಉದ್ಘಾಟಿಸಿದರು. ಆ ನಂತರ ಬಿ.ವೈ.ವಿಜಯೇಂದ್ರ ಹಾಗೂ ನಿಖಿಲ್ ಕುಮಾರಸ್ವಾಮಿ ನಾಯಕತ್ವದಲ್ಲಿ ಪಾದಯಾತ್ರೆ ಮುಂದುವರಿಯಿತು.

ಮೊದಲ ದಿನ ಸುಮಾರು 20 ಕಿಲೋಮೀಟರ್ ಪಾದಯಾತ್ರೆ ನಡೆದು ದಾರಿಯುದ್ದಕ್ಕೂ ಬಿಜೆಪಿ ಮತ್ತು ಜೆಡಿಎಸ್ ಮುಖಂಡರನ್ನು, ಕಾರ್ಯಕರ್ತರು ಅಲ್ಲಲ್ಲಿ ಪಟಾಕಿ ಸಿಡಿಸಿ ಸ್ವಾಗತಿಸಿದರು.

ಹತ್ತು ತಿಂಗಳು ಇರಲಿ ನೋಡ್ತೇವೆ...

ಉತ್ತರ ಕೊಡುತ್ತೇನೆ ಎಂದರು. ದೇವೇಗೌಡರು ರಾಮನಗರಕ್ಕೆ ಬಂದ ನಂತರ ಎಷ್ಟು ಆಸ್ತಿ ಮಾಡಿದ್ದಾರೆ ಎಂಬುದಾಗಿ ಉಪಮುಖ್ಯಮಂತ್ರಿ ಕೇಳಿದ್ದಾರೆ. ಅದಕ್ಕೂ ನಾವು ಉತ್ತರ ಕೊಡುತ್ತೇವೆ, ನಾವೂ ಕೂಡ ಅವರದ್ದು ಎಷ್ಟಿದೆ ಆಸ್ತಿ ಎನ್ನುವುದನ್ನು ಬಿಡುಗಡೆ ಮಾಡುತ್ತೇವೆ.

ಮುಖ್ಯಮಂತ್ರಿ ಹಾಗೂ ಉಪ ಮುಖ್ಯಮಂತ್ರಿ ಅವರುಗಳ ಅಕ್ರಮ ಆಸ್ತಿಗಳ ದಾಖಲೆ ಪತ್ರಗಳನ್ನು ಕೇಂದ್ರ ಸರ್ಕಾರಕ್ಕೆ ನಾನೇ ಕೊಟ್ಟಿದ್ದೇನೆ ಎಂದು ಅವರುಗಳು ಹೇಳಿಕೊಂಡು ತಿರುಗುತ್ತಿದ್ದಾರೆ. ನಮ್ಮನ್ನು ಬಂಧಿಸಲು ದೆಹಲಿಯಿಂದ ಬರುತ್ತಾರೆ. ಬಂಧನಕ್ಕೂ ನಾವು ಸಿದ್ಧವಿದ್ದೇವೆ ಅಂತಲೂ ಹೇಳಿಕೊಂಡಿದ್ದಾರೆ ಎಂದು ಲೇವಡಿ ಮಾಡಿದರು. ಹಿಂದುಳಿದ ವರ್ಗಗಳ ನಾಯಕರು ಎರಡನೇ ಬಾರಿ ಮುಖ್ಯಮಂತ್ರಿ ಆಗಿರುವುದಕ್ಕೆ ಕೆಲವರಿಗೆ ಹೊಟ್ಟೆ ಉರಿಯಿದೆ ಎನ್ನುತ್ತಾರೆ, ಇವರು ಒಳ್ಳೆಯ ಕೆಲಸ ಮಾಡಿದರೆ ಯಾರಿಗೆ ಹೊಟ್ಟೆ ಉರಿ ಬರುತ್ತದೆ. ಸುಖಾಸುಮ್ಮನೆ ಜನರ ಗಮನ ಬೇರೆಡೆಗೆ ಸೆಳೆಯಲು ನಾನು ಹಿಂದುಳಿದವನು, ಅದಕ್ಕೆ ಹೊಟ್ಟೆ ಉರಿ ಎಂದು ನಾಟಕ ಮಾಡುತ್ತಿದ್ದಾರೆ.

ಬರೀ ಬಾಯಲ್ಲಿ ಸಾಮಾಜಿಕ ನ್ಯಾಯ: ಮುಖ್ಯಮಂತ್ರಿ ಸಿದ್ದರಾಮಯ್ಯ ಸಾಮಾಜಿಕ ನ್ಯಾಯವೆಂದು ಹೇಳಿಕೊಂಡು ರಾಜಕೀಯ ಲಾಭ ಪಡೆಯುತ್ತಿರುವ ನಿಮ್ಮ ಆಡಳಿತಾವಧಿಯಲ್ಲಿ ಒಬ್ಬ ಅಧಿಕಾರಿ ಆತ್ಮಹತ್ಯೆ ಮಾಡಿಕೊಂಡಿದ್ದರು. ಆತ ನಿಮ್ಮದೇ ಸಮಾಜದ ಪೊಲೀಸ್ ಅಧಿಕಾರಿ. ಈಗಲೂ ಅದು ಮುಂದುವರಿದಿದೆ, ಡಾ.ಬಾಬಾ ಸಾಹೇಬ್ ಅಂಬೇಡ್ಕರ್ ಅವರಿಗೆ ಕೊಡುವ ಗೌರವ ಇದೇನಾ, ಇಂಥ ಸಾವುಗಳನ್ನು ತಡೆಯುವ ಶಕ್ತಿ ನಿಮಗೆ ಇಲ್ಲವೇ ಎಂದು ಮುಖ್ಯಮಂತ್ರಿ ಅವರನ್ನು ಕೇಂದ್ರ ಸಚಿವರು ತರಾಟೆಗೆ ತೆಗೆದುಕೊಂಡರು.

ಸಮಾಜದ ಕಟ್ಟಕಡೆಯ ವ್ಯಕ್ತಿಗೂ ಸಂವಿಧಾನದ ಹಕ್ಕಿದೆ. ಅದನ್ನು ಎತ್ತಿಹಿಡಿಯುವ ಕೆಲಸ ನಾವು ಮಾಡುತ್ತೇವೆ. ಪ್ರಧಾನಿ ನರೇಂದ್ರ ಮೋದಿ ಅವರ ನೇತೃತ್ವದಲ್ಲಿ ಈ ಕೆಲಸವನ್ನು ಶ್ರದ್ಧೆಯಿಂದ ಮಾಡುತ್ತಿದ್ದೇವೆ. ಮುಡಾ ಹಗರಣದಲ್ಲಿ ನಿಮ್ಮ ಹೆಸರು ಕೇಳಿಬಂದಿದೆ. ನೀವು ನಿವೇಶನ ಪಡೆದಿರುವುದಕ್ಕೆ ನಮಗೆ ಅಭ್ಯಂತರ ಇಲ್ಲ. ಆದರೆ, ಸರ್ಕಾರದ ಜಮೀನು ನಿಮ್ಮ ಬಾಮೈದನ ಹೆಸರಿಗೆ ಖರೀದಿಸಿ, ಆ ನಂತರ ಅವರ ಸಹೋದರಿಗೆ ಕೊಡುತ್ತೀರಿ. ಇದು ಹೇಗೆ ರವಾನೆಯಾಗಿದೆ ಎನ್ನುವುದು ನಿಮಗೆ ಗೊತ್ತಿಲ್ಲವೇ ಸಿದ್ದರಾಮಯ್ಯನವರೇ ಎಂದು ಪ್ರಶ್ನಿಸಿದರು.

ನಾನು, ಯಡಿಯೂರಪ್ಪ ಸೇರಿ ವಾಲ್ಮೀಕಿ ನಿಗಮ ಸ್ಥಾಪನೆ ಮಾಡಿದೆವು, ದುರ್ಬಲರಿಗೆ ಶಕ್ತಿ ಬರಲಿ ಎನ್ನುವ ಒಳ್ಳೆಯ ಉದ್ದೇಶದಿಂದ ಈ ಕೆಲಸ ಮಾಡಿದೆವು. ಈ ನಿಗಮದಲ್ಲಿ 89 ಕೋಟಿ ರೂ. ಅಕ್ರಮ ಆಗಿದೆ ಎಂದು ನೀವೇ ಹೇಳಿದ್ದೀರಿ. ನಿಮ್ಮ ನಿಜವಾದ ಬಣ್ಣ ಬಯಲಾಗುತ್ತದೆ ಎಂದು ಹೆದರಿ ಕದ್ದು ಓಡಿದವರು ನೀವು. ಈಗ ನೋಡಿದರೆ ಮುಡಾ ಹಗರಣ ಮುಚ್ಚಿ ಹಾಕಲು ಮುಂದಾಗಿದ್ದೀರಿ ಎಂದರು.

ಪರಮೇಶ್ವರ್ ಅವರು ಹೇಳುತ್ತಾರೆ, ನಾವು ಬಣ್ಣ ಬದಲಾಯಿಸಿದ್ದೇವೆ ಎಂದು. ನನ್ನ ಬಣ್ಣ ಬದಲಾಗಲು ಸಾಧ್ಯವೇ ಇಲ್ಲ ಪರಮೇಶ್ವರ್‌ರವರೇ, ಇದು ಪರ್ಮನೆಂಟ್ ಬಣ್ಣ ಎಂದು ಗೃಹ ಸಚಿವರಿಗೆ ಟಾಂಗ್ ಕೊಟ್ಟರು. ಬಿಜೆಪಿ ಅಧ್ಯಕ್ಷ ವಿಜಯೇಂದ್ರ ಅವರ ಬಗ್ಗೆ ಏಕವಚನದಲ್ಲಿ ಮಾತನಾಡುತ್ತೀರಿ, ನಾನು, ಸಿದ್ದರಾಮಯ್ಯನವರ ಪರವಾಗಿದ್ದೇನೆ ಎನ್ನುತ್ತೀರಿ. ನಿಮ್ಮ ನಾಟಕ ಬಯಲಾಗುತ್ತದೆ, ಕಾದು ನೋಡಿ ಪರಮೇಶ್ವರ್ ಅವರೇ.

ಸಿ.ಡಿ. ಶಿವು ಅವರು, ಕಾಂಗ್ರೆಸ್ ಎದುರಿಸಲು ಬಿಜೆಪಿ ಜತೆಗೆ ಜೆಡಿಎಸ್ ಸೇರಿಕೊಂಡಿದೆ ಎಂದು ಹೇಳಿದ್ದಾರೆ, ನಿಮ್ಮನ್ನು ಬುಡಸಮೇತ ಕಿತ್ತೊಗೆಯಲು ನಾವು ಜೊತೆಯಾಗಿಯೇ ಇರುತ್ತೇವೆ ಎಂಬುದಾಗಿ ಅವರಿಗೆ ಹೇಳಲು ಬಯಸುತ್ತೇನೆ ಎಂದು ತಿರುಗೇಟು ಕೊಟ್ಟರು.

ಸಿದ್ದರಾಮಯ್ಯ ರಾಜೀನಾಮೆ ಕೊಡಬೇಕು: ಬಿಎಸ್‌ವೈ

ಇದಕ್ಕೆ ಅವಕಾಶ ಕೊಡದೇ ಸಿದ್ದರಾಮಯ್ಯ ರಾಜೀನಾಮೆ ಕೊಡಲಿ ಎಂದು ನಾನು ಸಲಹೆ ಕೊಡುತ್ತೇನೆ ಎಂದರು. ಸರ್ಕಾರದ ಭ್ರಷ್ಟಾಚಾರದ ಬಗ್ಗೆ ಜಗತ್ತಿಗೆ ವಾಸ್ತವ ಸ್ಥಿತಿ ತಿಳಿದಿದೆ. ಹೀಗಾಗಿ ಅವರು ಯಾವುದೇ ಆರೋಪಗಳಿಂದ ಮುಕ್ತಿ ಪಡೆಯಲು ಸಾಧ್ಯವಿಲ್ಲ. ರಾಜ್ಯಪಾಲ ಕಚೇರಿ ದುರ್ಬಳಕೆ ಎಂದು ಕಾಂಗ್ರೆಸ್ ಆರೋಪ ಮಾಡುತ್ತಿದೆ. ವಾಸ್ತವಿಕ ಸತ್ಯ ಸಂಗತಿ ದೇಶದ ಜನರಿಗೆ ಗೊತ್ತಿದೆ. ಈ ರೀತಿಯ ಆರೋಪ ಮಾಡುವುದರಿಂದ ಅವರು ಆರೋಪದಿಂದ ಮುಕ್ತ ಆಗಲು ಆಗುವುದಿಲ್ಲ. ಈ ರೀತಿಯ ಮಾತುಗಳಿಂದ ಅವರು ಬಚಾವ್ ಆಗಲು ಸಾಧ್ಯವಿಲ್ಲ ಎಂದು ಹೇಳಿದರು.

ಮಹತ್ವದ ರಹಸ್ಯ ಸಭೆ

ಉತ್ತರದಲ್ಲಿ ಯಾವುದೇ ಲೋಪವಾಗಬಾರದು. ಜೊತೆಗೆ ನಾವು ನೀಡುವ ಉತ್ತರ ನಾವು ನಡೆಸುವ ಕಾನೂನು ಹೋರಾಟಕ್ಕೆ ಪೂರಕವಾಗಿರಬೇಕು. ಶೋಕಾಸ್ ನೋಟಿಸ್‌ಗೆ ಉತ್ತರ ನೀಡಿದ ನಂತರ ರಾಜ್ಯಪಾಲರು ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿದರೆ ಮುಂದೆ ಯಾವ ರೀತಿ ಸವಾಲು ಎದುರಿಸಬೇಕು. ಕಾನೂನು ಕುಣಿಕೆಯಿಂದ ಹೇಗೆ ಪಾರಾಗಬೇಕು ಎಂಬ ಬಗ್ಗೆ ಪೊನ್ನಣ್ಣ ಜೊತೆ ಸಿದ್ದರಾಮಯ್ಯ ಚರ್ಚೆ ನಡೆಸಿದರು ಎನ್ನಲಾಗಿದೆ.

ಕಾನೂನು ಹೋರಾಟದ ಜೊತೆಗೆ ರಾಜಕೀಯವಾಗಿ ನಡೆಸುವ ಹೋರಾಟದ ಬಗ್ಗೆ ಕೂಡ ಇದೇ ವೇಳೆ ಡಾ.ಮಹದೇವಪ್ಪ ಹಾಗೂ ವೆಂಕಟೇಶ್ ಜೊತೆ ಸಿದ್ದರಾಮಯ್ಯ ಚರ್ಚಿಸಿದರು ಎನ್ನಲಾಗಿದೆ.

ಈ ಸಭೆಗೂ ಮುನ್ನ ಶಾಸಕರು, ಮಾಜಿ ಶಾಸಕರು ಹಾಗೂ ಆಪ್ತ ಕಾಂಗ್ರೆಸ್ ಮುಖಂಡರ ಜೊತೆ ಸಿದ್ದರಾಮಯ್ಯ ಬ್ರೇಕ್ ಫಾಸ್ಟ್ ಮೀಟಿಂಗ್ ನಡೆಸಿದರು. ಮುಡಾ ಹಗರಣ ಸಂಬಂಧ ರಾಜ್ಯಪಾಲರು ನೀಡಿರುವ ಶೋಕಾಸ್ ನೋಟಿಸ್ ಕುರಿತಂತೆ ಇಲ್ಲಿ ಕೂಡ ಚರ್ಚೆ ನಡೆಸಿದರು. ಶಾಸಕರಾದ ಎ.ಆರ್.ಕೃಷ್ಣ ಮೂರ್ತಿ, ಡಾ.ಯತೀಂದ್ರ, ಡಾ.ತಿಮ್ಮಯ್ಯ, ಪುಟ್ಟರಂಗಶೆಟ್ಟಿ, ಕೆ.ಹರೀಶ್ ಗೌಡ, ನರೇಂದ್ರ, ಮಾಜಿ ಸಂಸದ ಶಿವಣ್ಣ, ಮಾಜಿ ಶಾಸಕ ಹೆಚ್.ಪಿ.ಮಂಜುನಾಥ್, ಮರಿತಿಬ್ಬೇಗೌಡ, ಎಂ.ಕೆ.ಸೋಮಶೇಖರ್, ಕೆಪಿಸಿಸಿ ವಕ್ತಾರ ಎಂ.ಲಕ್ಷ್ಮಣ ಸೇರಿದಂತೆ ಹಲವರು ಸಭೆಯಲ್ಲಿ ಭಾಗವಹಿಸಿದ್ದರು.

ಅಹಿಂದ ಸಂಘಟನೆಗಳಿಂದ ಬಿಜೆಪಿ ಕಚೇರಿಗೆ ಮುತ್ತಿಗೆ ಯತ್ನ



ಬಿಜೆಪಿ ಮತ್ತು ಜೆಡಿಎಸ್ ಪಾದಯಾತ್ರೆ ಖಂಡಿಸಿ ರಾಜ್ಯ ಹಿಂದುಳಿದ ವರ್ಗಗಳ ಜಾಗೃತ ವೇದಿಕೆ ಶನಿವಾರ ನಗರದ ಬಿಜೆಪಿ ಕಚೇರಿಗೆ ಮುತ್ತಿಗೆ ಹಾಕಲು ಯತ್ನಿಸಿತು.

ಮೈಸೂರು,ಆ.3(ಜಿಎ)-ಬಿಜೆಪಿ ಮತ್ತು ಜೆಡಿಎಸ್ ಪಾದಯಾತ್ರೆ ಖಂಡಿಸಿ ರಾಜ್ಯ ಹಿಂದುಳಿದ ವರ್ಗಗಳ ಜಾಗೃತ ವೇದಿಕೆ ನಗರದ ಬಿಜೆಪಿ ಕಚೇರಿಗೆ ಮುತ್ತಿಗೆ ಹಾಕಲು ಯತ್ನಿಸಿ, ಪ್ರತಿಭಟನೆ ನಡೆಸಲಾಯಿತು.

ಮೈಸೂರಿನ ಏಕಲವ್ಯ ವೃತ್ತ (ಮಹಾರಾಜ ಕಾಲೇಜು ಮೈದಾನ) ಬಳಿ ಜಮಾವಣೆಗೊಂಡ ಪ್ರತಿಭಟನಾಕಾರರು '420 ವಿಜಯೇಂದ್ರ', 'ಅಹಿಂದ ವಿರೋಧಿ ಜೆಡಿಎಸ್, ಬಿಜೆಪಿಗೆ ಧಿಕ್ಕಾರ', 'ಗೋ ಬ್ಯಾಕ್ ಗವರ್ನರ್', ಬಿಜೆಪಿ ಕೈಗೊಂಬೆಯಾಗಿ ವರ್ತಿಸುತ್ತಿರುವ ರಾಜ್ಯಪಾಲರಿಗೆ ಧಿಕ್ಕಾರ' ಎಂಬ ವಿವಿಧ ಘೋಷಣೆಗಳನ್ನು ಕೂಗಿ ಕೃಷ್ಣರಾಜ ಬುಲೇವಾರ್ಡ್ ರಸ್ತೆ ಮೂಲಕ ಸಾಗಿ ನ್ಯಾಯಾಲಯದ ಮುಂಭಾಗವಿರುವ ಗಾಂಧಿ ಪುತ್ಥಳಿಗೆ ಮಾಲಾರ್ಪಣೆ ಮಾಡಿ ನಂತರ ಎಂ.ಜಿ. ರಸ್ತೆ ಮೂಲಕ ಬಿಜೆಪಿ ಕಚೇರಿಗೆ ಮುತ್ತಿಗೆ ಹಾಕಲು ಸಾಗಿದಾಗ ಪೊಲೀಸರು ಬ್ಯಾರಿಕೇಡ್‌ಗಳನ್ನು ಹಾಕಿ ಮುತ್ತಿಗೆಯನ್ನು ತಡೆದರು. ಯಾವುದೇ ಅಹಿತಕರ ಘಟನೆ ನಡೆಯದಂತೆ ಮುಂಜಾಗ್ರತೆ ಕ್ರಮವಾಗಿ ಪೊಲೀಸರು ಬಿಜೆಪಿ ಕಚೇರಿಗೆ ಸಂಪರ್ಕಿಸುವ ಎಲ್ಲಾ ರಸ್ತೆಗಳಲ್ಲಿ ಬಿಗಿ ಬಂದೋಬಸ್ತ್ ಮಾಡಲಾಗಿತ್ತು.

ಈ ವೇಳೆ ವೇದಿಕೆ ರಾಜ್ಯಾಧ್ಯಕ್ಷ ಕೆ.ಎಸ್.ಶಿವರಾಮ್ ಮಾತನಾಡಿ, ಸಿದ್ದರಾಮಯ್ಯ ಅವರ ಅಹಿಂದ ಧ್ವನಿ ಅಡಗಿಸಲು ಈ ಹುನ್ನಾರ ನಡೆಸಿವೆ. ಅವರ ಸಾಮಾಜಿಕ ಬದ್ಧತೆ, ಕೋಮುವಾದ ಖಂಡಿಸುವ ರೀತಿ ಇವರಿಗೆ ಹಿಡಿಸದಾಗಿದೆ. ಸಿದ್ದರಾಮಯ್ಯ ಅವರನ್ನು ಮುಗಿಸಲು ಷಡ್ಯಂತ್ರ ನಡೆಸಿದ್ದಾರೆ. ಅವರ ಪರವಾಗಿ ಅಹಿಂದ ಸಮುದಾಯ ನಿಲ್ಲಲಿದೆ ಎಂದರು.

ಸಿದ್ದರಾಮಯ್ಯ ಅವರನ್ನು ಸಿಎಂ ಸ್ಥಾನದಿಂದ ಕೆಳಗಿಳಿಸಲು ರಾಜಭವನಕ್ಕೆ ಕೇಂದ್ರ ಬಿಜೆಪಿ ನಾಯಕರು ಸುಪಾರಿ ನೀಡಿದ್ದು, ಬಿಜೆಪಿ-ಜೆಡಿಎಸ್ ಮುಡಾ ಹಾಗೂ ವಾಲ್ಮೀಕಿ ಹಗರಣ ಮುಂದಿಟ್ಟುಕೊಂಡು ಷಡ್ಯಂತ್ರ ನಡೆಸಿವೆ. ಈ ಎರಡೂ ಹಗರಣಗಳಲ್ಲಿ ತಮ್ಮ ಪಾತ್ರ ಇಲ್ಲ ಎಂದು ಸಿದ್ದರಾಮಯ್ಯ ಅವರು ದಾಖಲೆ ಸಮೇತ ತಿಳಿಸಿದ್ದಾರೆ. ಆದರೂ ಅವರನ್ನು ಸಿಎಂ ಸ್ಥಾನದಿಂದ ಕೆಳಗಿಳಿಸಲು ಬಿಜೆಪಿ-ಜೆಡಿಎಸ್ ಪಾದಯಾತ್ರೆ ಹಮ್ಮಿಕೊಂಡಿವೆ. ಬಹುಜನರ ರಾಜಕೀಯ ಧ್ವನಿಯಾಗಿರುವ ಸಿಎಂ ಅವರನ್ನು ದಮನ ಮಾಡಿದಲ್ಲಿ ಕೋಮುವಾದ, ಜಾತಿವಾದ ಮತ್ತೆ ಅಸ್ತಿತ್ವಕ್ಕೆ ತರಬಹುದೆಂಬುದು ಈ ಎರಡೂ ಪಕ್ಷಗಳ ಉದ್ದೇಶವಾಗಿದೆ ಎಂದು ಆರೋಪಿಸಿದರು.

ಪ್ರತಿಭಟನೆಯಲ್ಲಿ ಮುಖಂಡರಾದ ಸುಬ್ರಮಣ್ಯ, ಎನ್.ಆರ್.ನಾಗೇಶ್, ರವಿನಂದನ್, ಶಿವಣ್ಣ, ಯೋಗೇಶ್, ರಾಜಶೇಖರ್, ಲೋಕೇಶ್‌ಕುಮಾರ್, ಹೆಚ್.ಎಸ್.ಪ್ರಕಾಶ್, ಸಿದ್ದು, ದಸಂಸ ಸಂಚಾಲಕ ದೇವಗಳ್ಳಿ ಸೋಮಶೇಖರ್, ಮಲ್ಲೇಶ್, ಎನ್. ಭಾಸ್ಕರ್, ಕೆಂಡಗಣ್ಣ ಶಿವಪ್ಪ ಕೋಟೆ, ಸ್ವಾಮಿಗೌಡ, ಜೆ.ಜೆ.ಆನಂದ್, ರಾಜೇಶ್, ನಾಸೀರ್, ಸಲೀ ಅಹ್ಮದ್, ರಹೀಂ ಖಾನ್, ಹರೀಶ್ ಮುಗಣ್ಣ ಸೇರಿದಂತೆ ನೂರಾರು ಮಂದಿ ಪಾಲ್ಗೊಂಡಿದ್ದರು.

ಕೆಎಎಸ್ ಪರೀಕ್ಷೆ ಆ.25ರ ಬದಲು ಬೇರೆ ದಿನ

ಬೆಂಗಳೂರು, ಆ. 3- 2023-24ನೇ ಸಾಲಿನ ಗೆಜೆಟೆಡ್ ಪ್ರೊಬೇಷನರಿ 384 ಹುದ್ದೆಗಳಿಗೆ ಪೂರ್ವಭಾವಿ ಪರೀಕ್ಷೆಯ ಹೊಸ ದಿನಾಂಕವನ್ನು ಕೆಪಿಎಸ್‌ಸಿ ಶೀಘ್ರದಲ್ಲಿಯೇ ಪ್ರಕಟಿಸಲಿದೆ ಎಂದು ಮುಖ್ಯಮಂತ್ರಿ ತಿಳಿಸಿದ್ದಾರೆ.



ಎಕ್ಸ್ ಖಾತೆಯಲ್ಲಿ ಈ ಮಾಹಿತಿ ಹಂಚಿಕೊಂಡಿರುವ ಮುಖ್ಯಮಂತ್ರಿ, ಪೂರ್ವಭಾವಿ ಪರೀಕ್ಷೆಯನ್ನು ಕೆಪಿಎಸ್‌ಸಿ ಆ. 25ರಂದು ನಡೆಸಲು ನಿರ್ಧರಿಸಿತ್ತು. ಅದೇ ದಿನ ಬ್ಯಾಂಕಿಂಗ್ ಸಿಬ್ಬಂದಿ ನೇಮಕಾತಿ ಸಂಸ್ಥೆಯು (ಐಬಿಪಿಎಸ್) ಗುಮಾಸ್ತ ಹುದ್ದೆಗಳಿಗೆ ಪರೀಕ್ಷೆ ನಡೆಸಲಿದೆ. ಈ ಬಗ್ಗೆ ಕೆಪಿಎಸ್‌ಸಿ ಜೊತೆ ಚರ್ಚಿಸಿದ್ದು, ಐಬಿಪಿಎಸ್ ಪರೀಕ್ಷಾರ್ಥಿಗಳ ಹಿತದೃಷ್ಟಿಯಿಂದ ಗೆಜೆಟೆಡ್ ಪ್ರೊಬೇಷನರಿ ಪರೀಕ್ಷೆಯನ್ನು ಕೆಲ ದಿನಗಳಿಗೆ ಮುಂದೂಡುವಂತೆ ಸಲಹೆ ನೀಡಿದ್ದೇನೆ ಎಂದಿದ್ದಾರೆ. ಗೆಜೆಟೆಡ್ ಪ್ರೊಬೇಷನರಿ ಪರೀಕ್ಷೆಗೆ ಅಗತ್ಯ ಸಿದ್ಧತೆಗಳು ಆಗಿರುವ ಕಾರಣ ಆಗಸ್ಟ್ ತಿಂಗಳಲ್ಲೇ ಬೇರೊಂದು ದಿನ ಪರೀಕ್ಷೆ ನಡೆಸುವಂತೆ ಸಲಹೆ ನೀಡಿದ್ದೇನೆ ಎಂದು ಮುಖ್ಯಮಂತ್ರಿ ತಿಳಿಸಿದ್ದಾರೆ.

ಆ.6, ಶ್ರೀನಿವಾಸ್ ಪ್ರಸಾದ್ ಜನ್ಮದಿನ ಆಚರಣೆ



ಮೈಸೂರು, ಆ.3(ಜಿಎ)-ದಿವಂಗತ ಮಾಜಿ ಸಂಸದ ವಿ. ಶ್ರೀನಿವಾಸ ಪ್ರಸಾದ್ ಅವರ ಅಭಿಮಾನಿಗಳನ್ನು ಒಳಗೊಂಡಿರುವ ಟ್ರಸ್ಟ್ ವತಿಯಿಂದ ಪ್ರಸಾದ್ ಅವರ 77ನೇ ಜನ್ಮದಿನದ ಪ್ರಯುಕ್ತ ಆ.6ರಂದು ನಗರದ ಒಡನಾಡಿ ಸಂಸ್ಥೆಯಲ್ಲಿ 'ಪ್ರಸಾದ್ ನೆನಪು' ಹಾಗೂ ನಂತರ ಮಾನಸ ಗಂಗೋತ್ರಿ ಡಾ.ಬಿ.ಆರ್.ಅಂಬೇಡ್ಕರ್ ಸಂಶೋಧನಾ ಮತ್ತು ವಿಸ್ತರಣಾ ಕೇಂದ್ರದಲ್ಲಿ 'ಶ್ರೀನಿವಾಸ್ ಪ್ರಸಾದ್: ವ್ಯಕ್ತಿತ್ವ ವಿಚಾರ ಮಂಡನೆ ಕಾರ್ಯಕ್ರಮ ಆಯೋಜಿಸಲಾಗಿದೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಟ್ರಸ್ಟಿ ಮುಳ್ಳೂರು ನಂಜುಂಡಸ್ವಾಮಿ ಈ ವಿಷಯ ತಿಳಿಸಿ, ಅಂದು ಬೆಳಗ್ಗೆ 9 ಗಂಟೆಗೆ ಒಡನಾಡಿ ಸಂಸ್ಥೆಯಲ್ಲಿ ಪ್ರಸಾದ್ ಕುಟುಂಬದವರು ಪಾಲ್ಗೊಳ್ಳುವ ಕಾರ್ಯಕ್ರಮವಿದೆ. ನಂತರ 10.30ಕ್ಕೆ ಮಾನಸಗಂಗೋತ್ರಿ ಡಾ.ಬಿ.ಆರ್. ಅಂಬೇಡ್ಕರ್ ಸಂಶೋಧನಾ ಮತ್ತು ವಿಸ್ತರಣಾ ಕೇಂದ್ರದಲ್ಲಿ ಡಾ.ಕಲ್ಯಾಣಸಿರಿ ಭಂತೇಜಿ ಅವರ ಸಾನ್ನಿಧ್ಯದಲ್ಲಿ ಜನ್ಮದಿನಾಚರಣೆ ನಡೆಯಲಿದ್ದು, ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ಚಾಲನೆ ನೀಡುವರು. ಹಿರಿಯ ಪತ್ರಕರ್ತ ರವೀಂದ್ರ ಭಟ್ಟ ಅವರು ವಿ.ಶ್ರೀನಿವಾಸ ಪ್ರಸಾದ್-ವ್ಯಕ್ತಿತ್ವ ಕುರಿತು ಮಾತನಾಡುವರು, ಪ್ರಸಾದ್ ಅವರ ಹೋರಾಟದ ನೆಲೆಗಳು ಕುರಿತು ಡಾ.ಬಂಜಗೆರೆ ಜಯಪ್ರಕಾಶ್ ಮಾತನಾಡುವರು. ಕೆ.ಆರ್. ರಮೇಶ್‌ಕುಮಾರ್ ಅಧ್ಯಕ್ಷತೆ ವಹಿಸಲಿದ್ದಾರೆ ಎಂದು ತಿಳಿಸಿದರು. ಸುದ್ದಿಗೋಷ್ಠಿಯಲ್ಲಿ ಶಾಂತಾರಾಮ ಶೆಟ್ಟಿ, ಪ್ರಕಾಶ್, ಭರತ್ ರಾಮಸ್ವಾಮಿ, ಆರ್.ವೆಂಕಟರಾಜ್, ಶಿವಕುಮಾರ್ ಉಪಸ್ಥಿತರಿದ್ದರು.

ಇಂದು ವಿಷ್ಣುವರ್ಧನ್ ಸ್ಮರಣಾರ್ಥ ಆರ್ಕೆಸ್ಟ್ರಾ



ಮೈಸೂರು, ಆ.3(ಜಿಎ)-ಮೂನ್ ಲೈಟ್ ಆರ್ಕೆಸ್ಟ್ರಾ ತಂಡದ ವತಿಯಿಂದ ಆ.4ರಂದು ಸಂಜೆ 5 ಗಂಟೆಗೆ ನಗರದ ಜಗನ್ಮೋಹನ ಅರಮನೆ ಸಭಾಂಗಣದಲ್ಲಿ ಡಾ.ವಿಷ್ಣುವರ್ಧನ್ ನೆನಪಿನ ಆರ್ಕೆಸ್ಟ್ರಾ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ತಂಡದ ಸ್ಟ್ಯಾನ್ಲಿ ಪಾರ್ಕರ್ ತಿಳಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಾರ್ಯಕ್ರಮದಲ್ಲಿ ಸಾಹಸಸಿಂಹ ವಿಷ್ಣುವರ್ಧನ್ ಅವರ ಚಲನಚಿತ್ರಗಳ ಸುಮಾರು 30 ಗೀತೆ ಹಾಡಲಾಗುವುದು. ಇದು ಸಂಪೂರ್ಣ ಉಚಿತ ಪ್ರವೇಶದ್ದಾಗಿದ್ದು, ಸಮೂಹ ನೃತ್ಯಗಳೂ ಇರಲಿವೆ. ರಶ್ಮಿ ನಾರಾಯಣ್ ಹಾಗೂ ಇನ್ನಿತರರು ಹಾಡಲಿದ್ದಾರೆ ಎಂದು ತಿಳಿಸಿದರು. ಸುದ್ದಿಗೋಷ್ಠಿಯಲ್ಲಿ ಸ್ಟ್ಯಾನಿ ಮರ್ಸನ್, ಆನಂದಶೆಟ್ಟಿ, ರಶ್ಮಿ ನಾರಾಯಣ್ ಉಪಸ್ಥಿತರಿದ್ದರು.

ಬಿ.ವೈ.ವಿಜಯೇಂದ್ರಗೆ ಸ್ವಾಗತ...



ಮೈಸೂರಿನ ಚಾಮುಂಡಿಬೆಟ್ಟಕ್ಕೆ ಕುಟುಂಬ ಸಮೇತರಾಗಿ ಭೇಟಿ ನೀಡಿದ್ದ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಅವರನ್ನು ಬಿಜೆಪಿ ಮುಖಂಡ ಹದಿನಾರು ಗುರುಪಾದಸ್ವಾಮಿ ಗುಲಾಬಿ ಹಾರ ಹಾಕಿ, ಸ್ವಾಗತಿಸಿದರು. ಈ ಸಂದರ್ಭದಲ್ಲಿ ರೈತ ಮೋರ್ಚಾ ನಗರ ಪ್ರಧಾನ ಕಾರ್ಯದರ್ಶಿ ಜಿ.ಎಂ.ಪಂಚಾಕ್ಷರಿ, ಮೈಸೂರು ನಗರ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಕೇಬಲ್ ಮಹೇಶ, ಮುಖಂಡರಾದ ದೂರ ರಾಜಣ್ಣ, ಪ್ರತಾಪ್, ಶ್ರೀಮತಿ ಲಕ್ಷ್ಮಿದೇವಿ, ನವೀನ್, ಮಹೇಂದ್ರ ಶೈವ, ಹರೀಶ್ ಇನ್ನಿತರರಿದ್ದರು.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

4.08.2024 ಭಾನುವಾರ, ಮಳೆ ನಕ್ಷತ್ರ: ಆಶ್ಲೇಷ 03.08.2024 ರಿಂದ 12.08.2024
ಕ್ರೋಧಿನಾಮ ಸಂವತ್ಸರ, ದಕ್ಷಿಣಾಯನ, ಗ್ರೀಷ್ಮ ಋತು, ಆಷಾಢ ಮಾಸ, ಕೃಷ್ಣ ಪಕ್ಷ,
ತಿಥಿ: ಅಮಾವಾಸ್ಯೆ, ನಕ್ಷತ್ರ: ಪುಷ್ಯ, ರಾಹುಕಾಲ: ಸಂಜೆ 4.30 ರಿಂದ 6ರವರೆಗೆ


ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ-ಲಲಿತ ಹೊಸಪ್ಯಾಟಿ, 6.15 ಗೀತಾರಾಧನ, 6.35 ಮತ್ತು ಸಂಜೆ 6.10 ಸಿನೆಮಾಯಾನ-ಕನ್ನಡ ಕಲಾತ್ಮಕ ಚಿತ್ರಗಳ ಪರಿಚಯ ಮಾಲಿಕೆ, ಪ್ರಸ್ತುತಿ : ಶ್ರೀನಿವಾಸ್ ಪ್ರಸಾದ್, 6.40 ಅರಿವಿನ ಶಿಖರ : ಸರ್ವಜ್ಞನ ತ್ರಿಪದಿಗಳನ್ನಾಧರಿಸಿದ ಬಾನುಲಿ ಸರಣಿ, ಗಾಯನ : ನಿತಿನ್ ರಾಜಾರಾಂ ಶಾಸ್ತ್ರಿ, ವ್ಯಾಖ್ಯಾನ: ಕೆಎಲ್.ಪದ್ಮಿನಿ ಹೆಗಡೆ, 6.50 ರೈತರಿಗೆ ಸಲಹೆ, 7.15 'ಸಮಗ್ರ ವಿಕಾಸಕ್ಕಾಗಿ ದಿಟ್ಟ ಹೆಜ್ಜೆ' ಪ್ರಾಯೋಜಿತ ಕಾರ್ಯಕ್ರಮ, ಪ್ರಾಯೋಜಕರು: ವಿಕಾಸ ಅಕಾಡೆಮಿ, ಕಲಬುರ್ಗಿ, 8.30 ಕನ್ನಡ ಚಿತ್ರಗೀತೆಗಳು, 9.15 ಅಂಗಾಂಗ ದಾನ ಕುರಿತ ರೂಪಕ 'ಹೊದಿಕೆ', ನಿರ್ಮಾಣ: ಪಿ.ಎಂ.ಜಗದೀಶ್, 9.40 ನಮ್ಮ ಆರೋಗ್ಯ ಕಾರ್ಯಕ್ರಮ: ವಿಶ್ವ ಸ್ತನ್ಯಪಾನ ಸಪ್ತಾಹದ ಸಂದರ್ಭದಲ್ಲಿ 'ನವಜಾತ ಶಿಶುಗಳ ಆರೈಕೆ ಮತ್ತು ಸ್ತನ್ಯಪಾನದ ಅಗತ್ಯ' ಕುರಿತು ನವಜಾತ ಶಿಶು ತಜ್ಞರಾದ ಡಾ.ಶ್ರುತಿ ಪುರುಷೋತ್ತಮ್ ಅವರೊಂದಿಗೆ ಮಾತುಕತೆ. ಇವರೊಂದಿಗೆ ಭಾಗವಹಿಸುತ್ತಾರೆ: ಬೇದ್ರೆ ಮಂಜುನಾಥ್, 10.00 ಕೇಳಿ ಗಿಳಿಗಳೇ: ಕಥೆ ಹೇಳ್ತೀಯೋ ಹಾಡು ಹೇಳ್ತೀಯೋ ನೇರ ಫೋನ್ ಇನ್ ಕಾರ್ಯಕ್ರಮ, 10.30 ಮಕ್ಕಳ ಮಂಟಪ: ಮೈಸೂರಿನ ಶಕ್ತಿಧಾಮ ವಿದ್ಯಾಶಾಲೆಯ ಮಕ್ಕಳಿಂದ ಕಾರ್ಯಕ್ರಮ ವೈವಿಧ್ಯ, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿಯಲ್ಲಿ ಮಿಶ್ರಮಾಧುರ್ಯ **ಮಧ್ಯಾಹ್ನ:** 12.05 ವನಿತಾ ವಿಹಾರ-ವಿಶ್ವ ಸ್ತನ್ಯಪಾನ ಸಪ್ತಾಹದ ಸಂದರ್ಭದಲ್ಲಿ ತಾಯಿಯ ಹಾಲಿನ ಮಹತ್ವ ಕುರಿತು ಆಯುರ್ವೇದ ವೈದ್ಯರಾದ ಡಾ. ಅಪರ್ಣಾ ಭಾರ್ಗವ್ ಅವರಿಂದ ಮಾಹಿತಿ, 12.30 ದೇವರನಾಮ-ಸುಧನ್ವ, ಎಂ.ಎಲ್, 12.45 ಜನಪದ ಸಂಗೀತ - ಚಿಕ್ಕತಾಯಮ್ಮ ಮತ್ತು ಸಂಗಡಿಗರಿಂದ ಜನಪದ ಗೀತೆ, 1.20 ಭಾವಗೀತೆಗಳು, 2.40 ಭಾರತ ಹಾಗೂ ಶ್ರೀಲಂಕಾ ತಂಡಗಳ ನಡುವೆ ಶ್ರೀಲಂಕಾದ ಕೊಲಂಬೊದಲ್ಲಿರುವ ಆರ್. ಪ್ರೇಮದಾಸ ಕ್ರಿಕೆಟ್ ಕ್ರೀಡಾಂಗಣದಲ್ಲಿ ನಡೆಯಲಿರುವ ಎರಡನೇ ಏಕದಿನ ಪಂದ್ಯದ ವೀಕ್ಷಕ ವಿವರಣೆ, 10.00 ರವಿವಾರದ ಅಖಿಲ ಭಾರತ ಸಂಗೀತ ಸಭೆ, ಅನುಪಮಾ ಭಾಗವತ್- ಸಿತಾರ್

- **ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ :** ಬೆಳಗ್ಗೆ 9 ರಿಂದ ಕರ್ಕಾಟಕ ಚಿಕಿತ್ಸಾ (ಮಾನ್‌ಸೂನ್) ವರ್ಷ ಋತುವಿನ ಕಾಲದ ವಿಶೇಷ ಚಿಕಿತ್ಸಾ ಶಿಬಿರ, ಬೆಳಗ್ಗೆ 6.30 ರಿಂದ ದೇಹ-ಮನಸ್ಸುಗಳ ಆರೋಗ್ಯಕ್ಕಾಗಿ ಯೋಗಾಭ್ಯಾಸ, ಸ್ಥಳ: ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ, ಲಲಿತಾದ್ರಿಪುರ ರಸ್ತೆ.
- **ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ:** ಸುವರ್ಣಪ್ರಾಶನ ಅಭಿಯಾನ, ಸ್ಥಳ: ಆಸ್ಪತ್ರೆ ಆವರಣ, ಬೆಳಗ್ಗೆ 8ರಿಂದ.
- **ಎಸ್‌ಜಿಎಸ್ ಇಂಟರ್‌ನ್ಯಾಷನಲ್ ಯೋಗ ಫೌಂಡೇಷನ್ ಕಾಲೇಜು-ಸಂಶೋಧನಾ ಕೇಂದ್ರ:** ರಾಜ್ಯ ಮಟ್ಟದ ಮುಕ್ತ ಯೋಗಾಸನ ಸ್ಪರ್ಧೆ, ಸ್ಥಳ: ರಿಯೋ ಮೆರಿಡಿಯನ್ ಹೋಟೆಲ್ ಸಭಾಂಗಣ, ಹೈವೇ ಸರ್ಕಲ್.
- **ಅಕ್ಷರ ನಾದ ಪಬ್ಲಿಕೇಶನ್ಸ್, ಎಎಸ್‌ಟಿಆರ್, ಬೆಂಗಳೂರು, ಅಕ್ಷರನಾದ -ಕಲೆ ಸಾಹಿತ್ಯ ಸಾಂಸ್ಕೃತಿಕ ವೇದಿಕೆ, ಬೆಂಗಳೂರು, ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್:** ಕವಿ ಕಾವ್ಯ ಕಥಾ ಸಂಗಮ-ಮೊದಲ ಆವೃತ್ತಿ-2024, ಅಕ್ಷರ ನಾದದ ಮೊದಲ ವಾರ್ಷಿಕೋತ್ಸವ, 38 ಕೃತಿಗಳ ಲೋಕಾರ್ಪಣೆ, ಉದ್ಘಾಟನೆ: ಸಾಹಿತಿ ಅರವಿಂದ ಮಾಲಗತ್ತಿ, ಪ್ರಾಸ್ತಾವಿಕ ನುಡಿಗಳು : ಡಾ. ಶ್ರುತಿ ಮಧುಸೂದನ್, ಅಧ್ಯಕ್ಷತೆ : ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಮಡ್ಡೀಕೆರೆ ಗೋಪಾಲ್, ಸ್ಥಳ: ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್, ಕನ್ನಡ ಭವನ, ವಿಜಯನಗರ 1ನೇ ಹಂತ, ಬೆಳಗ್ಗೆ 9.30 ರಿಂದ.
- **ಭಾರತೀಯ ಹಸ್ತಶಿಲ್ಪ ಕಲೆಯ ಸಂರಕ್ಷಣೆ ಮತ್ತು ಅಭಿವೃದ್ಧಿಗಾಗಿ ಭಾರತ ಸರ್ಕಾರದ ವಸ್ತ್ರ ಮಂತ್ರಾಲಯದ ಕರಕುಶಲ ಅಭಿವೃದ್ಧಿ ಆಯುಕ್ತರ ಕಚೇರಿ :** ಹಸ್ತಶಿಲ್ಪ ಪ್ರದರ್ಶನ, ಮಾರಾಟ, ಗಾಂಧಿ ಶಿಲ್ಪ ಬಜಾರ್, ಸ್ಥಳ: ಜೆಎಸ್‌ಎಸ್ ಅರ್ಬನ್ ಹಾತ್, ಬೆಳಗ್ಗೆ 10.30 ರಿಂದ.
- **ಮಂಥನ ಮೈಸೂರು :** ಸಂವಿಧಾನ ಶಿಲ್ಪಿ ಅಂಬೇಡ್ಕರ್ ಕುರಿತು 'ಎಲ್ಲರಿಗೂ ಬೇಕಾದ ಅಂಬೇಡ್ಕರ್' ಗೊತ್ತೇ ಇರದ ಅದೆಷ್ಟೋ ಸಂಗತಿಗಳು', ಲೇಖಕ ಡಾ. ಜಿ.ಬಿ. ಹರೀಶ ಅವರ ಪುಸ್ತಕ ಲೋಕಾರ್ಪಣೆ ಮತ್ತು ಸಂವಾದ ಕಾರ್ಯಕ್ರಮ, ಉಪಸ್ಥಿತರು : ಮೈಸೂರು ವಿವಿ ಕುಲಪತಿ ಪ್ರೊ ಎನ್.ಕೆ. ಲೋಕನಾಥ್, ಚಿಂತಕ ಡಾ. ಜಿ.ಬಿ. ಹರೀಶ, ಸಂವಿಧಾನ ತಜ್ಞ ಡಾ. ಸುಧಾಕರ ಹೊಸಳ್ಳಿ, ಸ್ಥಳ: ಎಸ್.ಪಿ. ಭಟ್ ಹಾಲ್, ಇನ್‌ಸ್ಟಿಟ್ಯೂಟ್ ಆಫ್ ಇಂಜಿನಿಯರ್ಸ್, ಜೆಎಲ್‌ಬಿ ರಸ್ತೆ, ಬೆಳಗ್ಗೆ 10.30ಕ್ಕೆ.
- **ಗೆಳೆಯರ ಬಳಗ ಅಭಿವೃದ್ಧಿ ಸಹಕಾರ ಸಂಘ :** ವಾರ್ಷಿಕ ಮಹಾಸಭೆ, ಅಧ್ಯಕ್ಷತೆ : ಸಂಘದ ಅಧ್ಯಕ್ಷ ಡಾ. ವಸಂತ, ಸ್ಥಳ: ಮೈಸೂರು ಮತ್ತು ಚಾಮರಾಜನಗರ ಜಿಲ್ಲಾ ಆರ್ಯ ಈಡಿಗರ ವಿದ್ಯಾರ್ಥಿ ನಿಲಯ, ವಿಜಯನಗರ 3ನೇ ಹಂತ, ಬೆಳಗ್ಗೆ 10.30ಕ್ಕೆ.
- **ಅರಸು ಮಂಡಳಿ ಸಂಘ :** ವಾರ್ಷಿಕ ಮಹಾಸಭೆ ಅಂಗವಾಗಿ ಸಾಂಸ್ಕೃತಿಕ ಮತ್ತು ಶೈಕ್ಷಣಿಕ ಸ್ಪರ್ಧೆ, ಸ್ಥಳ: ಶ್ರೀ ಜಯಚಾಮರಾಜೇಂದ್ರ ಅರಸು ಬೋರ್ಡಿಂಗ್ ಸ್ಕೂಲ್ ಆವರಣ, ಬೆಳಗ್ಗೆ 9ಕ್ಕೆ.
- **ಬಸವ ಸಮಿತಿ:** ಶರಣ ಸಂಗಮ-296, ಸಾನ್ನಿಧ್ಯ: ಶ್ರೀ ಪರಶಿವಮೂರ್ತಿ ಸ್ವಾಮಿಗಳು, ಭವಾನಿ ಲೋಕೇಶ್ ಅವರಿಂದ ಮಂಕುತಿಮ್ಮನ ಕಗ್ಗ-ಒಂದು ಮುನ್ನೋಟ ಕುರಿತು ಉಪನ್ಯಾಸ, ಅಧ್ಯಕ್ಷತೆ ಬಸವ ಸಮಿತಿ ಅಧ್ಯಕ್ಷ ಹೆಚ್.ವಿ.ಬಸವರಾಜು, ಹಿನಕಲ್, ಸ್ಥಳ: ಬಸವ ಭವನ, ವಿಜಯನಗರ 1ನೇ ಹಂತ, ಬೆಳಗ್ಗೆ 10.30ಕ್ಕೆ
- **ಸುರಭಿ ಗಾನ ಕಲಾಮಂದಿರ ಚಾರಿಟಬಲ್ ಟ್ರಸ್ಟ್:** ಅರಳು ಪ್ರತಿಭೆ, ಪ್ರತಿಭಾಂಕುರ-ನೂತನ ಸಂಗೀತ ಮಾಲಿಕೆ-ತ್ರಯೋದಶ ಕುಸುಮ, ಕರ್ನಾಟಕ ಶಾಸ್ತ್ರೀಯ ಸಂಗೀತ, ವಿದುಷಿ ಅಂಜನಾ ನಾಗರಾಜ್-ಗಾಯನ, ವಿದ್ವಾನ್ ತುಮಕೂರು ಯಶ್ವಿ-ವಯೋಲಿನ್, ವಿದ್ವಾನ್ ನಂದನ್ ಕಶ್ಯಪ್-ಮೃದಂಗ, ಸ್ಥಳ: ರಾಸವೃಂದ, ಚಾಮರಾಜಪುರಂ, ಬೆಳಗ್ಗೆ 10.30ಕ್ಕೆ
- **ಪ್ರೊ.ಕೆ.ವೆಂಕಟಗಿರಿಗೌಡ, ಸಾಂಸ್ಕೃತಿಕ ಮತ್ತು ಶೈಕ್ಷಣಿಕ ಪರಿಷತ್, ಹನ್ಯಾಳು ಪ್ರಕಾಶನ, ಸಂವಹನ ಪ್ರಕಾಶನ:** ಆಲಕೆರೆ ಜೆ.ರಾಮಲಿಂಗೇಗೌಡ, ವಿಶ್ರಾಂತ ಅಡಿಷನಲ್ ಕಮೀಷನರ್, ವಾಣಿಜ್ಯ ತೆರಿಗೆ ಇಲಾಖೆ ಇವರ ಅನುವಾದ ಕೃತಿ ಲೋಕಾರ್ಪಣೆ ಸಮಾರಂಭ, ಕೃತಿ ಬಿಡುಗಡೆ: ಮೈಸೂರು ವಿವಿ ವಿಶ್ರಾಂತ ಪ್ರಾಧ್ಯಾಪಕ ಪ್ರೊ.ಸಿ. ನಾಗಣ್ಣ, ಅಧ್ಯಕ್ಷತೆ: ಮೆಸ್ಕೋ ಐಟಿಐ ಪ್ರಾಂಶುಪಾಲ ಪ್ರೊ. ಕಲೀಮ್ ಅಹಮದ್, ಸ್ಥಳ: ರೋಟರಿ ವೆಸ್ಟ್ ಸರಸ್ವತಿಪುರಂ, ಬೆಳಗ್ಗೆ 10.30ಕ್ಕೆ.
- **ಅವಧೂತ ದತ್ತಪೀಠ:** ಶ್ರೀ ಗಣಪತಿ ಸಚ್ಚಿದಾನಂದ ಸ್ವಾಮೀಜಿ ಮತ್ತು ಶ್ರೀ ದತ್ತ ವಿಜಯಾನಂದ ತೀರ್ಥ ಸ್ವಾಮೀಜಿಯವರ 21ನೇ ಚಾತುರ್ಮಾಸ್ಯ ವ್ರತದೀಕ್ಷಾ ಮಹೋತ್ಸವ, ಶತಚಂಡೀ ಯಾಗದ ಮಹಾಪೂರ್ಣಾಹುತಿ, ಶ್ರೀ ಚಾಮುಂಡಿದೇವಿ ಆಲಯದಲ್ಲಿ ಅಮ್ಮನವರಿಗೆ ಫಲ ಸಮರ್ಪಣೆ, ದತ್ತ ಸ್ವಾಮಿಗೆ ತೈಲಾಭಿಷೇಕ, ಸ್ಥಳ: ಶ್ರೀ ಗಣಪತಿ ಸಚ್ಚಿದಾನಂದ ಆಶ್ರಮ, ನಂಜನಗೂಡು ರಸ್ತೆ.
- **ಕೊಡಗು ಗೌಡ ಸಮಾಜ, ಕೊಡಗು ಮತ್ತು ದಕ್ಷಿಣ ಕನ್ನಡ ಜಿಲ್ಲಾ ಗೌಡ ಮಹಿಳಾ ಸಮಾಜ :** ಆಟಿ ಗೌಜಿ ಆಚರಣೆ, ಆಟಿ ತಿಂಗಳಲ್ಲಿ ಸೇವಿಸುವ ಸಾಂಪ್ರದಾಯಿಕ ಖಾದ್ಯಗಳ ಪ್ರದರ್ಶನ ಮತ್ತು ಮಾರಾಟ, ಸ್ಥಳ: ಕೊಡಗು ಗೌಡ ಸಮಾಜದ ಸಭಾ ಭವನ, ಬೆಳಗ್ಗೆ 11ಕ್ಕೆ.
- **ಇನ್‌ಸ್ಪೈರ್, ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು :** ಎಸ್. ಚಿಕ್ಕಸಾವಕ ಅವರ ಸಂವಿಧಾನ ಸಭೆ ವರ್ಸಸ್ ಅಂಬೇಡ್ಕರ್ ನಾಲ್ಕು ಸಂಪುಟಗಳ ಕೃತಿ ಲೋಕಾರ್ಪಣೆ ಸಮಾರಂಭ, ಬಿಡುಗಡೆ : ಹಿರಿಯ ಸಾಹಿತಿ ಪ್ರೊ. ಕೆ.ಎಸ್. ಭಗವಾನ್, ಕೃತಿ ಕುರಿತು : ನ್ಯಾಯವಾದಿ ಬಿ.ಆರ್. ರಂಗಸ್ವಾಮಿ, ರಂಗಭೂಮಿ ನಿರ್ದೇಶಕ ಸಿ. ಬಸವಲಿಂಗಯ್ಯ, ಮುಖ್ಯ ಅತಿಥಿಗಳು : ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಮಡ್ಡೀಕೆರೆ ಗೋಪಾಲ್, ಮಾಜಿ ಮೇಯರ್ ಪುರುಷೋತ್ತಮ್, ಡಾ. ಆರ್. ಮೋಹನ್‌ರಾಜ್, ಎಸ್. ಚಿಕ್ಕಸಾವಕ, ಅಧ್ಯಕ್ಷತೆ: ಹಿರಿಯ ಸಾಹಿತಿ ಹೊರೆಯಾಲ ದೊರೆಸ್ವಾಮಿ, ಸ್ಥಳ: ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಸಭಾಂಗಣ, ವಿಜಯನಗರ 1ನೇ ಹಂತ, ಸಂಜೆ 4ಕ್ಕೆ.
- **ಶ್ರೀ ವ್ಯಾಸರಾಜ ಮಠ ಚಾತುರ್ಮಾಸ್ಯ ಸೇವಾ ಸಮಿತಿ, ಸೋಸಲೆ :** ಶ್ರೀ ಶ್ರೀ ವಿದ್ಯಾಶ್ರೀಶತೀರ್ಥ ಶ್ರೀಪಾದರಂಗಳವರ 8ನೇ ಚಾತುರ್ಮಾಸ್ಯ, ಸ್ಥಳ: ಶ್ರೀ ವ್ಯಾಸರಾಜ ಮಠ, ಸೋಸಲೆ ಕ್ಷೇತ್ರ, ಸಂಜೆ 4.30ಕ್ಕೆ
- **ರಾಗ ಮ್ಯೂಸಿಕ್ ಅಕಾಡೆಮಿ:** ದಶಮಾನೋತ್ಸವ ಸಮಾರಂಭ, ವೀಣಾ-ವಯೋಲಿನ್ ದ್ವಂದ್ವ ಗಾಯನ, ಡಾ. ಜಯಂತಿ ಕುಮರೇಶ್-ವೀಣಾ, ವಿದ್ವಾನ್ ಆರ್. ಕುಮರೇಶ್-ವಯೋಲಿನ್, ವಿದ್ವಾನ್ ಕೆ.ಯು. ಜಯಚಂದ್ರ ರಾವ್-ಮೃದಂಗ, ವಿದ್ವಾನ್ ತ್ರಿಚಿ ಕೃಷ್ಣಸ್ವಾಮಿ-ಘಟ, ಶ್ರೀ ನಾದಬ್ರಹ್ಮ ಸಂಗೀತ ಸಭಾ, ಜೆಎಲ್‌ಬಿ ರಸ್ತೆ, ಸಂಜೆ 5.30ಕ್ಕೆ
- **ಕನಸು ನನಸಿನೆಡೆಗೆ ಪಯಣ ಸಂಸ್ಥೆ :** 'ಮಿಡ್ಲ್ ಕ್ಲಾಸ್ ಸಂಸಾರ' ಹಾಸ್ಯಮಯ ನಾಟಕ ಪ್ರದರ್ಶನ, ಸ್ಥಳ: ಗೋಕುಲಂ ಮೂರನೇ ಹಂತದ ಸಾಂಸ್ಕೃತಿಕ ಭವನ, ಸಂಜೆ 6ಕ್ಕೆ
- **ಅಷ್ಟಾಂಗಯೋಗ ವಿಜ್ಞಾನ ಮಂದಿರಂ :** ವಿದ್ವಾನ್ ಬಿ.ಜಿ. ಅನಂತ ಅವರಿಂದ 'ಧರ್ಮ-ಒಂದು ಸ್ಥಿತಿ' ಕುರಿತು ಪ್ರವಚನ, ಸ್ಥಳ: ಅಷ್ಟಾಂಗ ಯೋಗ ವಿಜ್ಞಾನ ಮಂದಿರಂ, ಶೇಷಾದ್ರಿ ಅಯ್ಯರ್ ರಸ್ತೆ, ಲಕ್ಷ್ಮೀಪುರಂ, ಸಂಜೆ 6.45ಕ್ಕೆ.
- **ಶ್ರೀ ವೀರಭದ್ರೇಶ್ವರಸ್ವಾಮಿ ಹಾಗೂ ಶ್ರೀ ಚಾಮರಾಜೇಶ್ವರಸ್ವಾಮಿ ದೇವಸ್ಥಾನ ಟ್ರಸ್ಟ್ :** ಶ್ರೀ ವೀರಭದ್ರೇಶ್ವರಸ್ವಾಮಿ ಜನ್ಮೋತ್ಸವ, ಮಹಾರಥೋತ್ಸವ, ಶ್ರಾವಣ ಮಾಸದಲ್ಲಿ ನಡೆಯುವ ಪೂಜಾ ಕಾರ್ಯಕ್ರಮಗಳು, ಬೆಳಗ್ಗೆ 7.30ಕ್ಕೆ ತೈಲಾಭಿಷೇಕ, ರುದ್ರಾಭಿಷೇಕ, ಪಂಚಾಮೃತ ಅಭಿಷೇಕ, ಸಹಸ್ರ ಬಿಲ್ವಾರ್ಚನೆ, ಮಹಾಮಂಗಳಾರತಿ, ಸಂಜೆ 7.30ಕ್ಕೆ ಭದ್ರಕಾಳಿ ಸಮೇತ ಶ್ರೀ ವೀರಭದ್ರೇಶ್ವರಸ್ವಾಮಿ ಮತ್ತು ಶ್ರೀ ಚಾಮರಾಜೇಶ್ವರಸ್ವಾಮಿ ಉತ್ಸವ, ಸ್ಥಳ: ಶ್ರೀ ಚಾಮರಾಜೇಶ್ವರಸ್ವಾಮಿ ದೇವಸ್ಥಾನ, ಕೆ.ಆರ್.ಮೊಹಲ್ಲಾ.


ಜನಪ್ರಿಯ ಶಾಸಕರಾದ
ಕೆ.ಹರೀಶ್‌ಗೌಡ ರವರಿಗೆ
ಜನುಮದಿನದ ಶುಭಾಶಯಗಳು
ಜಗದೀಶ್
ಕಾಂಗ್ರೆಸ್ ಮುಖಂಡರು
ಕುಮಾರ್
ಕಾಂಗ್ರೆಸ್ ಮುಖಂಡರು
ಮಹದೇಶ್
ಸಿಂಡಿಕೇಟ್ ಸದಸ್ಯರು ಮೈಸೂರು ವಿ ವಿ
ಬಿ.ಕುಮಾರ
ವಾರ್ಡ್ ನಂಬರ್ 22 ಅಧ್ಯಕ್ಷರು ನಗರ ಕಾಂಗ್ರೆಸ್
ಒಂಟಿಕೊಪ್ಪಲ್ ಗುರುರಾಜ್
ನಿರ್ದೇಶಕರು ಜಿಲ್ಲಾ ಒಕ್ಕಲಿಗರ ಸಂಘ
ಕೃಪಾನಂದ
ಕಂಟ್ರಾಕ್ಟರ್
ಜೆ.ಯೋಗೇಶ್
ನಿರ್ದೇಶಕರು ದಿ ಮೈಸೂರು ಕೋಪರೇಟಿವ್ ಬ್ಯಾಂಕ್
ಶುಭಕೋರುವವರು : ಕೆ.ಹರೀಶ್‌ಗೌಡರವರ
ಅಭಿಮಾನಿ ಬಳಗ ಚಾಮರಾಜ ಕ್ಷೇತ್ರ ವಾರ್ಡ್ ನಂಬರ್ 22


ಚಾಮರಾಜ ವಿಧಾನಸಭಾ ಕ್ಷೇತ್ರದ ಶಾಸಕರಾದ
ಶ್ರೀ ಕೆ.ಹರೀಶ್‌ಗೌಡರು
ಅವರಿಗೆ
ಹುಟ್ಟು ಹಬ್ಬದ ಶುಭಾಶಯಗಳು
ಶುಭಕೋರುವವರು
ಜಿ.ವಿ. ಪ್ರಶಾಂತ್


"ಅಭಿವೃದ್ಧಿಯ ಹರಿಕಾರ"
ಚಾಮರಾಜ ವಿಧಾನಸಭಾ ಕ್ಷೇತ್ರದ ಜನಪ್ರಿಯ ಶಾಸಕರಾದ
ಕೆ. ಹರೀಶ್‌ಗೌಡ
ರವರಿಗೆ
ಜನುಮದಿನದ ಶುಭಾಶಯಗಳು
ಶುಭಕೋರುವವರು : ಎಸ್.ಆರ್.ರವಿ ನಿರ್ದೇಶಕರು, ದಿ ಮೈಸೂರು ಕೋ-ಆಪರೇಟಿವ್ ಬ್ಯಾಂಕ್, ಮೈಸೂರು

ಸಿಗ್ಮಾ ಆಸ್ಪತ್ರೆಯಲ್ಲಿ ಸ್ತನ್ಯಪಾನ ಕುರಿತು ಉಪನ್ಯಾಸ ಸಂಪನ್ನ



ಮೈಸೂರಿನ ಸಿಗ್ಮಾ ಆಸ್ಪತ್ರೆಯಲ್ಲಿ ವಿಶ್ವಸ್ತನ್ಯಪಾನ ಸಪ್ತಾಹ ಕಾರ್ಯಕ್ರಮ ನಡೆಯಿತು.

ಮೈಸೂರು,ಆ.3– ಮಗು ಆಗುವ ಮುನ್ನವೇ ಯುವಕ, ಯುವತಿಯರಿಗೆ ಹಾಗೂ ವಿದ್ಯಾರ್ಥಿಗಳಿಗೆ ಸ್ತನ್ಯಪಾನದ ಬಗ್ಗೆ ಉಪನ್ಯಾಸವನ್ನು ಐಎಪಿ ವತಿಯಿಂದ ನಡೆಸಿದರೆ ಹೆಚ್ಚು ಪ್ರಯೋಜನಕಾರಿ ಆಗುತ್ತದೆ ಎಂದು ಸಿಗ್ಮಾ ಆಸ್ಪತ್ರೆಯ ವ್ಯವಸ್ಥಾಪಕ ನಿರ್ದೇಶಕ ಎಸ್.ಜ್ಞಾನಶಂಕರ್ ಹೇಳಿದರು.

ನಗರದ ಸಿಗ್ಮಾ ಆಸ್ಪತ್ರೆಯಲ್ಲಿ ವಿಶ್ವಸ್ತನ್ಯಪಾನ ಸಪ್ತಾಹದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು. ಸ್ತನ್ಯಪಾನ ಅಮೃತಕ್ಕೆ ಸಮಾನ. ಗರ್ಭಿಣಿ ಪೂರ್ವ ಮತ್ತು ಗರ್ಭಿಣಿಯಲ್ಲಿ ಮತ್ತು ನಂತರ ಸ್ತನ್ಯಪಾನ ಹೆಚ್ಚಿಸುವ ಸಿರಿಧಾನ್ಯ ಮತ್ತು ಸಮತೂಕ ಆಹಾರ ಮುಖ್ಯ ಎಂದರು.

ಆಸ್ಪತ್ರೆಯ ನಿರ್ದೇಶಕಿ ಹಾಗೂ ಮಕ್ಕಳ ತಜ್ಞೆ ಡಾ.ಎಂ.ಎಸ್. ಕನ್ಯಾ ಮಾತನಾಡಿ, ಸ್ತನ್ಯಪಾನದ ಉಪಯುಕ್ತತೆ ಹಾಗೂ ತಾಯಿಂದಿರು ಸ್ತನ್ಯಪಾನ ಮಾಡಿಸುವಾಗ ಎದುರಿಸುವ ಹಾಗೂ ತೊಂದರೆಗಳ ನಿವಾರಣೆ ಕುರಿತು ವಿವರಿಸಿದರು.

ಸ್ತ್ರೀ ರೋಗ ತಜ್ಞೆ.ಡಾ.ಅಂಜಲಿ ಸಿದ್ದೇಶ್ ಹಾಗೂ ಡಾ.ಗೌರಿ ಹಕ್ಕೇರಿ ಅವರು ಪೋಷಕರಿಗೆ ಸ್ತನ್ಯಪಾನದ ಬಗ್ಗೆ ಮುಖ್ಯ ಸಲಹೆ ನೀಡಿದರು. ಆಸ್ಪತ್ರೆ ನಿರ್ದೇಶಕಿ ಶೈಲಾ ಶಂಕರ್ ಪದಾಧಿಕಾರಿಗಳಿಗೆ ವಂದನೆ ಸಲ್ಲಿಸಿದರು. ಡಾ.ರಾಜೇಶ್ವರಿ ಮಾದಪ್ಪ ಸ್ವಾಗತಿಸಿದರು. ಐಎಪಿ ಅಧ್ಯಕ್ಷ ಡಾ.ಎಂ. ಆರ್.ಪ್ರಶಾಂತ್, ಕಾರ್ಯದರ್ಶಿ ಡಾ.ಶಂಕರ್ ಪ್ರಸಾದ್ ಮತ್ತು ಖಜಾಂಚಿ ಡಾ.ತೃಪ್ತಿ ಉಪಸ್ಥಿತರಿದ್ದರು.

ಕೊಡಗು ಜಿಲ್ಲೆಯಲ್ಲಿ ಜಮ್ಮಾ ಬಾಣೆ ಜಮೀನಿನ ಸಂಪೂರ್ಣ ಹಕ್ಕು ಕೊಡವರಿಗೆ

ಹೈಕೋರ್ಟ್ ತೀರ್ಪು



ಬೆಂಗಳೂರು: ಕೊಡಗು ಜಿಲ್ಲೆಯಲ್ಲಿ ಜಮ್ಮಾ ಬಾಣೆ ಜಮೀನಿನ ಸಂಪೂರ್ಣ ಹಕ್ಕನ್ನು ಕೊಡವರಿಗೆ ನೀಡುವ ಕರ್ನಾಟಕ ಭೂ ಕಂದಾಯ ಕಾಯ್ದೆಗೆ 2011ರ ಸೆಕ್ಷನ್ 20(2)ರ ತಿದ್ದುಪಡಿಯ ಕಾನೂನು ಸಿಂಧುತ್ವವನ್ನು ಹೈಕೋರ್ಟ್ ಎತ್ತಿಹಿಡಿದಿದೆ.

ಅಲ್ಲದೆ, ಕಾಯ್ದೆಯ ತಿದ್ದುಪಡಿ ಕೊಡವ ಕುಟುಂಬ ವ್ಯವಸ್ಥೆ ಅಥವಾ ಸಂಪ್ರದಾಯಗಳಿಗೆ ವಿರುದ್ಧವಾಗಿಲ್ಲ. ಬದಲಾಗಿ ಕೊಡಗು ಜಿಲ್ಲೆಯಲ್ಲಿನ ಜಮ್ಮಾಬಾಣೆ ಭೂಮಿಯ ಮೇಲೆ ಸಂಪೂರ್ಣ ಮಾಲೀಕತ್ವದ ಹಕ್ಕುಗಳು ಕೊಡವರಿಗೆ ಲಭ್ಯವಾಗಲಿವೆ ಎಂದು ಪೀಠ ತಿಳಿಸಿದೆ. ಕರ್ನಾಟಕ ಭೂ ಕಂದಾಯ ಕಾಯ್ದೆ ಸೆಕ್ಷನ್ 2 ಮತ್ತು 80ಕ್ಕೆ ತಿದ್ದುಪಡಿ ಮಾಡಿರುವ ಸಾಂವಿಧಾನಿಕ ಸಿಂಧುತ್ವವನ್ನು ಪ್ರಶ್ನಿಸಿ ಬ್ರಿಗೇಡಿಯರ್ ಮಾಳೇಟಿರ ವಿ.ದೇವಯ್ಯ ಮತ್ತಿತರರು ಸಲ್ಲಿಸಿದ್ದ ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಸೂರಜ್ ಗೋವಿಂದರಾಜ್ ಅವರಿದ್ದ ನ್ಯಾಯಪೀಠ, ಕಾಯ್ದೆಯಲ್ಲಿ ತಿದ್ದುಪಡಿ ಮಾಡಿರುವುದರಲ್ಲಿ ಯಾವುದೇ ಕಾನೂನು ಉಲ್ಲಂಘನೆಯಾಗಿಲ್ಲ ಎಂದು ತಿಳಿಸಿ, ಅರ್ಜಿ ವಜಾಗೊಳಿಸಿ ಆದೇಶಿಸಿದೆ. ಈ ತಿದ್ದುಪಡಿಯಿಂದ ಕೊಡಗು ಜಿಲ್ಲೆಯಲ್ಲಿ ಸರ್ಕಾರದ ಅಧೀನದಲ್ಲಿದ್ದ ಜಮ್ಮಾ ಬಾಣೆ ಭೂಮಿಗೆ ಕೊಡವ ಕುಟುಂಬಕ್ಕೆ ಸೇರಿದ ಎಲ್ಲ ಸದಸ್ಯರು ಮಾಲೀಕತ್ವವನ್ನು ಪಡೆದುಕೊಳ್ಳಲಿದ್ದಾರೆ. ಜೊತೆಗೆ, ಆರ್‌ಟಿಸಿಯ ಕಲಂ 9ರಲ್ಲಿ ಕುಟುಂಬದ ಎಲ್ಲ ಸದಸ್ಯರ ಹೆಸರನ್ನು ನಮೂದಿಸಲು ಅವಕಾಶವನ್ನು ಕಲ್ಪಿಸಲಾಗಿದೆ ಎಂದು ಪೀಠ ತಿಳಿಸಿದೆ. ಜಮ್ಮಾ ಬಾಣೆ ಜಮೀನುಗಳಿಗೆ ಸಂಬಂಧಿಸಿದಂತೆ ಕೊಡವ ಕುಟುಂಬದ ಸದಸ್ಯರು ತಮ್ಮ ಆಸ್ತಿಯನ್ನು ಮೂರನೇ ವ್ಯಕ್ತಿಗೆ ಪರಭಾರೆ ಮಾಡಲು ನಿರ್ಬಂಧವಿದೆ. ಇದೀಗ ಕಾಯ್ದೆಗೆ ತಿದ್ದುಪಡಿ ಮಾಡಿರುವುದು ಕೊಡವ ಕುಟುಂಬ ವ್ಯವಸ್ಥೆ ಮತ್ತು ಅವಿಭಕ್ತ ಕುಟುಂಬ ಪದ್ಧತಿಗಳು ಮತ್ತು ಸಂಪ್ರದಾಯಗಳಿಗೆ ಅಡ್ಡಿಯಾಗಲಿದೆ ಎಂಬ ಅರ್ಜಿದಾರರ ವಾದವನ್ನು ತಳ್ಳಿಹಾಕಿದ ನ್ಯಾಯಪೀಠ, ಜಮ್ಮಾ ಬಾಣೆ ಭೂಮಿಯನ್ನು ಭೂ ಹಿಡುವಳಿ ಪದ್ಧತಿಯ ಆಧಾರದ ಮೇಲೆ ವರ್ಗೀಕರಿಸಲಾಗಿದೆ. ಕೊಡವರ ಪದ್ಧತಿ ಅಥವಾ ಬಳಕೆ ಆಧಾರದಲ್ಲಿ ಅಲ್ಲ. ಕೊಡವ ಕುಟುಂಬದ ಆಸ್ತಿ ಪರಭಾರೆ ಅಥವಾ ವಿಭಜನೆಯನ್ನು ನಿಷೇಧಿಸುವ ಪದ್ಧತಿ ಅಥವಾ ಸಂಪ್ರದಾಯ ಜಾರಿ ಮಾಡಿಲ್ಲ ಎಂದು ಪೀಠ ತಿಳಿಸಿದೆ. ಅಲ್ಲದೆ, ತಿದ್ದುಪಡಿಯಿಂದ ಜಮ್ಮಾ ಬಾಣೆ ಜಮೀನಿಗೆ ಕೊಡವ ಕುಟುಂಬದ ಎಲ್ಲ ಸದಸ್ಯರನ್ನು ಭೂ ದಾಖಲೆಗಳಲ್ಲಿ ನೋಂದಾಯಿಸಬಹುದಾಗಿದೆ. ಜೊತೆಗೆ, ಈ ಹಿಂದೆ ಜಮ್ಮಾಬಾಣೆ ಜಮೀನು ಮತ್ತು ಅದರಲ್ಲಿನ ಮರಗಳ ಹಕ್ಕುಗಳು ಸರ್ಕಾರದ ಅಧೀನದಲ್ಲಿತ್ತು. ಇದೀಗ ಕೊಡವ ಕುಟುಂಬಕ್ಕೆ ಎಲ್ಲ ಹಕ್ಕುಗಳು ಸಿಗಲಿವೆ ಎಂದು ಪೀಠ ತಿಳಿಸಿದೆ. ವಿಚಾರಣೆ ವೇಳೆ ಅರ್ಜಿದಾರರ ಪರ ವಕೀಲರು, ಕಾಯ್ದೆಯ ತಿದ್ದುಪಡಿಯು ಅವಿಭಕ್ತ ಕುಟುಂಬ ಆಸ್ತಿಯನ್ನು ಪರಭಾರೆ ಮಾಡದಂತೆ ಕೊಡವರ ಸಾಂಪ್ರದಾಯಿಕ ಕಾನೂನು ನಿರ್ಬಂಧಿಸುತ್ತದೆ ಮತ್ತು ಅವಿಭಕ್ತ ಕುಟುಂಬದ ಆಸ್ತಿಯಲ್ಲಿ ಕುಟುಂಬದ ಯಾವುದೇ ಸದಸ್ಯರಿಗೆ ವೈಯಕ್ತಿಕ ಹಕ್ಕು ಇರುವುದಿಲ್ಲ. ಆಕ್ಷೇಪಾರ್ಹ ತಿದ್ದುಪಡಿಯ ಮೂಲಕ ರಾಜ್ಯ ಸರ್ಕಾರ ಕೊಡವರ ಸಂಸ್ಕೃತಿಯನ್ನು ತೊಡೆದು ಹಾಕಿದೆ. ಆ ಮೂಲಕ ಸಂವಿಧಾನದ ಪರಿಚ್ಛೇದ 51ಎ(ಎಫ್)ನ್ನು ಉಲ್ಲಂಘಿಸಿದೆ ಎಂದು ನ್ಯಾಯಪೀಠಕ್ಕೆ ಕೋರಿದ್ದರು.

ಟಿಪ್ಪಣಿ: ಶತಮಾನಗಳಿಂದಲೂ ಜಮ್ಮಾ ಭೂಮಿ (ಬಾಣೆ ಮತ್ತು ಜಾಗು ಪ್ರದೇಶ) ಎಂದು ಕರೆಯುವ ಈ ವಿಶಿಷ್ಟ ಭೂ ಹಿಡುವಳಿಯ ಮೂಲ ಉದ್ದೇಶವು ಕೊಡಗಿನ ಭೂಮಿಯನ್ನು ಹೊರಗಿನವರಿಗೆ ಮಾರಾಟ ಮಾಡದೇ ಸ್ಥಳೀಯರಲ್ಲಿ ಉಳಿದಿರುವಂತೆ ಖಚಿತಪಡಿಸಿ ಕೊಳ್ಳುವುದಾಗಿತ್ತು. ಈ ತಿದ್ದುಪಡಿಯಿಂದ ಜಮ್ಮಾ ಹಿಡುವಳಿ ಅವಧಿ ಮುಗಿದ ಬಳಿಕ, ಈ ಭೂಮಿಯ ಮಾಲೀಕರು ತಮ್ಮ ಭೂಮಿ (ಪಾಲು)ಯನ್ನು ಹೊರಗಿನವರಿಗೆ ಮಾರಾಟ ಮಾಡಬಹುದು. ಹಾಗೂ ಇದು ಕುಟುಂಬ ವ್ಯವಸ್ಥೆಯನ್ನು ಅಸ್ತವ್ಯಸ್ತಗೊಳಿಸಬಹುದು. ಈ ಹಿಂದೆ ಸದರಿ ಭೂಮಿಯನ್ನು ಇನ್ನೊಬ್ಬ ಜಮ್ಮಾ ಭೂಮಿ ಹೊಂದಿರುವವರಿಗೆ ಮಾತ್ರವೇ ಮಾರಾಟ ಮಾಡಬೇಕಿತ್ತು. –ಸಂ

ವಿಜೇತ ತಂಡಗಳಿಗೆ ಪ್ರಶಸ್ತಿ ಪ್ರದಾನ; ಸಾಧಕ ಕ್ರಿಕೆಟ್‌ಪಟುಗಳ ಅಭಿನಂದನಾ ಸಮಾರಂಭ

ಮೈಸೂರಲ್ಲಿ ಅಂತಾರಾಷ್ಟ್ರೀಯ ಮಟ್ಟದ ಕ್ರಿಕೆಟ್ ಸ್ಟೇಡಿಯಂ ಸಂಬಂಧ ಶೀಘ್ರ ಶುಭ ಸುದ್ದಿ

ಕೆಎಸ್‌ಸಿಎ ಅಧ್ಯಕ್ಷ ಎ.ರಘುರಾಮ್ ಭಟ್ ವಿಶ್ವಾಸ



ಮೈಸೂರಿನ ನಿತ್ಯೋತ್ಸವ ಸಭಾಂಗಣದಲ್ಲಿ ಕೆಎಸ್‌ಸಿಎ ಮೈಸೂರು ವಿಭಾಗದ ವತಿಯಿಂದ ಶನಿವಾರ ಹಮ್ಮಿಕೊಂಡಿದ್ದ ಸಮಾರಂಭದಲ್ಲಿ ಸಾಧಕ ಕ್ರಿಕೆಟ್‌ಪಟುಗಳನ್ನು ಅಭಿನಂದಿಸಲಾಯಿತು.

ಮೈಸೂರು,ಆ.3(ಪಿಎಂ)– ಮೈಸೂರಿನಲ್ಲಿ ಅಂತಾರಾಷ್ಟ್ರೀಯ ಮಟ್ಟದ ಕ್ರಿಕೆಟ್ ಸ್ಟೇಡಿಯಂ ನಿರ್ಮಾಣ ಸಂಬಂಧ ಶೀಘ್ರದಲ್ಲೇ ಶುಭ ಸುದ್ದಿ ದೊರೆಯಲಿದೆ ಎಂದು ಕೆಎಸ್‌ಸಿಎ ಅಧ್ಯಕ್ಷ ಎ.ರಘುರಾಮ್ ಭಟ್ ವಿಶ್ವಾಸ ವ್ಯಕ್ತಪಡಿಸಿದರು.

ಮೈಸೂರಿನ ಬಲ್ಲಾಳ್ ವೃತ್ತ ಸಮೀಪದ ನಿತ್ಯೋತ್ಸವ ಸಭಾಂಗಣದಲ್ಲಿ ಕರ್ನಾಟಕ ರಾಜ್ಯ ಕ್ರಿಕೆಟ್ ಸಂಸ್ಥೆ (ಕೆಎಸ್‌ಸಿಎ) ಮೈಸೂರು ವಿಭಾಗದ ವತಿಯಿಂದ ಶನಿವಾರ ಹಮ್ಮಿಕೊಂಡಿದ್ದ 2022–23 ಮತ್ತು 2023–24ನೇ ಸಾಲಿನ ಪಂದ್ಯಾವಳಿಗಳ ವಿಜೇತ, ರನ್ನರ್‌ಅಪ್ ತಂಡಗಳಿಗೆ ಮತ್ತು ಅತ್ಯುತ್ತಮ ಬ್ಯಾಟ್ಸ್‌ಮನ್, ಬೌಲರ್‌ಗಳಿಗೆ ಪ್ರಶಸ್ತಿ ಪ್ರದಾನ ಹಾಗೂ ಸಾಧಕ ಕ್ರಿಕೆಟ್ ಪಟುಗಳ ಅಭಿನಂದನಾ ಸಮಾರಂಭದಲ್ಲಿ ಅವರು ಮಾತನಾಡಿದರು.

ಮೈಸೂರಿನಲ್ಲಿ ಅಂತಾ ರಾಷ್ಟ್ರೀಯ ಮಟ್ಟದ ಕ್ರಿಕೆಟ್ ಸ್ಟೇಡಿಯಂ ನಿರ್ಮಾಣಕ್ಕೆ ಕೆಎಸ್‌ಸಿಎ ಅನೇಕ ವರ್ಷ ಗಳಿಂದ ಪ್ರಯತ್ನಿಸುತ್ತಿದೆ. ಈ ಹಿಂದೆ ಗುರುತಿಸಿದ್ದ ಜಾಗವನ್ನು ತಾಂತ್ರಿಕ ಕಾರಣ ದಿಂದ ಪಡೆಯಲು ಸಾಧ್ಯವಾಗಲಿಲ್ಲ. ಈಗ ಮತ್ತೊಂದು ಜಾಗ ಗುರುತಿಸಿದ್ದು, ಸರ್ಕಾರದೊಂದಿಗೆ ನಿರಂತರ ಮಾತುಕತೆ ನಡೆದಿದೆ. ಇನ್ನು ಕೆಲ ವಾರ ಅಥವಾ ತಿಂಗಳಲ್ಲಿ ಶುಭ ಸುದ್ದಿ ಸಿಗಲಿದೆ ಎಂದು ತಿಳಿಸಿದರು.

ಸ್ಪಿನ್ ಹಾಗೂ ವೇಗಿಗಳಿಗೆ ಪ್ರತ್ಯೇಕ ತರಬೇತಿ ಶಿಬಿರಗಳನ್ನು ಆಯೋಜಿಸುತ್ತಿದ್ದು, ಅವಕಾಶ ಸಿಗದ ತಲಾ ಇಬ್ಬರು ಉತ್ತಮ ಸ್ಪಿನ್ನರ್‌ಗಳನ್ನು ಕ್ರಿಕೆಟ್ ಕ್ಲಬ್‌ಗಳು ಗುರುತಿಸಿಕೊಟ್ಟಲ್ಲಿ ಅವರಿಗೂ ತರಬೇತಿ ನೀಡಲು ಸಿದ್ಧರಿದ್ದೇವೆ. ಅಕಾಡೆಮಿಯಲ್ಲಿ ಇರದವರನ್ನು ಆಯ್ಕೆಗೆ ಪರಿಗಣಿಸಲಾಗುವುದು ಎಂದರು. ಮೈಸೂರಿನಲ್ಲಿ ಹೆಚ್ಚು ಲೀಗ್ ಪಂದ್ಯಗಳನ್ನು ಆಯೋಜಿಸಲು ತೀರ್ಮಾನಿಸಿದ್ದು, ಪ್ರತಿ ಪಂದ್ಯಕ್ಕೂ ಪಂದ್ಯಶ್ರೇಷ್ಠ ಪ್ರಶಸ್ತಿ ನೀಡಲು ನಮ್ಮ ಕಮಿಟಿ ತೀರ್ಮಾನಿಸಿದೆ. ಅಂಪೈರ್‌ಗಳು ಇದನ್ನು ನಿರ್ಧರಿಸಲಿದ್ದಾರೆ. ಬೆಂಗಳೂರಿನಲ್ಲಿ ಮೊದಲ ಎರಡು ವಿಭಾಗಗಳ ಆಟಗಾರರಿಗೆ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಅಭ್ಯಾಸ ನಡೆಸಲು ಅವಕಾಶ ಕಲ್ಪಿಸಲಾಗಿದೆ. ಮೈಸೂರಿನಲ್ಲೂ ಗ್ಲೇಡ್ಸ್ ಮೈದಾನದಲ್ಲಿ ಡಿವಿಜನ್ ಲೀಗ್ ಹಾಗೂ ಅಭ್ಯಾಸಕ್ಕೆ ಅವಕಾಶ ನೀಡಲಾಗುವುದು ಎಂದು ಭರವಸೆ ನೀಡಿದರು.

ನಮ್ಮ ಕಮಿಟಿ ರಾಜ್ಯದಲ್ಲಿ ಕ್ರಿಕೆಟ್ ಅಭಿವೃದ್ಧಿಗೆ ಶ್ರಮಿಸುತ್ತಿದೆ. ಮಹಿಳಾ ಕ್ರಿಕೆಟರ್‌ಗಳಿಗೆ ಹೆಚ್ಚು ಪ್ರೋತ್ಸಾಹ ನೀಡಲಾಗುತ್ತದೆ. ಕಳೆದ ಸಾಲಿನಲ್ಲಿ ನಮ್ಮ ರಾಜ್ಯ ತಂಡವು 19 ವರ್ಷದೊಳಗಿನ ಬಾಲಕಿಯರ ಕ್ರಿಕೆಟ್‌ನಲ್ಲಿ ಚಾಂಪಿಯನ್ ಆಗಿದೆ. ಭಾನುವಾರ 15 ವರ್ಷದೊಳಗಿನವರ ಆಯ್ಕೆ ಪ್ರಕ್ರಿಯೆ ಸಹ ನಡೆಯುತ್ತಿದೆ ಎಂದು ಮಾಹಿತಿ ನೀಡಿದರು.

ಇದಕ್ಕೂ ಮುನ್ನ ವಿವಿಧ ಪಂದ್ಯಗಳಲ್ಲಿ ಕರ್ನಾಟಕವನ್ನು ಪ್ರತಿನಿಧಿಸಿರುವ ಹಿರಿಯ ಆಟಗಾರರಾದ ಎಸ್.ಜೆ.ನಿಕಿನ್ ಜೋಸ್, ವೇಗಿ ಎಂ.ವೆಂಕಟೇಶ್ ಅವರು ಕೆಎಸ್‌ಸಿಎ ಮೈಸೂರು ವಲಯದ ಉತ್ತಮ ಆಟಗಾರ ಗೌರವಕ್ಕೆ ಪಾತ್ರರಾದರು. ಮಹಿಳೆಯರ ವಿಭಾಗದಲ್ಲಿ ಸದ್ಯ ಭಾರತ ಮಹಿಳಾ ಟೆಸ್ಟ್ ತಂಡವನ್ನು ಪ್ರತಿನಿಧಿಸಿರುವ ಶುಭಾ ಸತೀಶ್ ಪರವಾಗಿ ಅವರ ಪೋಷಕರು ಹಾಗೂ ಏಕದಿನ ಆಟಗಾರ್ತಿ ರಕ್ಷಿತಾ ಕೃಷ್ಣಪ್ಪ ಸೇರಿದಂತೆ ಹಲವು ಸಾಧಕ ಪಟುಗಳನ್ನು ಸನ್ಮಾನಿಸಲಾಯಿತು.

ಇದೇ ವೇಳೆ ಕಳೆದೆರಡು ವರ್ಷದಲ್ಲಿ ನಡೆದ ಲೀಗ್‌ಗಳಲ್ಲಿ ಚಾಂಪಿಯನ್‌ಗಳಾದ ತಂಡಗಳು ಹಾಗೂ ರನ್ನರ್ ಆದ ತಂಡಗಳ ಕ್ಯಾಪ್ಟನ್‌ಗಳು ಪ್ರಶಸ್ತಿ ಸ್ವೀಕರಿಸಿದರು. ಅಲ್ಲದೆ, ಅಂಪೈರ್‌ಗಳಾದ ಆರ್.ಮಧುಸೂದನ್, ರಘುನಂದನ್ ಹಾಗೂ ಎ.ಎಂ. ಅನಿರುದ್ಧ ಅವರನ್ನು ಸನ್ಮಾನಿಸಲಾಯಿತು. ಕೆಎಸ್‌ಸಿಎ ಗೌರವ ಕಾರ್ಯದರ್ಶಿ ಎ. ಶಂಕರ್, ಖಜಾಂಚಿ ಇ.ಎಸ್.ಜಯರಾಂ, ಕೆಎಸ್‌ಸಿಎ ಮೈಸೂರು ವಲಯ ಅಧ್ಯಕ್ಷ ಎಸ್.ಬಾಲಚಂದರ್, ಸಂಚಾಲಕ ಆರ್.ಕೆ. ಹರಿಕೃಷ್ಣ ಕುಮಾರ್, ಸಂಯೋಜಕ ಎಂ.ಎಸ್.ವಿನಯ್, ವಲಯ ಉಸ್ತುವಾರಿ ಇರ್ಫಾನ್ ಸೇಠ್ ಮತ್ತಿತರರು ಹಾಜರಿದ್ದರು.

ಮೃತರ ಅಂತ್ಯ ಸಂಸ್ಕಾರಕ್ಕೆ ಎನ್‌ಡಿಆರ್‌ಎಫ್ ಮಾರ್ಗಸೂಚಿ ಬಿಡುಗಡೆ

ವಯನಾಡ್, ಆ.3– ಭೂಕುಸಿತದ ಸ್ಥಳದಲ್ಲಿ ಅವಶೇಷಗಳಡಿಯಿಂದ ಮೇಲಕ್ಕೆತ್ತಿರುವ ಕೆಲವು ಮೃತದೇಹಗಳನ್ನು ಇನ್ನೂ ಗುರುತು ಹಿಡಿಯಲು ಸಾಧ್ಯವಾಗಿಲ್ಲ ಮತ್ತು ಅವುಗಳನ್ನು ಕೊಂಡೊಯ್ಯಲು ಯಾರೂ ಮುಂದೆ ಬಂದಿಲ್ಲ.

ಅವಶೇಷಗಳಡಿ ದೊರೆತಿರುವ ಮಾನವನ ಅಂಗಾಂಗಗಳು ಮತ್ತು ಇನ್ನೂ ಗುರುತು ಹಿಡಿಯಲು ಆಗದೇ ಇರುವ ಮೃತದೇಹಗಳ ಅಂತ್ಯಸಂಸ್ಕಾರಕ್ಕೆ ರಾಜ್ಯ ಸರ್ಕಾರ ಮಾರ್ಗಸೂಚಿಗಳನ್ನು ಪ್ರಕಟಿಸಿದೆ.

ಪ್ರತಿಯೊಂದು ಮೃತದೇಹ ಅಥವಾ ದೇಹದ ಅಂಗಾಂಗಗಳಿಗೆ ನಿರ್ದಿಷ್ಟ ಗುರುತಿನ ಸಂಖ್ಯೆ ನಿಗದಿಪಡಿಸಬೇಕು ಎಂದು ವಿಕೋಪ ನಿರ್ವಹಣಾ ಇಲಾಖೆಯು ಹೊರಡಿಸಿದ ಮಾರ್ಗಸೂಚಿಯಲ್ಲಿ ತಿಳಿಸಲಾಗಿದೆ. ಮೃತದೇಹದ ಫೋಟೊ, ವಿಡಿಯೊ ಮತ್ತು ಸಂಗ್ರಹಿಸುವ ಎಲ್ಲ ಮಾದರಿಗಳಲ್ಲಿ (ಹಲ್ಲು, ಡಿಎನ್‌ಎ) ಅದೇ ಸಂಖ್ಯೆಯನ್ನು ಸ್ಪಷ್ಟವಾಗಿ ನಮೂದಿಸಬೇಕು.

ಮೃತದೇಹದ ಗುರುತು ಪತ್ತೆ ಹಚ್ಚಿ ಸಂಬಂಧಿಕರಿಗೆ ಹಸ್ತಾಂತರಿಸಲು ಪೊಲೀಸರು ಎಲ್ಲ ಪ್ರಯತ್ನ ಮಾಡಬೇಕು. ಆದರೂ ವಾರಸುದಾರರು ಬಗ್ಗೆ ಮಾಹಿತಿ ಲಭ್ಯವಾಗದಿದ್ದರೆ, ಶವವನ್ನು ಜಿಲ್ಲಾಡಳಿತಕ್ಕೆ ಹಸ್ತಾಂತರಿಸಬೇಕು ಎಂದು ಹೇಳಿದೆ.

ಮೃತದೇಹಗಳನ್ನು ಹೂಳುವ ಮೂಲಕ ಅಂತ್ಯಸಂಸ್ಕಾರ ಮಾಡಬೇಕು. ಬೇರೆ ವಿಧಾನದಲ್ಲಿ ಮಾಡುವಂತಿಲ್ಲ. ಹೂಳುವ ಜಾಗದಲ್ಲೂ ಗುರುತಿನ ಸಂಖ್ಯೆ ನಮೂದಿಸಬೇಕು. ಅಂತ್ಯಸಂಸ್ಕಾರದ ವೇಳೆ ಸ್ಥಳೀಯ ಸಂಸ್ಥೆಯ ಅಧಿಕಾರಿಗಳು ಹಾಜರಿರಬೇಕು ಎಂದು ಸ್ಪಷ್ಟಪಡಿಸಿದೆ.

ಬಸ್, ಕಾರು ನಡುವೆ ಡಿಕ್ಕಿ: ವೃದ್ಧ ಸಾವು, ಬಾಲಕನಿಗೆ ತೀವ್ರ ಗಾಯ



ಮಡಿಕೇರಿ, ಆ.3– ಸಾರಿಗೆ ಬಸ್ ಹಾಗೂ ಕಾರಿನ ನಡುವೆ ಡಿಕ್ಕಿ ಸಂಭವಿಸಿ ವೃದ್ಧ ಮೃತಪಟ್ಟಿದ್ದು, ಬಾಲಕನೋರ್ವ ಗಂಭೀರವಾಗಿ ಗಾಯಗೊಂಡಿರುವ ಘಟನೆ ಶನಿವಾರಸಂತೆಯ ಶಾಂತಪುರದ ಕಸೂರು ಗ್ರಾಮದ ಬಳಿಯ ಕೊಡ್ಲಿಪೇಟೆ–ಸಕಲೇಶಪುರ ರಾಜ್ಯ ಹೆದ್ದಾರಿಯಲ್ಲಿ ಶನಿವಾರ ಸಂಭವಿಸಿದೆ. ರಂಗೇಗೌಡ (80) ಮೃತಪಟ್ಟಿದ್ದು, ಬಾಲಕ ಸಾನ್ವಿತ್ (10) ಗಂಭೀರವಾಗಿ ಗಾಯಗೊಂಡಿದ್ದಾನೆ.

ಕಾರಿನಲ್ಲಿ ರಂಗೇಗೌಡ, ಬಾಲಕ ಸಾನ್ವಿತ್ ಸೇರಿ 6 ಜನ ಹಾಸನದ ಮಲ್ಲಿಪಟ್ಟಣದಿಂದ ಸಕಲೇಶಪುರ ತಾಲೂಕಿನ ಕಾಗನೂರು ಗ್ರಾಮಕ್ಕೆ ಹೋಗುತ್ತಿದ್ದರು. ಇದೇ ವೇಳೆ ಚಿಕ್ಕಮಗಳೂರಿನಿಂದ ಮಡಿಕೇರಿ ಕಡೆಗೆ ಬರುತ್ತಿದ್ದ ಬಸ್ ಹಾಗೂ ಕಾರಿನ ನಡುವೆ ಕಸೂರು ಗ್ರಾಮದ ಬಳಿ ಡಿಕ್ಕಿ ಸಂಭವಿಸಿದೆ. ಪರಿಣಾಮ ರಂಗೇಗೌಡ ಹಾಗೂ ಸಾನ್ವಿತ್‌ಗೆ ಗಂಭೀರವಾಗಿ ಗಾಯವಾಗಿದೆ ತಕ್ಷಣ ಹಾಸನದ ಜಿಲ್ಲಾಸ್ಪತ್ರೆಗೆ ದಾಖಲಿಸಲಾಗಿತ್ತು. ಆದರೆ, ಚಿಕಿತ್ಸೆ ಫಲಕಾರಿಯಾಗದೆ ಮೃತಪಟ್ಟಿದ್ದಾರೆ. ಸಾನ್ವಿತ್‌ನನ್ನು ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿದೆ. ಈ ಸಂಬಂಧ ಶನಿವಾರಸಂತೆ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಸಂಬಂಧಿಕರ ಆಕ್ರೋಶ: ಗಾಯಾಳುಗಳನ್ನು ಕೊಡ್ಲಿಪೇಟೆ ಆರೋಗ್ಯ ಕೇಂದ್ರಕ್ಕೆ ಕರೆತಂದ ವೇಳೆ ವೈದ್ಯರು ಇರದ ಕಾರಣ ತುರ್ತು ಚಿಕಿತ್ಸೆ ಹಾಗೂ ಆಂಬುಲೆನ್ಸ್ ಸೇವೆ ದೊರಕಲಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಕಾಡಾನೆ ದಾಳಿಯಿಂದ ವಾಟರ್‌ಮನ್, ಕಾರ್ಮಿಕ ಮಹಿಳೆಗೆ ತೀವ್ರ ಗಾಯ



ಕಾಡಾನೆ ದಾಳಿಯಿಂದ ವಾಟರ್‌ಮನ್ ಹುಸೇನ್ ಕೈ ಮುರಿದಿರುವುದು.

ಸುಂಟಿಕೊಪ್ಪ, ಆ.3–ಸುಂಟಿಕೊಪ್ಪ ವ್ಯಾಪ್ತಿ ಶನಿವಾರ ಬೆಳ್ಳಂಬೆಳಗ್ಗೆ ಪ್ರತ್ಯೇಕ 2 ಕಡೆ ಕಾಡಾನೆ ದಾಳಿ ನಡೆದಿದ್ದು, ಆನೆ ದಾಳಿಯಿಂದ ವಾಟರ್‌ಮನ್ ಮತ್ತು ಕಾರ್ಮಿಕ ಮಹಿಳೆ ತೀವ್ರ ಗಾಯಗೊಂಡಿದ್ದಾರೆ.

ಕೊಡಗರಹಳ್ಳಿ ಗ್ರಾಪಂ ವ್ಯಾಪ್ತಿಯ ಅಂದಗೋವೆ ಪೈಸಾರಿಯ ವಾಟರ್‌ಮನ್ ಹುಸೇನ್ ಹಾಗೂ ಕಂಬಿಬಾಣೆ ಅತ್ತೂರು ನಲ್ಲೂರು ಗ್ರಾಪಂ ವ್ಯಾಪ್ತಿಯ ನಲ್ಲೂರಿನ ಕಾರ್ಮಿಕ ಮಹಿಳೆ ಮಹಾದೇವಮ್ಮ ಕಾಡಾನೆ ದಾಳಿಯಿಂದ ತೀವ್ರವಾಗಿ ಗಾಯಗೊಂಡು ಮಡಿಕೇರಿ ಜಿಲ್ಲಾಸ್ಪತ್ರೆಗೆ ದಾಖಲಾಗಿದ್ದಾರೆ. 7ನೇ ಹೊಸಕೋಟೆ ಅಂದಗೋವೆ ಪೈಸಾರಿಯಲ್ಲಿ ವಾಟರ್ ಮನ್ ಹುಸೇನ್ ಎಂದಿನಂತೆ ಬೆಳಗ್ಗೆ ನೀರು ಸರಬರಾಜಿಗೆ ತೆರಳುತ್ತಿದ್ದ ವೇಳೆ ದಿಢೀರ್ ಪ್ರತ್ಯಕ್ಷವಾದ ಕಾಡಾನೆ ದಾಳಿಗೆ ಮುಂದಾಗಿದೆ. ಹುಸೈನ್ ಆನೆ ದಾಳಿಯಿಂದ ತಪ್ಪಿಸಿಕೊಳ್ಳಲು ಪಕ್ಕದಲ್ಲಿದ್ದ ಮೋರಿಯ ಪೈಪ್‌ನೊಳಕ್ಕೆ ನುಸುಳಿ ಜೀವ ಉಳಿಸಿಕೊಂಡಿದ್ದಾರೆ. ಕಾಡಾನೆ ರೋಷಗೊಂಡು ದಂತದಲ್ಲಿ ಮೋರಿಗೆ ತಿವಿದಿದೆ. ಪರಿಣಾಮ ಹುಸೈನ್ ಕೈ ಮುರಿದಿದೆ.

ನಲ್ಲೂರು ತೋಟವೊಂದರ ಕೆಲಸಕ್ಕೆ ತೆರಳುತ್ತಿದ್ದ ಕಾರ್ಮಿಕ ಮಹಿಳೆ ಮಹಾದೇವಮ್ಮ ಕಾಡಾನೆ ಏಕಾಏಕಿ ದಾಳಿ ನಡೆಸಿದೆ. ಪರಿಣಾಮ ಈಕೆಯ ತೊಡೆಯ ಭಾಗಕ್ಕೆ ಗಂಭೀರ ಗಾಯವಾಗಿದೆ. ಇಬ್ಬರು ಗಾಯಾಳುಗಳನ್ನು ಮಡಿಕೇರಿ ಜಿಲ್ಲಾ ಆಸ್ಪತ್ರೆಗೆ ದಾಖಲಿಸಲಾಗಿದೆ. ಸ್ಥಳಕ್ಕೆ ಅರಣ್ಯ ಅಧಿಕಾರಿ ದೇವಯ್ಯ ಮತ್ತು ಸಿಬ್ಬಂದಿಗಳು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

ಅಧಿಕ ಲಾಭದ ಆಸೆಗೆ ಬಿದ್ದು 27 ಲಕ್ಷ ಕಳೆದುಕೊಂಡ ಇಂಜಿನಿಯರ್!

ಮೈಸೂರು, ಆ.3(ಎಸ್‌ಬಿಡಿ)– ನಕಲಿ ಟ್ರೇಡಿಂಗ್‌ನಲ್ಲಿ ಹೂಡಿಕೆ ಮಾಡಿ ಇಂಜಿನಿಯರ್ ಒಬ್ಬರು ಬರೋಬ್ಬರಿ 27 ಲಕ್ಷ ರೂ. ಕಳೆದುಕೊಂಡಿದ್ದಾರೆ.

ಮೈಸೂರು ಕಲ್ಯಾಣಗಿರಿನಗರದ 29 ವರ್ಷದ ಇಂಜಿನಿಯರ್, ಅಧಿಕ ಲಾಭದ ಆಸೆಯಿಂದ ಹಣ ಹೂಡಿಕೆ ಮಾಡಿ ವಂಚನೆಗೊಳಗಾಗಿದ್ದು, ಈ ಸಂಬಂಧ ಶುಕ್ರವಾರ ಸೆನ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಿದ್ದಾರೆ. ಇವರ ಮೊಬೈಲ್‌ಗೆ ಕಳೆದ ಜು.2ರಂದು +919831186175 ಸಂಖ್ಯೆಯಿಂದ ಕರೆ ಬಂದಿದೆ. ಆ ವೇಳೆ ಟ್ರೇಡಿಂಗ್ ಮಾರ್ಕೆಟ್ ಬಗ್ಗೆ ವಿವರಣೆ ನೀಡಿ, ಇದರಲ್ಲಿ ಇನ್ವೆಸ್ಟ್ ಮಾಡಿದರೆ ಕಡಿಮೆ ಅವಧಿಯಲ್ಲಿ ಅಧಿಕ ಲಾಭ ಸಿಗಲಿದೆ ಎಂದು ತಿಳಿಸಿದ್ದಾರೆ. ಅದನ್ನು ನಂಬಿದ ಇಂಜಿನಿಯರ್, ವಿವಿಧ ಬ್ಯಾಂಕ್‌ಗಳಲ್ಲಿನ ತಮ್ಮ ಮೂರು ಖಾತೆಯಿಂದ GS-ESTMGMT ಆ್ಯಪ್ ಮೂಲಕ 15.20 ಲಕ್ಷ ರೂ., 9.65 ಲಕ್ಷ ರೂ. ಹಾಗೂ 2.15 ಲಕ್ಷ ರೂ. ಸೇರಿ ಒಟ್ಟು 27 ಲಕ್ಷ ರೂ. ಹೂಡಿಕೆ ಮಾಡಿದ್ದಾರೆ. ನಂತರ ಅವರು ಮೋಸ ಹೋಗಿದ್ದು ಗೊತ್ತಾಗಿದೆ.

ಅಧಿಕ ಲಾಭದ ಆಸೆಯಿಂದ ನಕಲಿ ಟ್ರೇಡಿಂಗ್‌ನಲ್ಲಿ ಹಣ ಹೂಡಿಕೆ ಮಾಡಿ, ಲಕ್ಷಾಂತರ ರೂ. ಹಣ ಕಳೆದುಕೊಳ್ಳುವ ಪ್ರಕರಣಗಳು ಮೈಸೂರಿನಲ್ಲಿ ಹೆಚ್ಚುತ್ತಲೇ ಇವೆ. ಇಂಜಿನಿಯರ್, ಪ್ರೊಫೆಸರ್, ಉದ್ಯಮಿಗಳು, ವಿದ್ಯಾರ್ಥಿಗಳು ಸೇರಿದಂತೆ ವಿದ್ಯಾವಂತರೇ ಹೆಚ್ಚಾಗಿ ವಂಚನೆಗೊಳಗಾಗುತ್ತಿದ್ದಾರೆ. ಸೈಬರ್ ವಂಚನೆ ಬಗ್ಗೆ ನಿತ್ಯ ವರದಿಯಾಗುತ್ತಿದ್ದರೂ ಹೂಡಿಕೆ ಮಾಡುವಾಗ ಜಾಗ್ರತೆ ವಹಿಸದಿರುವುದೇ ವಂಚಕರಿಗೆ ವರದಾನವಾಗಿದೆ.

ವಿದ್ಯುತ್ ಸ್ಪರ್ಶದಿಂದ ಕೂಲಿ ಕಾರ್ಮಿಕ ಸಾವು

ವಿರಾಜಪೇಟೆ, ಆ.3–ವಿದ್ಯುತ್ ಸ್ಪರ್ಶದಿಂದ ಕೂಲಿ ಕಾರ್ಮಿಕ ಮೃತಪಟ್ಟಿರುವ ಘಟನೆ ಪಟ್ಟಣದ ತೆಲುಗರ ಬೀದಿಯಲ್ಲಿ ಶನಿವಾರ ಬೆಳಗ್ಗೆ ನಡೆದಿದೆ. ಹುಣಸೂರು ತಾಲೂಕಿನ ಬಿಳಿಕೆರೆ ನಿವಾಸಿ ಸಿದ್ದರಾಜು (56) ಮೃತ ಕಾರ್ಮಿಕ. ಈತ ತನ್ನ ಪತ್ನಿ ಹಾಗೂ ಪುತ್ರನೊಂದಿಗೆ ಪಟ್ಟಣದ ತೆಲುಗರ ಬೀದಿಯಲ್ಲಿ ಬಾಡಿಗೆ ಮನೆಯೊಂದರಲ್ಲಿ ವಾಸವಿದ್ದು, ಕೂಲಿ ಕೆಲಸ ಮಾಡಿಕೊಂಡಿದ್ದರು. ಶನಿವಾರ ವಿದ್ಯುತ್ ಸ್ಪರ್ಶದಿಂದ ಮೃತಪಟ್ಟಿದ್ದಾರೆ.


ಚೇತನ್‌ರಾಜ್ ಅವರಿಗೆ ಹುಟ್ಟುಹಬ್ಬದ ಸಂಭ್ರಮ...



ಮೈಸೂರು ವಾರ್ಡ್ ನಂ. 54ರ ಭುವನ್‌ರಾಜ್ ಫೌಂಡೇಶನ್, ಡಾ.ಯತೀಂದ್ರ ಯುವ ಬ್ರಿಗೇಡ್ ರಾಜ್ಯ ಪ್ರಧಾನ ಕಾರ್ಯದರ್ಶಿ ಚೇತನ್‌ರಾಜ್ ಅವರ 36ನೇ ವರ್ಷದ ಹುಟ್ಟುಹಬ್ಬದ ಪ್ರಯುಕ್ತ ಕನಕಗಿರಿ ಶಾಲೆ ಮಕ್ಕಳಿಗೆ ಪುಸ್ತಕ, ಪೆನ್ನು ಹಾಗೂ ಸಿವೇಜ್ ಫಾರಂನಲ್ಲಿ ಒಂದು ದಿನದ ಗೋಪಾಲಕರಿಗೆ ಉಚಿತವಾಗಿ ಹಸಿ ಹುಲ್ಲು ನೀಡಲಾಯಿತು. ಪೌರಕಾರ್ಮಿಕರು ಹಾಗೂ ವಾರ್ಡ್ ನಂ. 54ರ ಪ್ರತಿ ಮನೆಯ ಹೆಣ್ಣು ಮಕ್ಕಳಿಗೆ ಸೀರೆ ಮತ್ತು ಸಿಹಿ ವಿತರಿಸಲಾಯಿತು. ಅಂಧ ಮಕ್ಕಳಿಗೆ ಧನ ಸಹಾಯ ಮಾಡಲಾಯಿತು. ಈ ವೇಳೆ ಪಳನಿ, ಮಹೇಶ್, ಚೇತನ್ ಆರ್‌ಎಂಸಿ, ಬಸವಣ್ಣ, ಮಂಜುನಾಥ್, ನಗರಪಾಲಿಕೆ ಮಾಜಿ ಸದಸ್ಯ, ಡಾ.ಯತೀಂದ್ರ ಯುವ ಬ್ರಿಗೇಡ್‌ನ ಕಂಸಾಳೆ ರವಿ ನೇತೃತ್ವದಲ್ಲಿ ಚೇತನ್‌ರಾಜ್ ಅವರನ್ನು ಸನ್ಮಾನಿಸಲಾಯಿತು.

ನಿಧನ

ಕುಂಡ್ಯೋಳಂಡ ನಾಣಯ್ಯ



ನಾಪೋಕ್ಲು, ಆ.3–ಕೊಳಕೇರಿ ಗ್ರಾಮದ ನಿವೃತ್ತ ಮುಖ್ಯ ಶಿಕ್ಷಕ ಹಾಗೂ ಮಡಿಕೇರಿ ನಿವಾಸಿ ಕುಂಡ್ಯೋಳಂಡ ನಾಣಯ್ಯ (90) ಶನಿವಾರ ನಿಧನರಾದರು. ಮೃತರು ಪತ್ನಿ ಜಬಿ, ಪುತ್ರ, ಪುತ್ರಿ ಹಾಗೂ ಅಪಾರ ಬಂಧು–ಬಳಗವನ್ನು ಅಗಲಿದ್ದಾರೆ. ನಾಪೋಕ್ಲು ಸಮೀಪದ ಕೊಳಕೇರಿ ಗ್ರಾಮದ ರುದ್ರಭೂಮಿಯಲ್ಲಿ ಅಂತ್ಯಕ್ರಿಯೆ ನೆರವೇರಿಸಲಾಯಿತು.

ಸರಸ್ವತಿ ಮಾಚವ್ವ



ನಾಪೋಕ್ಲು, ಆ.3–ಸಮೀಪದ ನೆಲಜಿ ಗ್ರಾಮದ ದಿ.ಮಾಣಿಚಂಡ ಬಿದ್ದಪ್ಪ ಅವರ ಪತ್ನಿ, ಸರಸ್ವತಿ ಮಾಚವ್ವ (85) ಶನಿವಾರ ನಿಧನರಾದರು. ಮೃತರು ಇಬ್ಬರು ಪುತ್ರರು, ಪುತ್ರಿ ಸೇರಿದಂತೆ ಅಪಾರ ಬಂಧು–ಬಳಗವನ್ನು ಅಗಲಿದ್ದಾರೆ. ನೆಲಜಿ ಗ್ರಾಮದಲ್ಲಿ ಅಂತ್ಯಕ್ರಿಯೆ ನೆರವೇರಿಸಲಾಯಿತು.

ಶತಾಯುಷಿ ಬಸಮ್ಮ



ಬೇಗೂರು, ಆ.3–ಗುಂಡ್ಲುಪೇಟೆ ತಾಲೂಕಿನ ಬೇಗೂರು ಸಮೀಪದ ಬೆಳಚಲವಾಡಿ ಗ್ರಾಮದ ಶತಾಯುಷಿ ಬಸಮ್ಮ (106) ಗ್ರಾಮದಲ್ಲಿ ನಿಧನರಾದರು. ಮೃತರು ಪುತ್ರ, ಪುತ್ರಿ, ಸೊಸೆ, ಮೊಮ್ಮಕ್ಕಳು ಹಾಗೂ ಅಪಾರ ಬಂಧು–ಬಳಗವನ್ನು ಅಗಲಿದ್ದಾರೆ. ಸ್ವಗ್ರಾಮ ಬೆಳಚಲವಾಡಿಯ ರುದ್ರಭೂಮಿಯಲ್ಲಿ ಅಂತ್ಯಕ್ರಿಯೆ ನೆರವೇರಿಸಲಾಯಿತು.

ಪ್ರೊ.ಶೇಖರ್ ಅಯ್ಯರ್



ಮೈಸೂರಿನ ಮೇಟಗಳ್ಳಿ ನಿವಾಸಿ ಪ್ರೊ ಶೇಖರ್ ಅಯ್ಯರ್ (67) ಅವರು ಶನಿವಾರ ಸಂಜೆ ನಿಧನರಾದರು. ಮೃತರು ತಾಯಿ, ಪುತ್ರ, ಸೊಸೆ ಹಾಗೂ ಅಪಾರ ಬಂಧು ವರ್ಗವನ್ನು ಅಗಲಿದ್ದಾರೆ. ಶ್ರೀಯುತರು ನೌಕಾಪಡೆ, ಮೈಷುಗರ್ ಕಾರ್ಖಾನೆ, ಮೈಸೂರಿನ ಆಟೋಮೋಟಿವ್ ಆಕ್ಸೆಲ್, ಬೆಂಗಳೂರು ಸಮೀಪದಲ್ಲಿರುವ ವೋಲ್ವೋ ಮೋಟಾರ್ಸ್ ಮುಂತಾದೆಡೆ ಉನ್ನತ ಹುದ್ದೆಗಳಲ್ಲಿ ಕಾರ್ಯನಿರ್ವಹಿಸಿದ್ದಾರೆ. ಅಲ್ಲದೇ ಪುತ್ತೂರಿನ ವಿವೇಕಾನಂದ ಎಂಜಿನಿಯರಿಂಗ್ ಮತ್ತು ಮ್ಯಾನೇಜ್‌ಮೆಂಟ್ ಕಾಲೇಜಿನ ಮ್ಯಾನೇಜ್‌ಮೆಂಟ್ ವಿಭಾಗದ ಮುಖ್ಯಸ್ಥರಾಗಿಯೂ ಕಾರ್ಯ ನಿರ್ವಹಿಸಿದ್ದರು.

ವಯನಾಡು ದುರಂತದಲ್ಲಿ ಮಡಿದ ಅಜ್ಜಿ ಮೊಮ್ಮಗ ಒಂದೇ ಚಿತೆಯಲ್ಲಿ ಅಂತ್ಯಸಂಸ್ಕಾರ



ಲೀಲಾವತಿ



ನಿಹಾಲ್

ಕೆ.ಆರ್.ಪೇಟೆ, ಆ.3– ಕೇರಳದ ವಯನಾಡಿನ ಭೂಕುಸಿತದಲ್ಲಿ ಮೃತಪಟ್ಟಿದ್ದ ಕತ್ತರಘಟ್ಟ ಗ್ರಾಮದ ಬಾಲಕ ನಿಹಾಲ್ ಮತ್ತು ಆತನ ಅಜ್ಜಿ ಲೀಲಾವತಿ ಅವರನ್ನು ಒಂದೇ ಚಿತೆಯಲ್ಲಿಟ್ಟು ಅಂತ್ಯಸಂಸ್ಕಾರ ನೆರವೇರಿಸಲಾಯಿತು.

ಕೇರಳದಿಂದ ವಿಶೇಷ ಅಂಬ್ಯುಲೆನ್ಸ್‌ನಲ್ಲಿ ಗುರುವಾರ ರಾತ್ರಿ ಕತ್ತರಘಟ್ಟ ಗ್ರಾಮಕ್ಕೆ ಇವರಿಬ್ಬರ ದೇಹಗಳನ್ನು ತರಲಾಯಿತು. ಶವಗಳು ಗ್ರಾಮಕ್ಕೆ ಆಗಮಿಸುತ್ತಿದ್ದಂತೆಯೇ ಕುಟುಂಬಸ್ಥರ ರೋದನೆ ಮುಗಿಲು ಮುಟ್ಟುವಂತಿತ್ತು. ಸಮಸ್ತ ಗ್ರಾಮದ ಜನ ಜಾತಿ ಭೇದವಿಲ್ಲದೆ ಆಂಬ್ಯುಲೆನ್ಸ್ ವಾಹನದಲ್ಲಿಯೇ ಮೃತರ ಅಂತಿಮ ದರ್ಶನ ಪಡೆದುಕೊಂಡರು. ಗ್ರಾಮಸ್ಥರ ನೆರವಿನಿಂದ ಮೃತ ಅಜ್ಜಿ ಲೀಲಾವತಿ ಮತ್ತು ಮೊಮ್ಮಗ ನಿಹಾಲ್ ಅಂತ್ಯಕ್ರಿಯೆಯನ್ನು ಅಂದು ಮಧ್ಯರಾತ್ರಿಯೇ ಒಂದೇ ಚಿತೆಯಲ್ಲಿಟ್ಟು ನೆರವೇರಿಸಲಾಯಿತು. ದುರಂತ ಸಾವಿಗೆ ಇಡೀ ಗ್ರಾಮವೇ ದುಃಖದ ಮಡುವಿನಲ್ಲಿದ್ದು, ಸೂತಕದ ಛಾಯೆ ಆವರಿಸಿದೆ. ಗಣ್ಯಾತಿಗಣ್ಯರು ಗ್ರಾಮಕ್ಕೆ ಆಗಮಿಸಿ ಮೃತ ಬಂಧುಗಳಿಗೆ ಸಾಂತ್ವನ ಹೇಳುತ್ತಿದ್ದಾರೆ.

ಅಂತ್ಯಸಂಸ್ಕಾರದಲ್ಲಿ ಶಾಸಕ ಹೆಚ್.ಟಿ. ಮಂಜು, ಮಂಡ್ಯ ಜಿಲ್ಲಾಧಿಕಾರಿ ಡಾ. ಕುಮಾರ್, ಪಾಂಡವಪುರ ಉಪ ವಿಭಾಗಾಧಿಕಾರಿ ನಂದೀಶ್, ತಹಸೀಲ್ದಾರ್ ನಿಸರ್ಗ ಪ್ರಿಯ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮಲ್ಲಿಕಾರ್ಜುನ್ ಬಾಲದಂಡಿ, ಮಾಜಿ ಸಚಿವ ಕೆ.ಸಿ.ನಾರಾಯಣಗೌಡ, ಮಾಜಿ ಶಾಸಕ ಬಿ.ಪ್ರಕಾಶ್, ಆರ್‌ಟಿಓ ಅಧಿಕಾರಿ ಮಲ್ಲಿಕಾರ್ಜುನ್, ಪುರಸಭೆ ಮುಖ್ಯಾಧಿಕಾರಿ ರಾಜು.ಕೆ.ವಠಾರ, ತಾ.ಪಂ.ಕಾರ್ಯನಿರ್ವಾಹಕ ಅಧಿಕಾರಿ ಸತೀಶ್, ಟಿಎಪಿಸಿಎಂಎಸ್ ಅಧ್ಯಕ್ಷ ಬಿ.ಎಲ್.ದೇವರಾಜು, ಕೆಂಯುಐಡಿಎಫ್‌ಸಿ ಮಾಜಿ ಅಧ್ಯಕ್ಷ ಮತ್ತಘಟ್ಟ ಕೃಷ್ಣಮೂರ್ತಿ ಸದಸ್ಯರಾದ ಡಿ.ಪ್ರೇಮಕುಮಾರ್, ಕೆ.ಸಿ.ಮಂಜುನಾಥ್, ಬಸ್ ಸಂತೋಷ್‌ಕುಮಾರ್ ಸೇರಿದಂತೆ ನೂರಾರು ಜನರು ಅಂತ್ಯಸಂಸ್ಕಾರದಲ್ಲಿ ಭಾಗಿಯಾಗಿದ್ದರು. ಶುಕ್ರವಾರ ಮೃತರ ಮನೆಗೆ ಭೇಟಿ ನೀಡಿದ ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ ಮೃತರ ಕುಟುಂಬಸ್ಥರಿಗೆ ಸಾಂತ್ವನ ಹೇಳಿದರು. ದುರಂತದಲ್ಲಿ ಮಡಿದ ಲೀಲಾವತಿ ಕುಟುಂಬಕ್ಕೆ ಮುಖ್ಯಮಂತ್ರಿಗಳ ಪರಿಹಾರ ನಿಧಿಯಿಂದ 5 ಲಕ್ಷ ರೂ ನೀಡಲಾಗುವುದು. ಬಾಲಕನ ಸಾವಿಗೆ ಪರಿಹಾರ ನೀಡಲು ನಿಯಮಾವಳಿಗಳಲ್ಲಿ ಅವಕಾಶವಿಲ್ಲದಿದ್ದರೂ ಕನಿಷ್ಠ 3 ಲಕ್ಷ ರೂಗಳನ್ನಾದರೂ ಆತನ ಕುಟುಂಬದವರಿಗೆ ನೀಡುವ ಬಗ್ಗೆ ಮುಖ್ಯಮಂತ್ರಿಗಳೊಂದಿಗೆ ಮಾತನಾಡುವುದಾಗಿ ತಿಳಿಸಿದರಲ್ಲದೆ, ಕುಟುಂಬದವರಿಗೆ ವೈಯಕ್ತಿಕವಾಗಿ ಧನಸಹಾಯ ನೀಡಿದರು.


ವಯನಾಡ್ ಭೂಕುಸಿತದ 4 ದಿನಗಳ ನಂತರ ಗುಹೆಯೊಂದರಿಂದ 4 ಮಕ್ಕಳ ರಕ್ಷಣೆ

ಆಪತ್ಬಾಂಧವರಾದ ಅರಣ್ಯ ಸಿಬ್ಬಂದಿ



ವಯನಾಡು, ಆ.3– ಕೇರಳದ ವಯನಾಡಿನಲ್ಲಿ ಸಂಭವಿಸಿದ ಭೀಕರ ಭೂಕುಸಿತದಲ್ಲಿ ಇದುವರೆಗೆ 300ಕ್ಕೂ ಹೆಚ್ಚು ಜನರು ಸಾವನ್ನಪ್ಪಿದ್ದು, ಹೆಚ್ಚಿನ ಸಂಖ್ಯೆಯ ಜನರು ಇನ್ನೂ ನಾಪತ್ತೆಯಾಗಿದ್ದಾರೆ. ಈ ಭೀಕರ ದುರಂತದ ನಡುವೆ, ಭೂಕುಸಿತ ಪೀಡಿತ ವಯನಾಡಿನಲ್ಲಿ ಕೇರಳ ಅರಣ್ಯಾಧಿಕಾರಿಗಳು ದಣಿವರಿಯದ 8 ಗಂಟೆಗಳ ಕಾರ್ಯಾಚರಣೆಯ ನಂತರ ಅರಣ್ಯದಲ್ಲಿ 6 ಮಂದಿಯನ್ನು ರಕ್ಷಿಸಿದ್ದಾರೆ.

ಈ ರಕ್ಷಣಾ ಕಾರ್ಯಾಚರಣೆಗೆ ಪ್ರತಿಕ್ರಿಯಿಸಿದ ಕೇರಳ ಸಿಎಂ ಪಿಣರಾಯಿ ವಿಜಯನ್, ಅರಣ್ಯ ಅಧಿಕಾರಿಗಳ ಈ ಮನೋಭಾವವು ಬಿಕ್ಕಟ್ಟಿನ ಕರಾಳ ಸಮಯದಲ್ಲೂ ಕೇರಳದ ಚೈತನ್ಯವನ್ನು ಬೆಳಗಿಸುವುದನ್ನು ನಮಗೆ ನೆನಪಿಸುತ್ತದೆ. ನಾವು ಒಗ್ಗಟ್ಟಿನಿಂದ ಪುನರ್ನಿರ್ಮಾಣ ಮಾಡುತ್ತೇವೆ. ಬಲಶಾಲಿಯಾಗುತ್ತೇವೆ ಎಂದು ಹೇಳಿದರು. ಕಲಪೆಟ್ಟಾ ವಲಯ ಅರಣ್ಯಾಧಿಕಾರಿ ಕೆ. ಹಶಿಸ್ ನೇತೃತ್ವದ ನಾಲ್ವರ ತಂಡ ಗುರುವಾರ ಅರಣ್ಯದೊಳಗಿನ ಅಪಾಯಕಾರಿ ಮಾರ್ಗವನ್ನು ದಾಟಿ ಬುಡಕಟ್ಟು ಕುಟುಂಬವನ್ನು ರಕ್ಷಿಸುವ ಮೂಲಕ ಈ ರಕ್ಷಣಾ ಕಾರ್ಯಾಚರಣೆ ನಡೆಸಿತು. ರಕ್ಷಿಸಲ್ಪಟ್ಟ ಮಕ್ಕಳಲ್ಲಿ ಬುಡಕಟ್ಟು ಸಮುದಾಯದ ಒಂದರಿಂದ ನಾಲ್ಕು ವರ್ಷದೊಳಗಿನ ನಾಲ್ಕು ಮಕ್ಕಳು ಸೇರಿದ್ದಾರೆ.



ONLY ONE WAY TAXI CHARGE

Hi! TAXI

MYSORE to BANGALORE
City drop or Pick up

BANGALORE to MYSORE
Airport drop or Pick up

MYSURU

9611177599

9ನೇ ವರ್ಷದ ಪುಣ್ಯಸ್ಮರಣೆ



ನಿಧನ: 04-08-2015

ದುಃಖತಪ್ತರು ಪತ್ನಿ & ಮಗ ಹಾಗೂ ನಿಮ್ಮ ಕುಟುಂಬ ವರ್ಗದವರು, ಮೈಸೂರು

ರವಿಕುಮಾರ್ ಆರ್.
ಮಾಲೀಕರು, ಮಾತೃ ಹಾರ್ಡ್‌ವೇರ್ ಆನಂದನಗರ

ಹುಟ್ಟುಹಬ್ಬದ ಸವಿನೆನಪು



ದಿ|| ನಾಗೇಂದ್ರ ಸ್ವಾಮಿ ಕೆ.ಪಿ

ನಿಧನ: 27.07.2024 ಜಿಲ್ಲಾ ಸಂಯೋಜಕರು

ಜಿಲ್ಲಾ ಪಂಚಾಯತ್, ಆರೋಗ್ಯ ಇಲಾಖೆ, ಮೈಸೂರು.
:- SMHS ಗುರುಗಳು ಶಿಷ್ಯರು ಬಳಗ, ಪಡುಗೂರು.

ಮೂರನೇ ವರ್ಷದ ಪುಣ್ಯಸ್ಮರಣೆ



ದಿ|| ಶ್ರೀ ಪುಟ್ಟಸ್ವಾಮಿಗೌಡರು

ಮಾಜಿ ಮಂಡಲ ಪಂಚಾಯಿತಿ ಸದಸ್ಯರು.
ಡಿ. ಸಾಲುಂಡಿ ಗ್ರಾಮ, ಮೈಸೂರು ತಾಲ್ಲೂಕು.

ಇವರು ದಿನಾಂಕ 04-08-2024ನೇ ಭಾನುವಾರಕ್ಕೆ ನಮ್ಮನ್ನು ಅಗಲಿ ಇಂದಿಗೆ ಮೂರು ವರ್ಷವಾಗಿದ್ದು, ನಿಮ್ಮ ನೆನಪು ನಮ್ಮ ಮನದಲ್ಲಿ ಸದಾ ಹಸಿರಾಗಿದೆ.

ಕುಟುಂಬ ವರ್ಗದವರು: ಶ್ರೀಮತಿ ಶಿವಮ್ಮ ಲೇಟ್ ಪುಟ್ಟಸ್ವಾಮಿಗೌಡರು.
ಶ್ರೀಮತಿ ಸವಿತ ಎಸ್. ಪಿ. ಕೃಷ್ಣಮೂರ್ತಿರವರು
ಧನಗಹಳ್ಳಿ ಗ್ರಾಮ ಪಂಚಾಯಿತಿ ಉಪಾಧ್ಯಕ್ಷರು, ಡಿ. ಸಾಲುಂಡಿ.

ದುಃಖತಪ್ತರು: ಕುಟುಂಬವರ್ಗದವರಾದ ಲೇ|| ಚಿಕ್ಕತಾಯಮ್ಮ ಮತ್ತು ಶ್ರೀ. ಲೇ|| ಹಲಗೂರೆಗೌಡರು ಮತ್ತು ಲೇ|| ದೊಡ್ಡತಮ್ಮೇಗೌಡ, ಲೇ|| ಬಸವೇಗೌಡ್ರು, ಲೇ|| ಚಿಕ್ಕತಮ್ಮೇಗೌಡ, ಲೇ|| ಮರೀಗೌಡ್ರು, ಮತ್ತು ಕುಟುಂಬವರ್ಗದವರು ಹಾಗೂ ಬಂಧು ಮಿತ್ರರು, ಡಿ.ಸಾಲುಂಡಿ ಗ್ರಾಮ.

ನಿವೇಶನ ಮಾರಾಟಕ್ಕಿದೆ

ನಿವೇಶನ ಸಂಖ್ಯೆ 117, **36x50** ಪೂರ್ವ ದಿಕ್ಕು (ಮೈಸೂರು ಮತ್ತು ಚಾಮರಾಜನಗರ ಜಿಲ್ಲಾ ಶಿಕ್ಷಕರ ಬಡಾವಣೆ) (ಮೈಸೂರು ನಗರ ಪಾಲಿಕೆಗೆ ವ್ಯಾಪ್ತಿಗೆ ಒಳಪಟ್ಟಿರುತ್ತದೆ). ಡಾ|| ರಾಜ್‌ಕುಮಾರ್ ರಸ್ತೆ, 1ನೇ ಹಂತ, ಮೈಸೂರು. ಸಂಪರ್ಕಿಸಿ:

9341299699, 9900666189

3 BHK VILLA

₹ 75 Lakhs Only

Close to Ring Road & H D Kote Road

30 x 40 PLOTS Also Available

APPROVED MUDA

Yesh 9538885508

REQUIRED
GENERAL MANAGER/CASHIERS

Reputed Corporate Company
Based in Bangalore
Having Contract in Tourist places
in Mysore is looking for
General Manager
(Having Experience in Managing Man Power Operations In Large organisation)
& **Cashiers**
with experience.
(Retired Bank employees preferred.)

Email your Resume to
toto.outsourcingsolutions@gmail.com

ಸಾರ್ವಜನಿಕ ಪ್ರಕಟಣೆ

ಸಾರ್ವಜನಿಕರಿಗೆ ತಿಳಿಯಪಡಿಸುವುದೇನೆಂದರೆ ನನ್ನ ಕಕ್ಷಿದಾರರಾದ ಮೈಸೂರು ಜಿಲ್ಲೆ, ಟಿ. ನರಸೀಪುರ ತಾಲ್ಲೂಕು, ಬನ್ನೂರು ಹೋಬಳಿ, ಚಾಮನಹಳ್ಳಿ ಗ್ರಾಮದಲ್ಲಿ ವಾಸವಾಗಿರುವ ಶಿವಣ್ಣ ಬಿನ್ ಲೇಟ್ ಸಿದ್ದಯ್ಯ, ವಯಸ್ಸು 53 ವರ್ಷಗಳು ರವರಿಗೆ ಸೇರಿದ ಕ್ರಯಪತ್ರ, ನಂ. 496/2002–2003, ದಿನಾಂಕ: 17.06.2002, ಮೈಸೂರು ಜಿಲ್ಲೆ, ಟಿ. ನರಸೀಪುರ ತಾಲ್ಲೂಕು, ಬನ್ನೂರು ಹೋಬಳಿ, ಚಾಮನಹಳ್ಳಿ ಗ್ರಾಮದ ಕ್ರಯ ಪತ್ರದ ದಿನಾಂಕ: 29.07.2024 ರಂದು ಕಳೆದು ಹೋಗಿರುತ್ತದೆ. ಇದರ ಸಂಬಂಧ ದಿನಾಂಕ: 29.07.2024 ರಂದು ಬನ್ನೂರು ಪೊಲೀಸ್ ಠಾಣೆಗೆ ದೂರಿನ ಸಂಖ್ಯೆ 1167896/2024ರಂತೆ ದೂರನ್ನು ದಾಖಲಿಸಿರುತ್ತಾರೆ. ಸದರಿ ಪಕ್ಕಾ ಪತ್ರ ಯಾರಿಗಾದರೂ ದೊರಕಿದಲ್ಲಿ ಈ ಕೆಳಗೆ ನಮೂದಿಸಿರುವ ವಿಳಾಸಕ್ಕೆ ಸಾರ್ವಜನಿಕ ಪ್ರಕಟಣೆ ದಿನಾಂಕದಿಂದ 7 (ಏಳು) ದಿನಗಳ ಒಳಗಾಗಿ ತಲುಪಿಸತಕ್ಕದ್ದು. ಒಂದೊಮ್ಮೆ ಯಾವುದೇ ವ್ಯಕ್ತಿ/ವ್ಯಕ್ತಿಗಳು ಸದರಿ ಹಕ್ಕು ಪತ್ರವನ್ನು ದುರುಪಯೋಗ ಪಡಿಸಿಕೊಂಡಲ್ಲಿ ಸದರಿ ವ್ಯಕ್ತಿಗಳೆ ಹೊಣೆಗಾರರಾಗುತ್ತಾರೆ. ಹಾಗೂ ನಮ್ಮ ಕಕ್ಷಿದಾರರು ಬಾಧ್ಯರಾಗುವುದಿಲ್ಲ ಎಂದು ಈ ಮೂಲಕ ತಿಳಿಯಪಡಿಸಲಾಗಿದೆ.

ಸಹಿ/– **ಲೋಹಿತ್ ಎನ್**, B.A.L., LL.B.
ವಕೀಲರು
ವಿಳಾಸ: ಶ್ರೀ ಸಾಯಿ ಲಾ–ಅಸೋಸಿಯೇಟ್
ನಂ.2967/2, 14ನೇ ಮೇನ್, 2ನೇ ಕ್ರಾಸ್,
ಸರಸ್ವತಿಪುರಂ, –570009

ದಿ: 30.07.2024 ಮೊ: **9611113323**
ಸ್ಥಳ : ಮೈಸೂರು e-mail: lohi adv@gmail.com

ನಿಸರ್ಗ ಇಕೋ ಪ್ಯಾರಡೈಸ್

HP HYLAND PROPERTIES

ಮೈಸೂರು - ಹುಣಸೂರು ಮುಖ್ಯರಸ್ತೆ, ಮೈಸೂರು

DTCP APPROVAL

ನಿಮ್ಮ ಕನಸಿನ ನಿವೇಶನ ಮೈಸೂರಿನಲ್ಲಿ

ಸುಲಭ 4 ಕಂತುಗಳ ಸೌಲಭ್ಯವಿದೆ

ಕೇವಲ ₹650/ ಪ್ರತಿ ಚದರ ಅಡಿ

30x40 | 30x50
40x60 | 50x80

ಅಳತೆಯ ಎಲ್ಲಾ ಸೌಲಭ್ಯಗಳನ್ನು ಒಳಗೊಳ್ಳುವ ನಿವೇಶನಗಳು

ಕಲವೇ ಸೈಟ್‌ಗಳು ಮಾತ್ರ ಲಭ್ಯ

ಹೈಲ್ಯಾಂಡ್ ಪ್ರಾಪರ್ಟೀಸ್
ಮೈಸೂರು - ಹುಣಸೂರು ಮುಖ್ಯರಸ್ತೆ, ಮೈಸೂರು

90713 86615
74060 01386

ಸಾರ್ವಜನಿಕ ಪ್ರಕಟಣೆ

ಈ ಮೂಲಕ ಪ್ರಚುರ ಪಡಿಸುವುದೇನೆಂದರೆ, ನನ್ನ ಕಕ್ಷಿ ದಾರರು ಶೆಡ್ಯೂಲ್ ಸ್ವತ್ತನ್ನು ಮೈಸೂರು ಜಿಲ್ಲೆ ಜಯಪುರ ಹೋಬಳಿ ಧನಗಹಳ್ಳಿ ಅಂಚೆ, ಡಿ. ಸಾಲುಂಡಿ ಗ್ರಾಮದ ಮನೆ ಸಂಖ್ಯೆ 341 ರಲ್ಲಿ ವಾಸವಾಗಿರುವ ಕಂದೇಗೌಡರ ಮಗ ಸುಮಾರು 42 ವಯಸ್ಸಿನ ಕೆ. ಮಹದೇವ, ಇವರಿಂದ ಕ್ರಯಕ್ಕೆ ಪಡೆಯಲು ನಿರ್ಧರಿಸಿರುತ್ತಾರೆ.

ಯಾರಿಗಾದರೂ ಈ ಶೆಡ್ಯೂಲ್ ಸ್ವತ್ತಿನ ಮೇಲೆ ಯಾವುದೇ ರೀತಿಯ ಹಕ್ಕು, ಅಧಿಕಾರ, ಪಾಲು, ಕ್ರಯದ ಕರಾರು ಇದ್ದಲ್ಲಿ ಈ ಪ್ರಕಟಣೆಯ ದಿನದಿಂದ 14 ದಿನಗಳೊಳಗೆ ಈ ಕೆಳಗಿನ ವಿಳಾಸದಾರರನ್ನು ಸಂಪರ್ಕಿಸತಕ್ಕದ್ದು. ತಪ್ಪಿದಲ್ಲಿ, ಈ ಸ್ವತ್ತಿನ ಮೇಲೆ ಯಾವುದೇ ರೀತಿಯ ಹಕ್ಕು, ಅಧಿಕಾರ, ಅಭ್ಯಂತರಗಳು ಇರುವುದಿಲ್ಲವೆಂದು ಭಾವಿಸಿ ಮಾರಾಟ ಪ್ರಕ್ರಿಯೆಯನ್ನು ಪೂರ್ಣಗೊಳಿಸಲಾಗುವುದು .

ಶೆಡ್ಯೂಲ್ ಸ್ವತ್ತಿನ ವಿವರ

ಮೈಸೂರು ತಾಲೂಕ್ ಜಯಪುರ ಹೋಬಳಿ ಮದ್ದೂರು ಗ್ರಾಮದ ಸರ್ವೇ ಸಂಖ್ಯೆ 193/3 ಜಮೀನು, ಒಟ್ಟು ವಿಸ್ತೀರ್ಣ 2.00 ಎಕರೆ, ಇದರ ಚಕ್ಕುಬಂದಿ

ಪೂರ್ವಕ್ಕೆ–ರಸ್ತೆ, ಪಶ್ಚಿಮಕ್ಕೆ – ಮಹದೇವಪ್ಪನವರ ಜಮೀನು, ಉತ್ತರಕ್ಕೆ–ಗೂಡಯ್ಯನವರ ಜಮೀನು, ದಕ್ಷಿಣಕ್ಕೆ–ಬೈರಾಚಾರಿಯವರ ಜಮೀನು.

ಸಹಿ/– **ಎಂ ಎನ್ ಶ್ರೀಧರ್**, ವಕೀಲರು,
212 /ಎಸ್, 4ನೇ ಮೇನ್, 1 ಬಿ ಕ್ರಾಸ್,
ಐ ಬ್ಲಾಕ್, ರಾಮಕೃಷ್ಣ ನಗರ,
ಮೈಸೂರು –570022.
Mob: 9448567703,
sridhar.madenur@gmail.com

PUBLIC NOTICE

It is hereby notified to the General public that my client is intending to purchase the below-mentioned Schedule property for a valuable consideration from its absolute owner's Sri.Shankar,S/o Chikkanna, aged about 37 years residing at Dasanakoppal Village, Jayapura hobli, Mysore Taluk and Mysore Dist, hence if anybody / General public has any Right, Title, Interest or Claim/s, Lien/s, Objection/s, Charge/s, or GPA holder, etc., over the Schedule Property shall contact me at the below mentioned address during the working hours, with the documentary proofs in original within 10 (Ten) days from the date of this publication. Failing which it will be presumed by my client that (a) there are no claim/s, lien/s, objection/s, etc., (b) if any, the same is / are deemed to have been waived and thus my client will be obliged to proceed with the execution and Registration of the Absolute Sale Deed as if there are no valid claim/s, lien/s, objection/s, charge/s, etc., subsisting against the Schedule property.

SCHEDULE

All the piece and parcel of the property bearing NO.1285/1264, Unique code 152200402734120371 situated at Dasanakoppal Village, Marti kyathanahalli Village panchayath, Jayapura hobli, Mysore Taluk and Mysore Dist bounded on;
East by: Property of Honne Gowda,
West by: Road, North by: Road
South by: Property of Neele gowda
East to West 12.192 Meters, North to South 16.764 meters in all 204.39 Square meters Site along bounded on.

Sd/- **Kenche Gowda Patel**
BAL, LLB, Advocate
Address: # 2394, SK complex,
Kanthraj Urs road, K.G Koppal
Mysore Mobile: 9632299404
kenchegowdapatel@gmail.com
Date: 3-8-2024, Mysore
Mob: 9036135093

TO-LET

12,000 sqft, Vastu compliant,
100 Seats plug & Play, 200 seaters capacity, Ground + 2 floors 62.5Kw load with 62.2Kw DG, AC, CCTV, Access Control, Parking
Suitable for : BPO, IT & ITeS, R&D, Data Center & DR Site, S/W Development, Call Center, Back Office & More..

9845941118 / 9686910222

ಬೇಕಾಗಿದ್ದಾರೆ

ಹೋಟೆಲ್ ಫಿಡಾಲ್ಗೊ – ಗೋವಾ, ನಮ್ಮ ವಿಶೇಷ ಉಪಹಾರ ಗೃಹ ಸದರ್ನ್ ಬೆಸಿಲ್‌ಗಾಗಿ ದಕ್ಷಿಣ ಭಾರತೀಯ ಬಾಣಸಿಗರು ಬೇಕಾಗಿದ್ದಾರೆ.

1. ಚೆಫ್ ಡಿ ಕ್ಯುಸಿನ್ (CDC) ಅಥವಾ ಜೂನಿಯರ್ ಸೌಸ್ ಚೆಫ್ / ಸೌಸ್ ಚೆಫ್
2. Sr. CDP / CDP
3. DCDP / Commie-1

- ಕರ್ನಾಟಕ, ಆಂಧ್ರ, ತಮಿಳುನಾಡು ಹಾಗೂ ಕೇರಳದ ಸಾಂಪ್ರದಾಯಿಕ ಅಡುಗೆ ಅನುಭವ ಹೊಂದಿರಬೇಕು
- ಅನುಭವಕ್ಕೆ ತಕ್ಕ ಸಂಬಳ ಉಚಿತ ವಸತಿ ಮತ್ತು ಊಟ

ಗೋವಾಕ್ಕೆ ಅಧಿಕೃತ ದಕ್ಷಿಣ ಭಾರತದ ರುಚಿಗಳನ್ನು ತರಲು ನಮ್ಮ ಪಾಕಶಾಲೆಯ ಪ್ರಯಾಣದ ಭಾಗವಾಗಲು ನಮ್ಮೊಂದಿಗೆ ಸೇರಿ

ಸಂಪರ್ಕಿಸಿ: ಹೋಟೆಲ್ ಫಿಡಾಲ್ಗೊ, 18ನೇ ಜೂನ್ ರಸ್ತೆ, ಪಣಜಿ, ಗೋವಾ-403001
Email: hr@hotelfidalgo.com or gm@hotelfidalgo.com
WhatsApp / Cell : 87999 01577 / 87999 01530

ಪಟ್ಟಣ ಪಂಚಾಯಿತಿ ಕಾರ್ಯಾಲಯ, ಬೋಗಾದಿ

ಮೈಸೂರು ತಾಲ್ಲೂಕು ಮತ್ತು ಜಿಲ್ಲೆ – 570026. ದೂ:0821–2331099
ಇಮೇಲ್: itstaff_ulb_bogadi@yahoo.com ವೆಬ್‌ಸೈಟ್: www.bogaditown.mrc.gov.in

ಸಂಖ್ಯೆ:ಪ.ಪಂ.ಬೋಗಾದಿ/ತಾ.ಶಾ/ಟೆಂಡರ್.ಸಿ.ಆರ್.03/2024–25 ದಿನಾಂಕ:01.08.2024

ಇ–ಪ್ರೊಕ್ಯೂರ್‌ಮೆಂಟ್ ಟೆಂಡರ್ ಪ್ರಕಟಣೆ

2024–25ನೇ ಸಾಲಿನ 15ನೇ ಹಣಕಾಸು ಯೋಜನೆಯ ನಿರ್ಬಂಧಿತ ಅನುದಾನದಲ್ಲಿ ಬೋಗಾದಿ ಪಟ್ಟಣ ಪಂಚಾಯಿತಿ ವ್ಯಾಪ್ತಿಯಲ್ಲಿ ಕುಡಿಯುವ ನೀರು ಸಂಬಂಧಿತ ಕಾಮಗಾರಿಯನ್ನು ಕೈಗೊಳ್ಳಲು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧ್ಯಾದೇಶ 1999 ಮತ್ತು ನಿಯಮಗಳು 2000ದಂತೆ, ಇ–ಪ್ರಕ್ಯೂರ್‌ಮೆಂಟ್ ಸೆಲ್ ಬೆಂಗಳೂರುರವರಲ್ಲಿ ನೋಂದಾಯಿತ ಸಿವಿಲ್ ಗುತ್ತಿಗೆದಾರರುಗಳಿಂದ ಇ–ಪೋರ್ಟಲ್ **https://kppp.karnataka.gov.in** ಮೂಲಕ ಟೆಂಡರ್‌ನ್ನು ಆಹ್ವಾನಿಸಲಾಗಿದ್ದು, ಆಸಕ್ತ ಅರ್ಹ ಸಿವಿಲ್ ಗುತ್ತಿಗೆದಾರರು ತಮ್ಮ ಟೆಂಡರ್‌ಗಳನ್ನು **KW-2** ರ ಪ್ರಮಾಣಿತ ಟೆಂಡರ್ ದಸ್ತಾವೇಜಿನ ನಿಯಮಗಳಂತೆ ಟೆಂಡರ್‌ನಲ್ಲಿ ಭಾಗವಹಿಸಬಹುದಾಗಿರುತ್ತದೆ. **INDENT NO. DMA/2024-25/WS/WORK_INDENT20399** ಅಂದಾಜು ಮೊತ್ತ ರೂ.36.70 ಲಕ್ಷ, ಇ.ಎಂ.ಡಿ. ರೂ.73,400/–ಗಳ ಟೆಂಡರ್‌ನ್ನು **ದಿನಾಂಕ:17–08–2024ರ ಸಂಜೆ 5.30 ಗಂಟೆಯೊಳಗೆ** ಇ–ಪೋರ್ಟಲ್‌ನಲ್ಲಿ ಸಲ್ಲಿಸತಕ್ಕದ್ದು. **ದಿನಾಂಕ:19–08–2024ರಂದು ಬೆಳ್ಳಿಗೆ 11:30 ಗಂಟೆಗೆ** ಪೋರ್ಟಲ್‌ನಲ್ಲಿ ಭರ್ತಿಮಾಡಿದ ಟೆಂಡರ್‌ಗಳನ್ನು ತೆರೆಯಲಾಗುವುದು (ಸಾಧ್ಯವಾಗದಿದ್ದಲ್ಲಿ ಮುಂದಿನ ದಿನಾಂಕದಂದು ಟೆಂಡರ್ ತೆರೆಯಲಾಗುವುದು ಹಾಗೂ ತಿದ್ದುಪಡಿ/ಬದಲಾವಣೆಗಳಿದ್ದಲ್ಲಿ ಪತ್ರಿಕೆ ಪ್ರಕಟಣೆ ಹೊರಡಿಸಲಾಗುವುದಿಲ್ಲ) ಟೆಂಡರ್ ಅಂಗೀಕರಿಸುವ ತಿರಸ್ಕರಿಸುವ ಹಕ್ಕನ್ನು ಪಟ್ಟಣ ಪಂಚಾಯಿತಿ ಬೋಗಾದಿ ಕಾಯ್ದಿರಿಸಿಕೊಂಡಿದೆ. ಹೆಚ್ಚಿನ ವಿವರಗಳಿಗೆ ಪಟ್ಟಣ ಪಂಚಾಯಿತಿಯ ವೆಬ್ ಸೈಟ್ **www.bogaditown.mrc.gov.in**ರ ಟೆಂಡರ್ ವಿಭಾಗದಲ್ಲಿ ವೀಕ್ಷಿಸಬಹುದಾಗಿದೆ.

ಸಹಿ/– ಮುಖ್ಯಾಧಿಕಾರಿಗಳು
ಪಟ್ಟಣ ಪಂಚಾಯಿತಿ, ಬೋಗಾದಿ

DIPR/MYS/KAVITA/365/24-25

ಮೈಸೂರು ಮಿತ್ರ
ಓದುಗರ ಗಮನಕ್ಕೆ

ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸಪೂರ್ಣವೇ ಆದರೂ ಅವುಗಳಲ್ಲಿನ ಮಾಹಿತಿ, ವಸ್ತು ಲೋಪ ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರರೊಡನೆಯೇ ವ್ಯವಹರಿಸಬೇಕಾಗುತ್ತದೆ. ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.

-ಜಾಹೀರಾತು ವ್ಯವಸ್ಥಾಪಕರು

ಹಸಿರು ನಮ್ಮ ಉಸಿರು

NOT GETTING YOUR STAR OF MYSORE & ಮೈಸೂರು ಮಿತ್ರ
Call: 98452-96447 / 99003-82840



ಕಪಿಲಾ ನದಿ ಪ್ರವಾಹದಿಂದ ತೊಂದರೆಗೊಳಗಾದ

100 ಕುಟುಂಬಕ್ಕೆ ಮನೆ ನಿರ್ಮಿಸಿ ಕೊಡಲು ಕ್ರಮ

ಬೊಕ್ಕಹಳ್ಳಿ ಗ್ರಾಮಸ್ಥರಿಗೆ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ಭರವಸೆ

ನಂಜನಗೂಡು, ಆ.3– ಪ್ರತಿವರ್ಷ ಕಪಿಲಾ ನದಿಯಲ್ಲಿ ಪ್ರವಾಹ ಉಂಟಾದಾಗ ತಾಲೂಕಿನ ಬೊಕ್ಕಹಳ್ಳಿಯ 100 ಮನೆಗಳಿಗೆ ನೀರು ನುಗ್ಗಿ ತೊಂದರೆಯಾಗಲಿದೆ. ಆ ಕುಟುಂಬಗಳಿಗೆ ಸರ್ಕಾರದಿಂದ ಬದಲಿ ನಿವೇಶನ ನೀಡಿ ಮನೆ ನಿರ್ಮಿಸಿ ಕೊಡಲು ಕ್ರಮ ವಹಿಸಲಾಗುವುದು ಎಂದು ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ಭರವಸೆ ನೀಡಿದರು.

ತಾಲೂಕಿನ ಬೊಕ್ಕಹಳ್ಳಿ ಗ್ರಾಮಕ್ಕೆ ಶನಿವಾರ ಭೇಟಿ ನೀಡಿ ಕಪಿಲಾ ನದಿ ಪ್ರವಾಹಕ್ಕೆ ಸಿಲುಕಿ ತೊಂದರೆಗೊಳಗಾದ ಬಡಾವಣೆಗಳನ್ನು ಪರಿಶೀಲಿಸಿ ನಂತರ ಕಾಳಜಿ ಕೇಂದ್ರದಲ್ಲಿ ಸಾರ್ವಜನಿಕರಿಂದ ಅಹವಾಲು ಸ್ವೀಕರಿಸಿ ಅವರು ಮಾತನಾಡಿದರು.

ಬೊಕ್ಕಹಳ್ಳಿಯಲ್ಲಿ 225 ಮನೆಗಳಿದ್ದು, ಈ ಪೈಕಿ 2018ರಿಂದ ಪ್ರತಿವರ್ಷ ನದಿಯಂಚಿನ ಪರಿಶಿಷ್ಟ ಜಾತಿ, ಪಂಗಡದವರು ವಾಸಿಸುವ 100 ಮನೆಗಳು ಕಪಿಲಾ ನದಿ ಪ್ರವಾಹದಿಂದ ತೊಂದರೆಗೆ ಒಳಗಾಗುತ್ತಿವೆ. ಹೀಗಾಗಿ ಗ್ರಾಮಸ್ಥರು ಇಡೀ ಗ್ರಾಮವನ್ನೇ ಸ್ಥಳಾಂತರಿಸುವಂತೆ ಬೇಡಿಕೆ ಇಟ್ಟಿದ್ದಾರೆ. ಆದರೆ ಗ್ರಾಮವನ್ನು ಸ್ಥಳಾಂತರಿಸಲು 40 ಎಕರೆ ಜಾಗ ಬೇಕು. ಅದು ಸಾಧ್ಯವಿಲ್ಲ. ಆದ್ದರಿಂದ ಸಮಸ್ಯೆಗೆ ಶಾಶ್ವತ ಪರಿಹಾರ ದೊರಕಿಸುವ ಸಲುವಾಗಿ ಮುಳುಗಡೆಯಾಗುವ ಮನೆಗಳ ನಿವಾಸಿಗಳಿಗೆ ಮನೆ ನಿರ್ಮಿಸಿಕೊಡಲು ಕಂದಾಯ ಇಲಾಖೆ 10 ಎಕರೆ ಜಾಗ ಗುರ್ತಿಸಿದೆ. ಅಲ್ಲದೆ ಪ್ರವಾಹಕ್ಕೆ ಸಿಲುಕಿದ ಮನೆಗಳಿಗೆ ರಾಜ್ಯ ಸರ್ಕಾರದಿಂದ ತಲಾ 50 ಸಾವಿರ ಪರಿಹಾರ ಧನ ಸಿಗಲಿದೆ ಎಂದರು.



ಕಪಿಲಾ ನದಿ ಪ್ರವಾಹಕ್ಕೆ ಸಿಲುಕಿ ತೊಂದರೆಗೊಳಗಾದ ಬಡಾವಣೆಗಳನ್ನು ಸಚಿವ ಮಹದೇವಪ್ಪ ಪರಿಶೀಲಿಸಿದರು.

ಈ ಬಾರಿ ವಾಡಿಕೆಗಿಂತ ಶೇ.85 ರಷ್ಟು ಹೆಚ್ಚು ಮಳೆಯಾಗಿದೆ. ಕಬಿನಿಯಿಂದ ನದಿಗೆ 1 ಲಕ್ಷ ಕ್ಯೂಸೆಕ್ ನೀರು ಬಿಟ್ಟಾಗಲ್ಲೆಲ್ಲಾ ಗ್ರಾಮಸ್ಥರು ತೊಂದರೆಗೆ ಸಿಲುಕುತ್ತಾರೆ. ಗ್ರಾಮಕ್ಕೆ ಸಿಎಂ ಸಿದ್ದರಾಮಯ್ಯ ಭೇಟಿ ನೀಡಬೇಕಿತ್ತು. ಆದರೆ ಶಿರಾಡಿಘಾಟ್‌ನಲ್ಲಿ ಗುಡ್ಡಗಳು ಕುಸಿದಿರುವುದರಿಂದ ಅಲ್ಲಿಗೆ ತೆರಳಿದ್ದಾರೆ. ಶಾಸಕ ಡಾ.ಯತೀಂದ್ರ ಹಾಗೂ ನನ್ನನ್ನು ಭೇಟಿ ನೀಡಿ ಕ್ಷೇತ್ರದ ಜನರ ಅಹವಾಲು ಆಲಿಸುವಂತೆ ತಿಳಿಸಿದ್ದಾರೆ. ಪ್ರವಾಹದಿಂದ ತೊಂದರೆಗೊಳಗಾದ 80 ಕುಟುಂಬಗಳಿಗೆ ಕಾಳಜಿ ಕೇಂದ್ರದಲ್ಲಿ ಆಶ್ರಯ ನೀಡಲಾಗಿದೆ. ಊಟ, ತಿಂಡಿ ಹಾಗೂ ಆರೋಗ್ಯ ತಪಾಸಣೆ ನಡೆಸಲಾಗುತ್ತಿದೆ. ಶೀಘ್ರವೇ ಸಂತ್ರಸ್ತರಿಗೆ ಪರಿಹಾರ ದೊರಕಲಿದೆ ಎಂದರು.

ನೆರೆಯಿಂದ ರಾಜ್ಯಾದ್ಯಂತ 365 ಮನೆಗಳಿಗೆ ಹಾನಿಯಾಗಿದೆ. 1321 ಶಾಲೆಗಳು, 58 ಅಂಗನವಾಡಿ, 58 ಕಿಮೀ ರಸ್ತೆ ಹಾಳಾಗಿದೆ. ಅಲ್ಲದೆ 3 ಹಸು, ಒಬ್ಬ ವ್ಯಕ್ತಿ ಮೃತಪಟ್ಟಿದ್ದಾರೆ. ಸಣ್ಣ ಪ್ರಮಾಣದಲ್ಲಿ ಹಾನಿಯಾಗಿರುವ 268 ಮನೆಗಳಿಗೆ ರಾಷ್ಟ್ರೀಯ ವಿಪತ್ತು ನಿಧಿ ನಿಯಮಾವಳಿಯನ್ವಯ 6.5 ಸಾವಿರ, ಪೂರ್ಣ ಹಾನಿಯಾದ ಮನೆಗಳಿಗೆ 1.20 ಲಕ್ಷ ಪರಿಹಾರ ನಿಗದಿಪಡಿಸಿದೆ. ಆದರೆ ಸಿಎಂ ಸಿದ್ದರಾಮಯ್ಯ ಇದು ಸಾಕಾಗುವುದಿಲ್ಲ. 50 ಸಾವಿರ ಕೊಡುವಂತೆ ಕೇಂದ್ರಕ್ಕೆ ಪತ್ರ ಬರೆದಿದ್ದಾರೆ. ಸದ್ಯಕ್ಕೆ ಹಾನಿಗೊಳಗಾದ 268 ಮನೆಗಳಿಗೆ 50 ಸಾವಿರ ಪರಿಹಾರ ನೀಡಲಾಗುವುದು. ಪೂರ್ಣ ಹಾನಿಯಾದ ಮನೆಗಳಿಗೆ 1.20 ಲಕ್ಷ ನೀಡುವುದರೊಂದಿಗೆ ರಾಜೀವ್ ಗಾಂಧಿ ವಸತಿ ಯೋಜನೆಯಡಿ ಮನೆ ನಿರ್ಮಿಸಿ ಕೊಡಲಾಗುವುದು ಎಂದರು.

> ತೊಂದರೆಗೊಳಗಾದ 100 ಕುಟುಂಬಗಳಿಗೆ ಮನೆ ನಿರ್ಮಿಸಿಕೊಡಲು ಜಾಗ ಗುರ್ತಿಸಲಾಗಿದೆ. ಸರ್ವೆ ಕಾರ್ಯ ಪ್ರಗತಿಯಲ್ಲಿದ್ದು, ಕಂದಾಯ ಅಧಿಕಾರಿಗಳು ಸಂತ್ರಸ್ತ ಕುಟುಂಬಗಳ ಪಟ್ಟಿ ಮಾಡಿದ್ದು, ಶೀಘ್ರ ಸ್ಥಳಾಂತರ ಮಾಡಲಾಗುವುದು.
> – ಡಾ.ಯತೀಂದ್ರ, ಎಂಎಲ್‌ಸಿ.

ಈ ವೇಳೆ ಜಿಲ್ಲಾಧಿಕಾರಿ ಲಕ್ಷ್ಮೀಕಾಂತ ಜಿ.ರೆಡ್ಡಿ, ಜಿಪಂ ಸಿಇಓ ಗಾಯಿತ್ರಿ, ಎಸಿ ರಕ್ಷಿತ್, ಜಿಪಂ ಕಾರ್ಯದರ್ಶಿ ಕೃಷ್ಣರಾಜು, ತಹಸೀಲ್ದಾರ್ ಶಿವಕುಮಾರ್ ಕಾಸ್ನೂರ್, ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕ ಭೀಮರಾವ್ ವಡ್ಡಾರ್, ತಾಪಂ ಇಓ ಹೆರಾಲ್ಡ್ ರಾಜೇಶ್, ವಾಲ್ಮೀಕಿ ನಿಗಮ ಮಾಜಿ ಅಧ್ಯಕ್ಷ ಹೆಚ್.ಸಿ.ಬಸವರಾಜು, ವಿಶ್ವಕರ್ಮ ನಿಗಮ ಮಾಜಿ ಅಧ್ಯಕ್ಷ ನಂದಕುಮಾರ್, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ರಂಗಸ್ವಾಮಿ, ಮುಖಂಡರಾದ ಇಂಧನ್ ಬಾಬು, ದಕ್ಷಿಣಮೂರ್ತಿ, ಬಿ.ಪಿ.ಮಹದೇವು, ಕೆಂಪಣ್ಣ ಕುಮಾರ್, ಗಿರಿಧರ್, ಅಭಿ, ಕೆಂಪಿಸಿದ್ದನಹುಂಡಿ ಗ್ರಾಪಂ ಅಧ್ಯಕ್ಷ ರವಿ ಸೇರಿದಂತೆ ಇತರರಿದ್ದರು.

ಸಿಎಂ ಸಿದ್ದರಾಮಯ್ಯಗೆ ಅದ್ದೂರಿ ಸ್ವಾಗತ



ಕೆ.ಆರ್.ನಗರಕ್ಕೆ ಆಗಮಿಸಿದ ಸಿಎಂ ಸಿದ್ದರಾಮಯ್ಯ ಅವರನ್ನು ಸನ್ಮಾನಿಸಲಾಯಿತು.


ಕೆ.ಆರ್.ನಗರ, ಆ.3– ಮೈಸೂರಿನಿಂದ ಹಾಸನ ಜಿಲ್ಲೆ ಶಿರಾಡಿಘಾಟ್‌ಗೆ ತೆರಳುವ ಮಾರ್ಗಮಧ್ಯೆ ಕೆ.ಆರ್.ನಗರಕ್ಕೆ ಆಗಮಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಕಾಂಗ್ರೆಸ್ ಮುಖಂಡರು, ಕಾರ್ಯಕರ್ತರು ಅದ್ದೂರಿಯಾಗಿ ಸ್ವಾಗತಿಸಿದರು.

ಪಟ್ಟಣದ ಪುರಸಭೆ ವೃತ್ತದಲ್ಲಿ ಕೆಪಿಸಿಸಿ ಕಾರ್ಯಕಾರಿಣಿ ಸದಸ್ಯ ದೊಡ್ಡಸ್ವಾಮೇಗೌಡ, ತಾಲೂಕು ಕುರುಬರ ಸಂಘದ ಅಧ್ಯಕ್ಷ ಶಿವಣ್ಣ ಮತ್ತಿತರರು ಅಭಿನಂದಿಸಿದರು.

ಜಿಪಂ ಮಾಜಿ ಸದಸ್ಯರಾದ ಜಿ.ಆರ್.ರಾಮೇಗೌಡ, ಶಿವರಾಮು, ನಗರ ಯೋಜನಾ ಪ್ರಾಧಿಕಾರದ ಅಧ್ಯಕ್ಷ ಮಹೇಶ್, ನಿರ್ದೇಶಕರಾದ ಸರಿತಾ, ಸೈಯದ್ ಜಾಬೀರ್, ಪುರಸಭೆ ಸದಸ್ಯರಾದ ಪ್ರಕಾಶ್, ಶಿವಕುಮಾರ್, ಶಂಕರ್, ಸೈಯದ್ ಸಿದ್ದಿಕ್, ಜಾವಿದ್ ಪಾಷ, ಮುಖಂಡರಾದ ನಾಗರಾಜು, ಸುಧಾಕರ್, ಶ್ರೀನಿವಾಸ್, ರಾಜನಾಯಕ, ಎಂ.ಎಸ್.ಅನಂತು, ಕೆ.ಪಿ.ಜಗದೀಶ್, ಕೆ.ಎಂ.ಶ್ರೀನಿವಾಸ್, ರಾಜಯ್ಯ, ಮಹೇಶ್ ಮತ್ತಿತರರಿದ್ದರು.

ಎನ್.ಸಣ್ಣೇಗೌಡ ನಿಧನ

ಹೆಚ್.ಡಿ.ಕೋಟೆ, ಆ.3– ತಾಲೂಕಿನ ಕೆ.ಬೆಳತ್ತೂರು ಗ್ರಾಮದ ನಿವಾಸಿ ಬಿ.ಎನ್.ಸಣ್ಣೇಗೌಡ(73) ಶನಿವಾರ ನಿಧನರಾದರು. ಮೃತರು ಪತ್ನಿ, ಇಬ್ಬರು ಪುತ್ರರು ಹಾಗೂ ಓರ್ವ ಪುತ್ರಿ ಸೇರಿದಂತೆ ಅಪಾರ ಬಂಧುಗಳನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಭಾನುವಾರ ಮಧ್ಯಾಹ್ನ 12 ಗಂಟೆಗೆ ಸ್ವಗ್ರಾಮದಲ್ಲಿ ನಡೆಯಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.



ಸಾಲಬಾಧೆ: ರೈತ ಆತ್ಮಹತ್ಯೆ



ಕೆ.ಆರ್.ನಗರ, ಆ.3– ಸಾಲಬಾಧೆ ತಾಳಲಾರದೆ ರೈತನೋರ್ವ ಕ್ರಿಮಿನಾಶಕ ಸೇವಿಸಿ ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ತಾಲೂಕಿನ ಗಂಧನಹಳ್ಳಿ ಗ್ರಾಮದಲ್ಲಿ ನಡೆದಿದೆ.

ಗ್ರಾಮದ ರೈತ ನಾಗರಾಜ್(42) ಆತ್ಮಹತ್ಯೆ ಮಾಡಿಕೊಂಡವರು. ಈತ ಕೃಷಿ ಚಟುವಟಿಕೆ, ಕುಟುಂಬ ನಿರ್ವಹಣೆಗಾಗಿ 6 ಲಕ್ಷ ರೂ. ಕೈ ಸಾಲ ಮತ್ತು ಚಿಕ್ಕವಡ್ಡರಗುಡಿ ವಿಎಸ್‌ಎಸ್‌ಎನ್‌ನಲ್ಲಿ ಜಮೀನಿನ ಮೇಲೆ 1.20 ಲಕ್ಷ ರೂ. ಸಾಲ ಪಡೆದಿದ್ದರು. ಆದರೆ ಕೃಷಿಯಲ್ಲಿ ನಷ್ಟ ಅನುಭವಿಸಿದ್ದ ನಾಗರಾಜ್ ಅವರು ಆ.2ರಂದು ಕ್ರಿಮಿನಾಶಕ ಸೇವಿಸಿ ಆತ್ಮಹತ್ಯೆಗೆ ಯತ್ನಿಸಿದ್ದರು. ತಕ್ಷಣ ಅವರನ್ನು ಮೈಸೂರಿನ ಕೆ.ಆರ್.ಆಸ್ಪತ್ರೆಗೆ ದಾಖಲಿಸಲಾಗಿತ್ತು. ಆದರೆ ಚಿಕಿತ್ಸೆ ಫಲಕಾರಿಯಾಗದೇ ಸಾವನ್ನಪ್ಪಿದ್ದಾರೆ. ಈ ಸಂಬಂಧ ಕೆಆರ್.ನಗರ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದೆ.

ಸಿಎಂ ವಿರುದ್ಧ ಬಿಜೆಪಿ, ಜೆಡಿಎಸ್ ಹುನ್ನಾರ ನಡೆಯಲ್ಲ

ಜಿಲ್ಲಾ ಕಾಂಗ್ರೆಸ್ ಇತರೆ ಹಿಂದುಳಿದ ವಿಭಾಗದ ಮಾಜಿ ಅಧ್ಯಕ್ಷ ಬಸವಣ್ಣ

ತಿ.ನರಸೀಪುರ, ಆ.3– ಮುಖ್ಯಮಂತ್ರಿ ಸಿದ್ದರಾಮಯ್ಯ ಕಾಂಗ್ರೆಸ್‌ನಲ್ಲಿ ಇರುವವರೆಗೂ ಕಾಂಗ್ರೆಸ್ ಪಕ್ಷವೇ ಅಧಿಕಾರದಲ್ಲಿ ಇರಲಿದ್ದು, ಬಿಜೆಪಿ ಹಾಗೂ ಜೆಡಿಎಸ್ ಹುನ್ನಾರ ನಡೆಯುವುದಿಲ್ಲ ಎಂದು ಜಿಲ್ಲಾ ಕಾಂಗ್ರೆಸ್ ಇತರೆ ಹಿಂದುಳಿದ ವಿಭಾಗದ ಮಾಜಿ ಅಧ್ಯಕ್ಷ ಉಕ್ಕಲಗೆರೆ ಬಸವಣ್ಣ ತಿಳಿಸಿದರು.

ಪಟ್ಟಣದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮೊದಲ ಅವಧಿಯಲ್ಲಿ 5 ವರ್ಷ ಮುಖ್ಯಮಂತ್ರಿಯಾಗಿ ಯಶಸ್ವಿ ಆಡಳಿತ ನಡೆಸಿದ ಸಿದ್ದರಾಮಯ್ಯನವರು ಎಸ್‌ಸಿ/ಎಸ್‌ಟಿ ಹಾಗೂ ಹಿಂದುಳಿದ ವರ್ಗದವರ ಸಂಪೂರ್ಣ ಸಾಲ ಮನ್ನಾ ಮಾಡುವ ಮೂಲಕ ಬಡವರ, ದೀನ ದಲಿತರ ಮುಖ್ಯಮಂತ್ರಿ ಎಂದು ಸಾಬೀತುಪಡಿಸಿದರು. ಕೇಂದ್ರದಲ್ಲಿ 10 ವರ್ಷ ಆಡಳಿತ ನಡೆಸಿದ ಬಿಜೆಪಿ ಹಿಂದುಳಿದವರು ಹಾಗೂ ಪರಿಶಿಷ್ಟರ ಅಭಿವೃದ್ಧಿಗೆ ನಯಾಪೈಸೆ ಬಿಡುಗಡೆ ಮಾಡಲಿಲ್ಲ. ಸಿದ್ದರಾಮಯ್ಯ ನೇತೃತ್ವದಲ್ಲಿ ಕಾಂಗ್ರೆಸ್ ಮುಂದಿನ 10 ವರ್ಷಗಳ ಕಾಲ ರಾಜ್ಯದಲ್ಲಿ ಆಡಳಿತ ನಡೆಸಲಿದೆ. ವಿಪಕ್ಷ ಬಿಜೆಪಿ ಮುಂದಿನ 10 ವರ್ಷ 65 ಸ್ಥಾನಗಳಿಗೆ ತೃಪ್ತಿ ಪಟ್ಟುಕೊಳ್ಳಲಿದೆ ಎಂದು ಭವಿಷ್ಯ ನುಡಿದರು.



ಸುದ್ದಿಗೋಷ್ಠಿಯಲ್ಲಿ ಉಕ್ಕಲಗೆರೆ ಬಸವಣ್ಣ ಮಾತನಾಡಿದರು.

ವಿಶ್ವನಾಥ್ ಮೂಲೆಗುಂಪು: ಮಾಜಿ ಸಚಿವ ವಿಶ್ವನಾಥ್ ಅವರು ಬಿಜೆಪಿಗೆ ಹಿಂಬಾಗಿಲಿನಿಂದ ಹೋಗಿ ಸಾಹಿತ್ಯ ಕ್ಷೇತ್ರದಿಂದ ಎಂಎಲ್‌ಸಿ ಆಗಬೇಕಿತ್ತೆ ಎಂದು ವ್ಯಂಗ್ಯವಾಡಿದ ಅವರು, 2002 ರಲ್ಲಿ ಸಹಕಾರ ಮತ್ತು ಶಿಕ್ಷಣ ಮಂತ್ರಿಯಾಗಿದ್ದ ವಿಶ್ವನಾಥ್ ಮೈಸೂರು, ಚಾಮರಾಜನಗರದಲ್ಲಿ ಹಿಂದುಳಿದ ದಲಿತರ ಸಮಾವೇಶ ಮಾಡಿದ್ದರು. ಕಾಂಗ್ರೆಸ್ ಪಕ್ಷ ಹಾಳಾಗಲು ವಿಶ್ವನಾಥ್ ಕಾರಣ ಎಂದರು.

ಸಿದ್ದರಾಮಯ್ಯನವರನ್ನು ಕಾಂಗ್ರೆಸ್ ಪಕ್ಷಕ್ಕೆ ಕರೆತಂದಿದ್ದೆ ನಾನು ಎಂದು ಹೇಳುವ ವಿಶ್ವನಾಥ್ 2006ರಲ್ಲಿ ಸಿದ್ದರಾಮಯ್ಯ ಜೆಡಿಎಸ್ ಬಿಟ್ಟು ಬಂದಾಗ ಉಪ ಚುನಾವಣೆಯಲ್ಲಿ ಚಾಮುಂಡೇಶ್ವರಿಯಿಂದ ಸ್ಪರ್ಧಿಸಿ ಕೇವಲ 270 ಓಟುಗಳಿಂದ ಗೆದ್ದಿದ್ದರು. ಆಗಲೂ ಬಿಜೆಪಿ–ಜೆಡಿಎಸ್ ಸಮ್ಮಿಶ್ರ ಸರ್ಕಾರ ಇತ್ತು. ತಾನು ಹಿಂದುಳಿದ ವರ್ಗದ ನಾಯಕನಾಗಬೇಕು. ಸಿದ್ದರಾಮಯ್ಯ ಅವರನ್ನು ಮೂಲೆಗುಂಪು ಮಾಡಬೇಕೆಂಬ ಕಾರಣಕ್ಕೆ ಕಾಂಗ್ರೆಸ್‌ಗೆ ಕರೆತಂದು ತಾವೇ ಮೂಲೆಗುಂಪಾಗಿ ಹೋದರು ಎಂದು ವ್ಯಂಗ್ಯವಾಡಿದರು.

ಗೋಷ್ಠಿಯಲ್ಲಿ ಸಂಗೊಳ್ಳಿ ರಾಯಣ್ಣ ಅಭಿವೃದ್ಧಿ ಸಹಕಾರ ಸಂಘದ ಅಧ್ಯಕ್ಷ ಷಣ್ಮುಖ, ಉಪಾಧ್ಯಕ್ಷ ಮಲ್ಲಿಕಾರ್ಜುನಸ್ವಾಮಿ, ಕಾರ್ಯದರ್ಶಿ ನಾಗರಾಜು, ನಿರ್ದೇಶಕ ಬಸವರಾಜು, ದೊಡ್ಡಪುರ ಮಾದೇಗೌಡ, ಸಿ.ನಾಗಣ್ಣ, ಗ್ರಾಪಂ ಮಾಜಿ ಅಧ್ಯಕ್ಷ ಚಿಕ್ಕಣ್ಣ ಹಾಜರಿದ್ದರು.

ಯಾದಗಿರಿ ಪಿಎಸ್ಐ ಸಾವು ಪ್ರಕರಣ

ಕಾಂಗ್ರೆಸ್ ಶಾಸಕ ಚೆನ್ನಾರೆಡ್ಡಿ, ಪುತ್ರ ಪಂಪನಗೌಡ ವಿರುದ್ಧ ಎಫ್ಐಆರ್

ಪ್ರಕರಣ ಸಿಐಡಿ ತನಿಖೆಗೆ

ಬೆಂಗಳೂರು, ಆ.3(ಕೆಎಂಶಿ)– ಯಾದಗಿರಿಯ ಪೊಲೀಸ್ ಸಬ್ಇನ್ಸ್‌ಪೆಕ್ಟರ್ (ಪಿಎಸ್ಐ) ಸಾವು ಪ್ರಕರಣದಲ್ಲಿ ಯಾದಗಿರಿ ಕಾಂಗ್ರೆಸ್ ಶಾಸಕ ಚೆನ್ನಾರೆಡ್ಡಿ ಹಾಗೂ ಅವರ ಪುತ್ರ ಪಂಪನಗೌಡ ಅಲಿಯಾಸ್ ಸನ್ನಿಗೌಡ ವಿರುದ್ಧ ಎಫ್ಐಆರ್ ದಾಖಲಿಸಲಾಗಿದೆ.



ಪರಶುರಾಮ್

ಮೃತ ಪಿಎಸ್ಐ ಪತ್ನಿ ಶ್ವೇತಾ ಅವರು ನೀಡಿದ ದೂರಿನ ಮೇರೆಗೆ ಯಾದಗಿರಿ ಟೌನ್ ಠಾಣೆಯಲ್ಲಿ ಶಾಸಕ ಹಾಗೂ ಅವರ ಪುತ್ರನ ವಿರುದ್ಧ ಭಾರತೀಯ ನ್ಯಾಯ ಸಂಹಿತೆ 108 (3, 5), ಸೆಕ್ಷನ್ 352ರಡಿ ಎಫ್ಐಆರ್ ದಾಖಲಿಸಲಾಗಿದ್ದು, ಈ ಸೆಕ್ಷನ್‌ಗಳು ಜಾಮೀನು ರಹಿತವಾಗಿರುವ ಕಾರಣ ಶಾಸಕರಿಗೆ ಬಂಧನದ ಭೀತಿ ಎದುರಾಗಿದೆ.

ಯಾದಗಿರಿ ಟೌನ್ ಠಾಣೆಯಲ್ಲಿ ಶಾಸಕ ಹಾಗೂ ಅವರ ಪುತ್ರನ ವಿರುದ್ಧ ಪ್ರಕರಣ ದಾಖಲಾದ ಬೆನ್ನಲ್ಲೇ ರಾಜ್ಯ ಸರ್ಕಾರ ಈ ಪ್ರಕರಣದ ತನಿಖೆಯನ್ನು ಸಿಐಡಿಗೆ ವಹಿಸಿದೆ.

ವಿವರ: ಯಾದಗಿರಿ ಠಾಣೆಯ ಸಬ್ ಇನ್ಸ್‌ಪೆಕ್ಟರ್ ಪರಶುರಾಮ್ ಅವರನ್ನು ಸೈಬರ್ ಕ್ರೈಂ ಠಾಣೆಗೆ ವರ್ಗಾವಣೆ ಮಾಡಲಾಗಿತ್ತು. ಎರಡು ದಿನದ ಹಿಂದೆ ಬೀಳ್ಕೊಡುಗೆ ಪಡೆದಿದ್ದ ಅವರು, ನಿನ್ನೆ ಸಂಜೆ ಪೊಲೀಸ್ ಕ್ವಾರ್ಟರ್ಸ್ ನಿವಾಸದಲ್ಲಿ ಹೃದಯಾಘಾತದಿಂದ ಸಾವನ್ನಪ್ಪಿದ್ದರು.

ಪರಶುರಾಮ್ ಅವರು 30 ಲಕ್ಷ ರೂ. ನೀಡಿ ಸಬ್ ಇನ್ಸ್‌ಪೆಕ್ಟರ್ ಹುದ್ದೆ ಪಡೆದಿದ್ದರು. ಅದಕ್ಕಾಗಿ ಬಹಳಷ್ಟು ಸಾಲ ಮಾಡಿಕೊಂಡಿದ್ದರು. ಅದೇ ಠಾಣೆಯಲ್ಲಿ ಮುಂದುವರೆಯಲು ಶಾಸಕ ಚೆನ್ನಾರೆಡ್ಡಿ ಮತ್ತು ಅವರ ಪುತ್ರ ಪಂಪನಗೌಡ ಅವರುಗಳು ಪರಶುರಾಮ್ ಬಳಿ 20 ಲಕ್ಷ ರೂ. ಕೇಳಿದ್ದರು. ಹಣ ಕೊಡದ ಕಾರಣ ಯಾದಗಿರಿ ಠಾಣೆಯಲ್ಲಿ ವರ್ಷ ಪೂರೈಸುವ ಮುನ್ನವೇ ಅವರನ್ನು ಸೈಬರ್ ಕ್ರೈಂ ಠಾಣೆಗೆ ವರ್ಗಾವಣೆ ಮಾಡಲಾಯಿತು. ಇದರಿಂದ ಖಿನ್ನತೆಗೊಳಗಾಗಿದ್ದ ಅವರು, ಹೃದಯಾಘಾತದಿಂದ ಸಾವನ್ನಪ್ಪಿದ್ದಾರೆ ಎಂದು ಅವರ ಪತ್ನಿ ಹಾಗೂ ಸಂಬಂಧಿಕರು ಆರೋಪಿಸಿದ್ದರು. ಅದೇ ವೇಳೆ ಶಾಸಕ ಚೆನ್ನಾರೆಡ್ಡಿ ವಿರುದ್ಧ ಪ್ರಕರಣ ದಾಖಲಿಸಿ ಬಂಧಿಸಬೇಕೆಂದು ಆಗ್ರಹಿಸಿ ದಲಿತ ಸಂಘಟನೆಗಳು ಪ್ರತಿಭಟನೆ ನಡೆಸಿದ್ದವು.

ಆರ್ಚರಿ: ಒಲಿಂಪಿಕ್ಸ್‌ನಿಂದ ದೀಪಿಕಾ ಕುಮಾರಿ ಔಟ್

ಪ್ಯಾರಿಸ್: ಪ್ಯಾರಿಸ್ ಒಲಿಂಪಿಕ್ಸ್‌ನ ಆರ್ಚರಿ ವಿಭಾಗದಲ್ಲಿ ಭರವಸೆ ಮೂಡಿಸಿದ್ದ ದೀಪಿಕಾ ಕುಮಾರಿ ಕ್ವಾರ್ಟರ್ ಫೈನಲ್‌ನಲ್ಲಿ ಹೊರಬಿದ್ದಿದ್ದಾರೆ.



ಕೊರಿಯಾದ ಸುಹ್ಯೆನ್ ನಾಮ್ ಎದುರು ದೀಪಿಕಾ ಪರಾಭವಗೊಂಡಿದ್ದಾರೆ. ಆರಂಭದಲ್ಲಿ ಪ್ರಾಬಲ್ಯ ಮೆರೆದಿದ್ದ ದೀಪಿಕಾ ಕುಮಾರಿ, ಮೊದಲ 2ಸೆಟ್ ಗಳ ಪೈಕಿ 2ರಲ್ಲಿ ಗೆದ್ದಿದ್ದರು. ಆದರೆ 4ನೇ ಸೆಟ್‌ನ 2ನೇ ಹೊಡೆತದಲ್ಲಿ ಎಡವಿದರು. ಈ ಮೂಲಕ ಆರ್ಚರಿ ವಿಭಾಗದಲ್ಲಿ ಭಾರತದ ಪದಕ ಬೇಟೆ ಕೊನೆಗೊಂಡಿದೆ.

ಇದಕ್ಕೂ ಮುನ್ನ ದೀಪಿಕಾ 6–4 ಅಂತರದಿಂದ ಜರ್ಮನಿಯ ಮಿಚೆಲ್ ಕ್ರೊಪ್ಪೆನ್ ವಿರುದ್ಧ ಗೆಲುವು ಸಾಧಿಸಿದ್ದರು. ಆದರೆ ಇಷ್ಟೇ ಅಂತರದಲ್ಲಿ ಕ್ವಾರ್ಟರ್ ಫೈನಲ್ಸ್‌ನಲ್ಲಿ ನಾಮ್ ವಿರುದ್ಧ ಸೋಲು ಕಂಡಿದ್ದಾರೆ. ಸುಹ್ಯೆನ್ ನಾಮ್ ಮಹಿಳೆಯರ ತಂಡದಲ್ಲಿ ಚಿನ್ನ ಗೆದ್ದಿದ್ದರು.

ನೇರ ಸಂದರ್ಶನಕ್ಕೆ ಆಹ್ವಾನ

ಮೈಸೂರು,ಆ.3– ಮೈಸೂರು ವಿಶ್ವವಿದ್ಯಾನಿಲಯದ ಘಟಕ ಕಾಲೇಜುಗಳಲ್ಲಿನ ಸ್ನಾತಕ ವಿಷಯಗಳ (ಖಾಯಂ ಅಧ್ಯಾಪಕರ ಬೋಧನಾ ಕಾರ್ಯಭಾರ ಹೊರತುಪಡಿಸಿ) ಹೆಚ್ಚುವರಿ ಬೋಧನಾ ಕಾರ್ಯಭಾರವನ್ನು ನಿರ್ವಹಿಸಲು ಅತಿಥಿ ಉಪನ್ಯಾಸಕರನ್ನು ಆಯ್ಕೆ ಮಾಡಲು ನೇರ ಸಂದರ್ಶನವನ್ನು ಏರ್ಪಡಿಸಲಾಗಿದೆ.

ಸಂದರ್ಶನವು ಆಗಸ್ಟ್ 6 ರಿಂದ 9 ರವರೆಗೆ ಮತ್ತು ಆಗಸ್ಟ್ 12 ರಂದು ನಡೆಯಲಿದೆ. ಇದಕ್ಕೆ ಸಂಬಂಧಿಸಿದಂತೆ ಸಂಪೂರ್ಣ ವಿವರ ಹಾಗೂ ನಿಗದಿಪಡಿಸಿದ ದಿನಾಂಕಗಳಲ್ಲಿ ಬದಲಾವಣೆಯ ಬಗ್ಗೆ ಮಾಹಿತಿಗಾಗಿ www.uni-mysore.ac.in ಸಂಪರ್ಕಿಸಬಹುದು ಎಂದು ಮೈಸೂರು ವಿಶ್ವವಿದ್ಯಾನಿಲಯದ ಉಪಕುಲಸಚಿವರು(ಸಿಬ್ಬಂದಿ) ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮುಡಾ ಕಚೇರಿ ದೈನಂದಿನ ಕೆಲಸ ನಿರ್ವಹಿಸಲು ಗ್ರೀನ್ ಸಿಗ್ನಲ್

ಮೈಸೂರು, ಆ. 3(ಆರ್‌ಕೆ)– ನಿವೇಶನ ಹಂಚಿಕೆಯಲ್ಲಿ ನಡೆದಿರುವ ಭಾರಿ ಅವ್ಯವಹಾರದ ತನಿಖೆ ನಡೆಯುತ್ತಿರುವ ಹಿನ್ನೆಲೆಯಲ್ಲಿ ಸ್ಥಗಿತಗೊಂಡಿದ್ದ ನಗರಾಭಿವೃದ್ಧಿ ಪ್ರಾಧಿಕಾರ (ಮುಡಾ)ದ ಕಚೇರಿಯ ಎಲ್ಲ ದೈನಂದಿನ ಕೆಲಸ–ಕಾರ್ಯಗಳನ್ನು ನಡೆಸುವಂತೆ ಸರ್ಕಾರ ಗ್ರೀನ್ ಸಿಗ್ನಲ್ ನೀಡಿದೆ.



ನಗರಾಭಿವೃದ್ಧಿ ಇಲಾಖೆ ಅಧೀನ ಕಾರ್ಯದರ್ಶಿ ಕೆ. ಲತಾ ಇಂದು ಈ ಸಂಬಂಧ ಮುಡಾ ಆಯುಕ್ತರಿಗೆ ಪತ್ರ ಬರೆದಿದ್ದು, ಕಚೇರಿಯ ದೈನಂದಿನ ಕೆಲಸ ಕಾರ್ಯಗಳನ್ನು ನಿರ್ವಹಿಸಲು ವಿನಾಯಿತಿ ನೀಡಲಾಗಿದೆ ಎಂದು ತಿಳಿಸಿದ್ದಾರೆ.

ಅದರಂತೆ ಕಂದಾಯ ಪಾವತಿ, ಕಟ್ಟಡ ವಿನ್ಯಾಸ ನಕ್ಷೆಗೆ ಅನುಮೋದನೆ, ಅನ್ಯಕ್ರಾಂತ ಅಭಿಪ್ರಾಯ, ನ್ಯಾಯಾಲಯದ ಪ್ರಕರಣ ಕಡತಗಳು, ಲೋಕ ಅದಾಲತ್ ಪ್ರಕರಣಗಳು ಹಾಗೂ ಮಾಹಿತಿ ಹಕ್ಕು ಪ್ರಕರಣಗಳ ಸಂಬಂಧಿಸಿದಂತೆ ಎಲ್ಲಾ ಸೇವೆಗಳನ್ನು ಮುಂದುವರೆಸಬಹುದೆಂದು ಅವರು ಪತ್ರದಲ್ಲಿ ತಿಳಿಸಿದ್ದಾರೆ.

ದೈನಂದಿನ ಕೆಲಸ ಕಾರ್ಯಗಳಿಗೆ ಅಡಚಣೆಯಾಗದಂತೆ ಕರ್ನಾಟಕ ನಗರಾಭಿವೃದ್ಧಿ ಪ್ರಾಧಿಕಾರಗಳ ಕಾಯ್ದೆ 1987 ಮತ್ತು ಚಾಲ್ತಿಯಲ್ಲಿರುವ ನಿಯಮ/ಮಾರ್ಗಸೂಚಿಗಳು/ನಿರ್ದೇಶನಗಳು ಉಲ್ಲಂಘನೆಯಾಗದಂತೆ ನಿಯಮಾನುಸಾರ ಕಾರ್ಯ ನಿರ್ವಹಿಸುವಂತೆ ಅಧೀನ ಕಾರ್ಯದರ್ಶಿಗಳು ನಿರ್ದೇಶನ ನೀಡಿದ್ದಾರೆ.

ಜುಲೈ 2ರಂದು ಸರ್ಕಾರವು ಆದೇಶ ಹೊರಡಿಸಿ ನಿವೇಶನ ಹಂಚಿಕೆ ಹಗರಣ ಸಂಬಂಧ ತನಿಖೆ ತಂಡ ರಚಿಸಿದ್ದು, ಪ್ರಾಧಿಕಾರದಲ್ಲಿನ ಕಡತ ಪರಿಶೀಲಿಸಿ ಸರ್ಕಾರಕ್ಕೆ ವರದಿ ಸಲ್ಲಿಸುವವರೆಗೆ ಅಥವಾ ಮುಂದಿನ ಆದೇಶದವರೆಗೆ ಮುಡಾ ಕಚೇರಿಯ ದೈನಂದಿನ ಕೆಲಸ–ಕಾರ್ಯಗಳನ್ನು ಸ್ಥಗಿತಗೊಳಿಸುವಂತೆ ನಿರ್ದೇಶನ ನೀಡಿತ್ತು.

ಸಭೆಗಳು, ಪ್ರಸ್ತುತ ಹಂತದಲ್ಲಿರುವ ಕಡತಗಳ ತೀರ್ಮಾನ, ಈ ಹಿಂದೆ ಸಾಮಾನ್ಯ ಸಭೆಯಲ್ಲಿ ಕೈಗೊಂಡ ತೀರ್ಮಾನದ ಜಾರಿ, ನಿವೇಶನ ವಿಲೇವಾರಿಯಂತಹ ಎಲ್ಲಾ ಪ್ರಕ್ರಿಯೆಗಳನ್ನು ಸ್ಥಗಿತಗೊಳಿಸುವಂತೆ ಸರ್ಕಾರ ಕಟ್ಟುನಿಟ್ಟಿನ ಆದೇಶ ನೀಡಿದ್ದನ್ನು ಇಲ್ಲಿ ಸ್ಮರಿಸಬಹುದಾಗಿದೆ.

ಆಶಾ ಕಾರ್ಯಕರ್ತೆಯರ ಬೇಡಿಕೆ ಈಡೇರಿಕೆಗೆ ಒತ್ತಾಯ

ಮೈಸೂರು,ಆ.3(ಎಂಟಿವೈ)– ಆಶಾ ಕಾರ್ಯ ಕರ್ತೆಯರ ಬೇಡಿಕೆ ಈಡೇರಿಸಿ, ಸರ್ಕಾರಿ ನೌಕರರೆಂದು ಪರಿಗಣಿಸಿ ಶಾಸನಬದ್ಧ ಸೌಲಭ್ಯ ಒದಗಿಸಬೇಕು ಎಂದು ಎಐಯುಟಿಯುಸಿ ಕಾರ್ಯ ದರ್ಶಿ ಎಂ.ಉಮಾದೇವಿ ಒತ್ತಾಯಿಸಿದ್ದಾರೆ.



ಮೈಸೂರಿನ ಖಾಸಗಿ ಹೋಟೆಲ್ ಸಭಾಂಗಣದಲ್ಲಿ ನಡೆದ ಮೈಸೂರು ನಗರ ಆಶಾ ಕಾರ್ಯಕರ್ತೆಯರ ಸಮ್ಮೇಳನಕ್ಕೆ ಎಐಯುಟಿಯುಸಿ ಕಾರ್ಯದರ್ಶಿ ಎಂ.ಉಮಾದೇವಿ ಚಾಲನೆ ನೀಡಿದರು.

ಕರ್ನಾಟಕ ರಾಜ್ಯ ಸಂಯುಕ್ತ ಆಶಾ ಕಾರ್ಯಕರ್ತೆಯರ ಸಂಘ, ಮೈಸೂರು ನಗರ ಆಶಾ ಕಾರ್ಯಕರ್ತೆಯರ ಸಂಘ ಹಾಗೂ ಆಲ್ ಇಂಡಿಯಾ ಯುನೈಟೆಡ್ ಟ್ರೇಡ್ ಯೂನಿಯನ್ ಸೆಂಟರ್ (ಎಐಯುಟಿಯುಸಿ) ಸಂಯುಕ್ತಾಶ್ರಯದಲ್ಲಿ ಮೈಸೂರಿನ ಖಾಸಗಿ ಹೋಟೆಲ್ ಸಭಾಂಗಣದಲ್ಲಿ ಆಯೋಜಿಸಿದ್ದ 'ಮೈಸೂರು ನಗರ ಆಶಾ ಕಾರ್ಯಕರ್ತೆಯರ ಪ್ರಥಮ ಸಮ್ಮೇಳನ'ವನ್ನು ಉದ್ಘಾಟಿಸಿ ಮಾತನಾಡಿದ ಅವರು, ಆಶಾ ಕಾರ್ಯಕರ್ತೆಯರು ಸಮಾಜದ ಆರೋಗ್ಯ ಕಾಪಾಡುವಲ್ಲಿ ಅವಿರತವಾಗಿ ಶ್ರಮಿಸುತ್ತಿದ್ದಾರೆ. ಸರ್ಕಾರ ನೀಡುವ ಗೌರವ ಧನ ಯಾವುದಕ್ಕೂ ಸಾಲದಂತೆ ಇದ್ದರೂ, ಸೇವಾ ಮನೋಭಾವದಿಂದ ಜನರ ಆರೋಗ್ಯ ಕಾಪಾಡುವಲ್ಲಿ ಮಗ್ನರಾಗಿದ್ದಾರೆ. ಆದರೂ ಸರ್ಕಾರ ಆಶಾ ಕಾರ್ಯಕರ್ತೆಯರ ಹಿತ ಕಾಯುವಲ್ಲಿ ವಿಫಲವಾಗಿದೆ. ಅವರಿಗೆ ಸಿಗಬೇಕಾದ ಸವಲತ್ತು ನೀಡುವಲ್ಲಿ ಮೀನಾ ಮೇಷ ಎಣಿಸುತ್ತಿದೆ ಎಂದು ಕಿಡಿಕಾರಿದರು.

ಕೊರೊನಾ ಸಂದರ್ಭದಲ್ಲಿ ತಮ್ಮ ಜೀವವನ್ನೇ ಪಣಕ್ಕಿಟ್ಟು ಸೇವೆ ಸಲ್ಲಿಸಿದ ಆಶಾ ಕಾರ್ಯಕರ್ತೆಯರನ್ನು ವಿಶ್ವ ಆರೋಗ್ಯ ಸಂಸ್ಥೆ 'ಜಾಗತಿಕ ಆರೋಗ್ಯ ನಾಯಕರು' ಎಂದು ಬಣ್ಣಿಸುವ ಮೂಲಕ ಅವರ ಸೇವೆಯನ್ನು ಗೌರವಿಸಿದೆ. ಆದರೆ, ಸರ್ಕಾರದ ನಿರ್ಲಕ್ಷ್ಯ ಧೋರಣೆಯಿಂದ ಆಶಾ ಕಾರ್ಯಕರ್ತೆಯರು ಸಂಕಷ್ಟದಲ್ಲಿ ಸಿಲುಕಿದ್ದಾರೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಇನ್ನಾದರೂ ಸರ್ಕಾರಗಳು ಆಶಾ ಕಾರ್ಯಕರ್ತೆಯರ ಹಿತ ಕಾಯಲು ಮುಂದಾಗಬೇಕು. ಆಶಾಗಳನ್ನು ಸರ್ಕಾರಿ ನೌಕರರೆಂದು ಪರಿಗಣಿಸಿ, ಶಾಸನಬದ್ಧ ಸೌಲಭ್ಯಗಳನ್ನು ಒದಗಿಸಬೇಕು. ಸಾಮಾಜಿಕ ಭದ್ರತೆ ಖಾತ್ರಿಪಡಿಸಬೇಕು. ಸಾರ್ವಜನಿಕ ಆರೋಗ್ಯ ಬಲಪಡಿಸಲು ಅಗತ್ಯವಿರುವಷ್ಟು ಬಜೆಟ್ ಒದಗಿಸಬೇಕು. ಕೇಂದ್ರ ಹಾಗೂ ರಾಜ್ಯ ಸರ್ಕಾರಗಳಿಂದ ಆಶಾಗಳಿಗೆ ಮಾಸಿಕ 15 ಸಾವಿರ ರೂ ಪ್ರೋತ್ಸಾಹ ಧನ ದೊರೆಯುವಂತೆ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಕರ್ನಾಟಕ ರಾಜ್ಯ ಸಂಯುಕ್ತ ಆಶಾ ಕಾರ್ಯ ಕರ್ತೆಯರ ಸಂಘದ ನಗರ ಸಲಹೆಗಾರರಾದ ಸೀಮಾ, ಕರ್ನಾಟಕ ರಾಜ್ಯ ಸಂಯುಕ್ತ ಆಶಾ ಕಾರ್ಯಕರ್ತೆಯರ ಸಂಘದ ರಾಜ್ಯ ಖಜಾಂಚಿ ಸಂಧ್ಯಾ ಪಿ.ಎಸ್. ಮಾತನಾಡಿದರು. ಸಮ್ಮೇಳನದಲ್ಲಿ ಆಲ್ ಇಂಡಿಯಾ ಯುನೈಟೆಡ್ ಟ್ರೇಡ್ ಯೂನಿಯನ್ ಸೆಂಟರ್(ಎಐಯುಟಿಯುಸಿ) ಜಿಲ್ಲಾ ಕಾರ್ಯದರ್ಶಿ ಚಂದ್ರಶೇಖರ್, ನಗರ ಆಶಾ ಕಾರ್ಯಕರ್ತೆಯರ ಸಂಘದ ಶೋಭಾ, ಸುನೀತಾ, ಕೋಮಲ ಹಾಗೂ ಇನ್ನಿತರರು ಉಪಸ್ಥಿತರಿದ್ದರು.

ಮೈಸೂರು ಚಿತ್ರಮಂದಿರಗಳಲ್ಲಿ

ಪದ್ಮ ಚಿತ್ರಮಂದಿರ	(ದೂ: 2521923)
ಪೇಚಿ (ತ)	4 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್ ಚಿತ್ರಮಂದಿರ	(ದೂ: 2422871)
ರಾಯನ್ (ತ)	4 ಪ್ರದರ್ಶನಗಳು
ಬಾಲಾಜಿ ಚಿತ್ರಮಂದಿರ	(ದೂ: 2497199)
ಔರಾನ್ ಮೇ ಕಹಾನ್ ದಮ್ ಥಾ (ಹಿಂ)	4 ಪ್ರದರ್ಶನಗಳು
ಮಹದೇಶ್ವರ ಚಿತ್ರಮಂದಿರ	(ಮೊ:9900820093)
ಕಲ್ಕಿ (ಕ)	4 ಪ್ರದರ್ಶನಗಳು
ಗಾಯಿತ್ರಿ	
ಫ್ಯಾಮಿಲಿ ಡ್ರಾಮಾ (ಕ)	4 ಪ್ರದರ್ಶನಗಳು
ರಾಜಕಮಲ್	
ಬೋಟ್ (ತ)	4 ಪ್ರದರ್ಶನಗಳು
ಸಂಗಂ	
ಪೇಚಿ (ತ)	4 ಪ್ರದರ್ಶನಗಳು
ಲಿಡೋ	
ಹೆಬ್ಬುಲಿ (ಕ)	4 ಪ್ರದರ್ಶನಗಳು
ತಿಬ್ಬಾದೇವಿ	
ಪೇಚಿ (ತ)	4 ಪ್ರದರ್ಶನಗಳು
ಪ್ರಭಾ	
ಅಡವಿಕಟ್ಟೆ (ಕ)	2 ಪ್ರದರ್ಶನಗಳು
ಇಷ್ಕ್ (ಕ)	2 ಪ್ರದರ್ಶನಗಳು

ಡಿಆರ್‌ಸಿ ಸಿನಿಮಾಸ್
ದೂ : 4240422/4241800

ಸ್ಕ್ರೀನ್ 1	ರಾಯನ್ (ತ): ಬೆ.10.40ಕ್ಕೆ, ಮ.1.30ಕ್ಕೆ, ರಾ.10ಕ್ಕೆ, ಔರಾನ್ ಮೇ ಕಹಾನ್ ದಮ್ ಥಾ (ಹಿಂ): ಸಂ.4.20ಕ್ಕೆ, ರಾ.7.10ಕ್ಕೆ.
ಸ್ಕ್ರೀನ್ 2	ಮರ್ಫಿ ಪಿಡಿಕಥಾ ಮನಿಥನ್ (ತ): ಮ.1ಕ್ಕೆ, ಕಲ್ಕಿ 2898 ಎಡಿ(3ಡಿ) (ತೆ): ಮ.3.35ಕ್ಕೆ, ಕಲ್ಕಿ 2898 ಎಡಿ (ಕ): ರಾ.7ಕ್ಕೆ, ಔರಾನ್ ಮೇ ಕಹಾನ್ ದಮ್ ಥಾ (ಹಿಂ): ಬೆ.10.25ಕ್ಕೆ.
ಸ್ಕ್ರೀನ್ 3	ಇಷ್ಕ್ (ಕ): ಬೆ.10.45ಕ್ಕೆ, ಹೆಬ್ಬುಲಿ (ಕ): ಮ.1.40ಕ್ಕೆ, ಬಡ್ಡಿ (ತೆ): ಸಂ.4.30ಕ್ಕೆ, ಶಿವಂ ಭಜೆ (ತೆ): ರಾ.7.20ಕ್ಕೆ, ರೂಪಾಂತರ (ಕ): ರಾ.9.55ಕ್ಕೆ.
ಸ್ಕ್ರೀನ್ 4	ಡೆಡ್‌ಪೂಲ್ ಅಂಡ್ ವೊಲ್ವೆರಿನ್ (3ಡಿ)(ಇಂ): ಬೆ.10.45ಕ್ಕೆ, ಮ.1.30ಕ್ಕೆ, ಸಂ.4.15ಕ್ಕೆ, ರಾ.7ಕ್ಕೆ, ರಾ.9.45ಕ್ಕೆ.

ಐನಾಕ್ಸ್ ಮೂವೀಸ್
INOX LIVE THE MOVIE
ದೂ : 2533444 / 2433456

ಸ್ಕ್ರೀನ್ 1	ಬ್ಯಾಡ್ ನ್ಯೂಸ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4ಕ್ಕೆ, ರಾ.7ಕ್ಕೆ, ರಾ.10ಕ್ಕೆ.
ಸ್ಕ್ರೀನ್ 2	ಕಲ್ಕಿ 2898 ಎಡಿ (ಕ): ಬೆ.11.40ಕ್ಕೆ, ಸಂ.6.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.3.20ಕ್ಕೆ, ರಾ.9.45ಕ್ಕೆ.
ಸ್ಕ್ರೀನ್ 3	ಇಂಡಿಯನ್ 2 (ತ): ಬೆ.9.40ಕ್ಕೆ, ಸಂ.4.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.1.20ಕ್ಕೆ, ರಾ.7.45ಕ್ಕೆ, ಡಾರ್ಲಿಂಗ್ ವೈ ದಿಸ್ ಕೊಲವರಿ (ತೆ): ರಾ.10.30ಕ್ಕೆ.
ಸ್ಕ್ರೀನ್ 4	ವಿದ್ಯಾರ್ಥಿ ವಿದ್ಯಾರ್ಥಿನಿಯರೇ (ಕ): ಬೆ.11.30ಕ್ಕೆ, ಕಲ್ಕಿ 2898 ಎಡಿ (3ಡಿ)(ತೆ): ಮ.2.50ಕ್ಕೆ, ಹಿರಣ್ಯ (ಕ): ಸಂ.6.30ಕ್ಕೆ, ಕಲ್ಕಿ 2898 ಎಡಿ (ಹಿಂ): ರಾ.9.30ಕ್ಕೆ.

ಮೈಸೂರು ವಿಷನ್ ಸಿನಿಮಾ
ದೂ : 0821–2973519

ಸ್ಕ್ರೀನ್ 1	ರೂಪಾಂತರ (ಕ): ಬೆ.10.35ಕ್ಕೆ, ಲವ್ ಲಿ (ಕ): ಮ.1ಕ್ಕೆ, ಕೆಂಡ (ಕ): ಮ.3.50ಕ್ಕೆ, ಫ್ಯಾಮಿಲಿ ಡ್ರಾಮ (ಕ): ಸಂ.6.25ಕ್ಕೆ, ವಿದ್ಯಾರ್ಥಿ ವಿದ್ಯಾರ್ಥಿನಿಯರೆ (ಕ): ರಾ.9.15ಕ್ಕೆ.
ಸ್ಕ್ರೀನ್ 2	ಡೆಡ್‌ಪೂಲ್ ಅಂಡ್ ವೊಲ್ವೆರಿನ್ (3ಡಿ)(ಇಂ): ಬೆ.10.30ಕ್ಕೆ, ರಾ.7ಕ್ಕೆ, ರಾಯನ್ (ತೆ): ಮ.1.15ಕ್ಕೆ, ಸಂ.4.10ಕ್ಕೆ, ರಾ.9.30ಕ್ಕೆ.
ಸ್ಕ್ರೀನ್ 3	ಡೆಡ್‌ಪೂಲ್ ಅಂಡ್ ವೊಲ್ವೆರಿನ್ (3ಡಿ)(ಇಂ): ಮ.1.25ಕ್ಕೆ, ಸಂ.4ಕ್ಕೆ, ರಾ.9.20ಕ್ಕೆ, ರಾಯನ್ (ತ): ಸಂ.6.30ಕ್ಕೆ.
ಸ್ಕ್ರೀನ್ 4	ರಾಯನ್ (ತ): ಬೆ.10.30ಕ್ಕೆ, ಕಲ್ಕಿ 2898 ಎಡಿ (ಕ): ಮ.1.15ಕ್ಕೆ, ರೂಪಾಂತರ (ಕ): ಸಂ.4.35ಕ್ಕೆ, ರಾ.9ಕ್ಕೆ, ರುದ್ರವೀಣ (ತೆ): ರಾ.7ಕ್ಕೆ.

ಪಿವಿಆರ್ ಸಿನಿಮಾಸ್
ನೆಕ್ಸಸ್ ಸೆಂಟರ್‌ಸಿಟಿ ಮಾಲ್,
2ನೇ ಮಹಡಿ, ಮೊ.ನಂ: 8951357139

ಕಿಂಗ್‌ಡಮ್ ಆಫ್ ದಿ ಪ್ಲಾನೆಟ್ ಆಫ್ ದಿ ಎಪಿಸ್ (ಇಂ): ಬೆ.10ಕ್ಕೆ, ಮ.1.05ಕ್ಕೆ, ಸಂ.4.10ಕ್ಕೆ, ರಾ.7.20ಕ್ಕೆ, ರಾ.10.30ಕ್ಕೆ, ಶ್ರೀಕಾಂತ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4.25ಕ್ಕೆ, ರಾ.7ಕ್ಕೆ, ರಾ.10.15ಕ್ಕೆ, ಸ್ಟಾರ್ (ತ): ಬೆ.11.45ಕ್ಕೆ, ಮ.3.05ಕ್ಕೆ, ಸಂ.6.25ಕ್ಕೆ, ರಾ.9.45ಕ್ಕೆ, ಅರಮನೈ 4 (ತ): ಮ.12.30ಕ್ಕೆ, ಪ್ರತಿನಿಧಿ 2 (ತೆ): ಮ.12.55ಕ್ಕೆ, ರಾ.9.15ಕ್ಕೆ, ರಾಮನ ಅವತಾರ (ಕ): ಮ.3.40ಕ್ಕೆ, ಅಂಜನೀಪುತ್ರ (ಕ): ಸಂ.4ಕ್ಕೆ, ಗ್ರೇ ಗೇಮ್ಸ್ (ಕ): ಸಂ.6.35ಕ್ಕೆ, ಕೃಷ್ಣಮ್ಮ (ತೆ): ರಾ.7.25ಕ್ಕೆ, ಮಾರಿವಿಲ್ಲಿನ್ ಗೋಪುರಂಗಲ್ (ಮ): ರಾ.10ಕ್ಕೆ.

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ಮನು ಭಾಕರ್ ಹ್ಯಾಟ್ರಿಕ್ ಪದಕದ ಕನಸು ಭಗ್ನ

ಪ್ಯಾರಿಸ್, ಆ.3– ಪ್ಯಾರಿಸ್ ಒಲಿಂಪಿಕ್ಸ್‌ನಲ್ಲಿ ಭಾರತದ ಯಂಗ್ ಶೂಟರ್ ಮನು ಭಾಕರ್ ಅಭಿಯಾನ ಅಂತ್ಯವಾಗಿದ್ದು, ಕೂದಲೆಳೆ ಅಂತರದಲ್ಲಿ ಭಾರತಕ್ಕೆ ಮತ್ತೊಂದು ಪದಕ ಮಿಸ್ ಆಗಿದೆ.




ಈ ಹಿಂದೆ ಏರ್ ಪಿಸ್ತೂಲ್ ಸ್ಪರ್ಧೆಗಳಲ್ಲಿ ಕಂಚಿನ ಪದಕ ಗೆದ್ದಿದ್ದ ಮನು ಭಾಕರ್, ಈ ಬಾರಿ 4ನೇ ಸ್ಥಾನ ಪಡೆಯುವ ಮೂಲಕ 3ನೇ ಪದಕ ಕೂದಲೆಳೆ ಅಂತರದಲ್ಲಿ ಮಿಸ್ ಆಗಿದೆ. ಆ ಮೂಲಕ ಮನು ಭಾಕರ್ ಹ್ಯಾಟ್ರಿಕ್ ಪದಕದ ಕನಸು ನುಚ್ಚು ನೂರಾಯಿತು.

ಫ್ರಾನ್ಸ್‌ನ ಚಟೌರೌಕ್ಸ್‌ನಲ್ಲಿ ನಡೆದ ಮಹಿಳೆಯರ 25 ಮೀಟರ್ ಪಿಸ್ತೂಲ್ ಸ್ಪರ್ಧೆಯಲ್ಲಿ ಆರಂಭದಲ್ಲಿ 4ನೇ ಸ್ಥಾನ ಪಡೆಯುವ ಮೂಲಕ 3ನೇ ಪದಕಕ್ಕೆ ಕೊರಳೊಡ್ಡುವ ಅವಕಾಶ ತಪ್ಪಿಸಿಕೊಂಡರು. ಫೈನಲ್ ಸುತ್ತಿನ ಆರಂಭದಲ್ಲಿ ಮುನ್ನಡೆ ಪಡೆದಿದ್ದ ಮನು, ಎಲಿಮಿನೇಷನ್ ಸುತ್ತಿನಲ್ಲಿ 4ನೇ ಸ್ಥಾನಕ್ಕೆ ತೃಪ್ತಿಪಟ್ಟುಕೊಂಡರು. ಇದರೊಂದಿಗೆ ಮೂರನೇ ಪದಕ ಗೆಲ್ಲುವ ಅವರ ಕನಸು ಕಮರಿದೆ.

ಫೈನಲ್‌ನಲ್ಲಿ ಮನು ಭಾಕರ್ 28 ಅಂಕಗಳೊಂದಿಗೆ 4ನೇ ಸ್ಥಾನ ಪಡೆದರೆ, ಕಂಚಿನ ಪದಕ ಗೆದ್ದ ಹಂಗೇರಿಯಾದ ಮೇಜರ್ ವೆರೋನಿಕಾ 31 ಪಾಯಿಂಟ್ಸ್ ಕಲೆ ಹಾಕಿದ್ದರು.

ದಕ್ಷಿಣ ಕೊರಿಯಾದ ಜಿ ಯಾಂಗ್ 37 ಅಂಕಗಳೊಂದಿಗೆ ಅಗ್ರಸ್ಥಾನ ಪಡೆದು ಚಿನ್ನದ ಪದಕಕ್ಕೆ ಕೊರಳೊಡ್ಡಿದರೆ, 37 ಅಂಕಗಳೊಂದಿಗೆ ಫ್ರಾನ್ಸ್‌ನ ಕ್ಯಾಮಿಲ್ಲೆ ಜೆಡ್ರೆಜೆವ್ಸ್ಕಿ ಬೆಳ್ಳಿ ಪದಕಕ್ಕೆ ಭಾಜನರಾದರು. 31 ಅಂಕಗಳೊಂದಿಗೆ ಹಂಗೇರಿ ಮೂಲದ ಶೂಟರ್ ಮೇಜರ್ ವೆರೋನಿಕಾ 3ನೇ ಸ್ಥಾನ ಪಡೆದು ಕಂಚಿನ ಪದಕ ತಮ್ಮದಾಗಿಸಿಕೊಂಡರು. 28 ಅಂಕಗಳನ್ನು ಪಡೆದ ಭಾರತದ ಮನುಭಾಕರ್ 4ನೇ ಸ್ಥಾನ ಪಡೆಯುವ ಮೂಲಕ ತಮ್ಮ ಒಲಿಂಪಿಕ್ಸ್ ಅಭಿಯಾನ ಮುಗಿಸಿದ್ದಾರೆ.

ನಾಳೆ ವಿವಿಧೆಡೆ ವಿದ್ಯುತ್ ವ್ಯತ್ಯಯ



ಮೈಸೂರು,ಆ.3– ಸಿಂಧುವಳ್ಳಿ ಫೀಡರ್‌ನಲ್ಲಿ ತುರ್ತು ನಿರ್ವಹಣಾ ಕಾಮಗಾರಿ ನಿಮಿತ್ತ ಆಗಸ್ಟ್ 5 ರಂದು ಬೆಳಿಗ್ಗೆ 10 ರಿಂದ ಸಂಜೆ 6 ಗಂಟೆಯವರೆಗೆ ಬ್ಯಾತಹಳ್ಳಿ, ಸಿಂಧುವಳ್ಳಿ, ಚಿಕ್ಕಕಾನ್ಯ, ದೊಡ್ಡಕಾನ್ಯ, ದಡದಹಳ್ಳಿ ಹಾಗೂ ಸುತ್ತ–ಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ ಎಂದು ಸೆಸ್ಕ್ ಪ್ರಕಟಣೆ ತಿಳಿಸಿದೆ.